ಬೀದರ | ಕಲಬುರಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಸಾರ Postal Reg. No. BDR/054/2026-2027 Email: mallammanudi@gmail.com E-paper: www.mallammanudi.in

# ಮಲ್ಲಮ್ಮ ನುಡಿ

ಸತ್ಯಮೇವ ಜಯತೆ

ಪ್ರಾದೇಶಿಕ ಕನ್ನಡ ದಿನಪತ್ರಿಕೆ

ಸಂಪಾದಕರು: ರಮೇಶರೆಡ್ಡಿ | 9448 604450

Mallammanudi Regional News Paper | Editor: Ramesh Reddy | RNI NO:KARKAN/2011/48371

VOLUME - 13 ಸಂಪುಟ-13 | ISSUE - 70 ಸಂಚಿಕೆ- 70 | PAGE- 8 ಪುಟ-8 | ಮಂಗಳವಾರ 22.04.2025 | RS.2/- ಬೆಲೆ 2/-

## ಬಿಎಸ್‌ವೈ ವಿರುದ್ಧದ ಭ್ರಷ್ಟಾಚಾರ ಪ್ರಕರಣ

# ವಿಸ್ತೃತ ಪೀಠಕ್ಕೆ ವರ್ಗ



ಮಲ್ಲಮ್ಮ ನುಡಿ ವಾರ್ತೆ
ನವದೆಹಲಿ:ಏ.21: ಅಕ್ರಮ ಡಿನೋಟಿಫಿಕೇಷನ್ ಸೇರಿದಂತೆ ಭ್ರಷ್ಟಾಚಾರ ಪ್ರಕರಣಗಳಲ್ಲಿ ಮಾಜಿ ಸಿಎಂ ಬಿ.ಎಸ್ ಯಡಿಯೂರಪ್ಪ ವಿರುದ್ಧ ತನಿಖೆ ನಡೆಸಲು ಪೂರ್ವಾನುಮತಿ ನೀಡುವ ವಿಚಾರಕ್ಕೆ ಸಂಬಂಧಿಸಿದಂತೆ ಸುಪ್ರೀಂ ಕೋರ್ಟ್ ಮಹತ್ವದ ತೀರ್ಪು ನೀಡಿದೆ. ಸೆಕ್ಷನ್ 17ಂಗೆ ಸಂಬಂಧಿಸಿದ ಸ್ಪಷ್ಟನೆಗಾಗಿ ವಿಸ್ತೃತ ಪೀಠಕ್ಕೆ ಪ್ರಕರಣವನ್ನು ವರ್ಗಾಯಿಸಿದೆ.

ನ್ಯಾ. ಜೆ.ಬಿ ಪಾರ್ದಿವಾಲಾ ನೇತೃತ್ವದ ದ್ವಿ ಸದಸ್ಯ ಪೀಠ ವಿಸ್ತೃತ ವಿಚಾರಣೆ ನಡೆಸಿತ್ತು. ಇಂದು ಈ ಬಗ್ಗೆ ತೀರ್ಪು ನೀಡಿದ ಪೀಠ, ಸುಪ್ರೀಂ ಕೋರ್ಟ್‌ನ ಇಬ್ಬರು ನ್ಯಾಯಾಧೀಶರ ಪೀಠವು ಹಿಂದೆ ಎರಡು ಪ್ರಕರಣಗಳಲ್ಲಿ ಭ್ರಷ್ಟಾಚಾರ ತಡೆ ಕಾಯ್ದೆಯಡಿಯಲ್ಲಿ ಸಾರ್ವಜನಿಕ ಸೇವಕರ ವಿರುದ್ಧ ವಿಚಾರಣೆ ಅಥವಾ ತನಿಖೆಯನ್ನು ಪ್ರಾರಂಭಿಸುವ ಮೊದಲು ಪೂರ್ವಾನುಮತಿ ಪಡೆಯುವ ವಿಷಯದ ಬಗ್ಗೆ ವಿಭಿನ್ನ ತೀರ್ಪು ನೀಡಿವೆ. ಈ ಹಂತದಲ್ಲಿ ಮತ್ತೊಂದು ತೀರ್ಪು ನೀಡುವುದು ಸೂಕ್ತವಲ್ಲ. ಹೀಗಾಗಿ, ಹೆಚ್ಚಿನ ವಿಚಾರಣೆಗಾಗಿ ನಾವು ವಿಸ್ತೃತ ಪೀಠಕ್ಕೆ ವರ್ಗಾಯಿಸುತ್ತಿದ್ದೇವೆ ಎಂದು ಹೇಳಿತು. ಭ್ರಷ್ಟಾಚಾರ ಪ್ರಕರಣದಲ್ಲಿ ಸಾರ್ವಜನಿಕ ಸೇವಕನ ವಿರುದ್ಧ ಕಾನೂನು ಕ್ರಮ ಜರುಗಿಸಲು ಪ್ರಾಥಮಿಕ ಪೂರ್ವಾನುಮೋದನೆಯ ಅನ್ವಯಕ್ಕೆ ಸಂಬಂಧಿಸಿದ ಪ್ರಕರಣ ಇದಾಗಿದ್ದು, ಪೊಲೀಸರು ಯಾವುದೇ ವಿಚಾರಣೆ ಅಥವಾ ತನಿಖೆಯನ್ನು ಪ್ರಾರಂಭಿಸಲು ಅನುಮೋದನೆ ನೀಡುವ ಮೊದಲು ಸೂಕ್ತ ಪ್ರಾಧಿಕಾರ ಅಥವಾ ಸರ್ಕಾರವು ಪರಿಶೀಲಿಸಬೇಕಾದ ಪಿಸಿ ಕಾಯ್ದೆಯ ಸೆಕ್ಷನ್ 17ಂ ನಲ್ಲಿ ಪರಿಗಣಿಸಲಾದ ಸಂಬಂಧಿತ ಪರಿಗಣನೆಗಳು ಯಾವುವು ಎಂಬುದರ ಕುರಿತು ನಿರ್ಣಯಿಸಬೇಕಾದ ಪ್ರಶ್ನೆಗಳನ್ನು ನ್ಯಾಯಾಲಯ ಗಮನಿಸಿತ್ತು. ಯಡಿಯೂರಪ್ಪ ಪರವಾದ ಮಂಡಿಸಿದ್ದ ಹಿರಿಯ ವಕೀಲ ಸಿದ್ಧಾರ್ಥ್ ಲೂತ್ರಾ, ಡಿನೋಟಿಫಿಕೇಷನ್ ಪ್ರಕರಣಗಳಿಗೆ ಸಂಬಂಧಿಸಿದಂತೆ ಎಫ್‌ಐಆರ್‌ಗಳನ್ನು ದಾಖಲಿಸಲಾಗಿದೆ. ಅಪರಾಧ ನಡೆದ ಸಮಯದಲ್ಲಿ ಆರೋಪಿಯು ಸಾರ್ವಜನಿಕ ಸೇವಕನಾಗಿದ್ದರು ಎಂದು ಹೇಳಿದ್ದರು. 2018 ರಲ್ಲಿ ಭ್ರಷ್ಟಾಚಾರ ತಡೆ ಕಾಯ್ದೆಯಲ್ಲಿ ಪರಿಚಯಿಸಲಾದ ಸಾರ್ವಜನಿಕ ಸೇವಕರ ವಿರುದ್ಧ ವಿಚಾರಣೆಗೆ ಕಡ್ಡಾಯ ಪೂರ್ವಾನುಮತಿಗೆ ಸಂಬಂಧಿಸಿದ ಸೆಕ್ಷನ್ 17ಂ ಯ ಅನ್ವಯದ ವಿಷಯವನ್ನು ಲೂಥ್ರಾ ಉಲ್ಲೇಖಿಸಿದರು. ಭಿನ್ನ ತೀರ್ಪುಗಳ ಬಗ್ಗೆಯೂ ಮಾಹಿತಿ ನೀಡಿದ್ದರು.

ಪ್ರಕರಣದ ಹಿನ್ನಲೆ: ಬೆಂಗಳೂರಿನ ಉದ್ಯಮಿ ಎ.ಆಲಂ ಪಾಷಾ ಅವರು ಯಡಿಯೂರಪ್ಪ ವಿರುದ್ಧ ತಾವು ನೀಡಿರುವ ದೂರನ್ನು ಪುನಃಸ್ಥಾಪಿಸುವಂತೆ ಕೋರಿ ಸಲ್ಲಿಸಿದ್ದ ಅರ್ಜಿಯನ್ನು ಕರ್ನಾಟಕ ಹೈಕೋರ್ಟ್ 2021ರ ಜನವರಿ 5 ರಂದು ಮಾನ್ಯ ಮಾಡಿತ್ತು. ಇದನ್ನು ಪ್ರಶ್ನಿಸಿ ಯಡಿಯೂರಪ್ಪ ಅವರು ಸುಪ್ರಿ?ಂ ಕೋರ್ಟ್‌ಗೆ ಮೇಲ್ಮನವಿ ಸಲ್ಲಿಸಿದ್ದರು. ನ್ಯಾಯಮೂರ್ತಿಗಳಾದ ಜೆ.ಬಿ.ಪರ್ದೀವಾಲಾ ಮತ್ತು ನ್ಯಾ. ಮನೋಜ್ ಮಿಶ್ರಾ ಅವರಿದ್ದ ನ್ಯಾಯಪೀಠ ಏಪ್ರಿಲ್ 4ರಂದು ವಿಚಾರಣೆ ಪೂರ್ಣಗೊಳಿಸಿತು.

ಮಾಜಿ ಸಿಎಂ ಯಡಿಯೂರಪ್ಪ, ಮಾಜಿ ಕೈಗಾರಿಕಾ ಸಚಿವ ಮುರುಗೇಶ್ ನಿರಾಣಿ ಮತ್ತು 'ಕರ್ನಾಟಕ ಉದ್ಯೋಗ ಮಿತ್ರ' ಸಂಸ್ಥೆಯ ಮಾಜಿ ವ್ಯವಸ್ಥಾಪಕ

(2ನೇ ಪುಟ ನೋಡಿ)

## ಧರಣಿಯಲ್ಲಿ ಭಾಗವಹಿಸಿ ನ್ಯಾಯ ಒದಗಿಸುವ ಭರವಸೆ ನೀಡಿದ ಮಾಜಿ ಸಚಿವ ರಾಜಶೇಖರ ಪಾಟೀಲ



ಮಲ್ಲಮ್ಮ ನುಡಿ ವಾರ್ತೆ
ಹುಮನಾಬಾದ:ಏ.21:ಭಾರತೀಯ ದಲಿತ್ ಪ್ಯಾಂಥರ್ ತಾಲೂಕ ಶಾಖೆ ವತಿಯಿಂದ ಸಿಂಧನಕೇರಾ ಗ್ರಾಮ ಪಂಚಾಯತ್ ಕಚೇರಿಯಲ್ಲಿ ಡಿಇಓ ಡೇಟಾ ಎಂಟ್ರಿ ಆಪರೇಟರ್ ಆಗಿ ಕೆಲಸ ನಿರ್ವಹಿಸುತ್ತಿದ್ದ ಸುಭಾಷ್ ವೀರಪ್ಪ ಭೂರ್ಲೆಕರ್ ಇವರ ಸಾವಿಗೆ ಕಾರಣರಾದವರ ವಿರುದ್ಧ ತಾಲೂಕು ಪಂಚಾಯತ ಎದುರುಗಡೆ ನಡೆಯುತ್ತಿರುವ ಸಾಂಕೇತಿಕ ಧರಣಿ ಸತ್ಯಾಗ್ರಹದಲ್ಲಿ ಭಾಗವಹಿಸಿದ ಮಾಜಿ ಸಚಿವರಾದ ರಾಜಶೇಖರ ಬಿ ಪಾಟೀಲ್ ರವರು ಮೃತ ಸುಭಾಷ ಭೂರ್ಲೆಕರ್ ಕುಟುಂಬಸ್ಥರಿಗೆ ನ್ಯಾಯ ಒದಗಿಸುವ ನಿಟ್ಟಿನಲ್ಲಿ ಕ್ರಮ ಕೈಗೊಳ್ಳಲಾಗುವುದು ಎಂದು ಭರವಸೆ ನೀಡಿದರು. ಶೀಘ್ರ ಮೃತನ ಕುಟುಂಬಸ್ಥರಿಗೆ ನ್ಯಾಯ ಒದಗಿಸಲು ಪ್ರಾಮಾಣಿಕ ಪ್ರಯತ್ನ ಮಾಡಲಾಗುವುದು ಎಂದು ಆಶ್ವಾಸನೆ ನೀಡಿದರು.

## ಪೋಕ್ಸೋ ಪ್ರಕರಣದ ಆರೋಪಿಗೆ ಗಲ್ಲು ಶಿಕ್ಷೆ



ಮಲ್ಲಮ್ಮನುಡಿವಾರ್ತೆ ಕಲಬುರಗಿ:ಏ.21: ಅಪ್ರಾಪ್ತ ಬಾಲಕಿಯೊರ್ವಳ ಮೇಲೆ ಅತ್ಯಾಚಾರ ಎಸಗಿ ಕೊಲೆ ಮಾಡಿ ಮೃತದೇಹವನ್ನು ಬಾವಿಗೆ ಎಸೆದ ಪ್ರಕರಣಕ್ಕೆ ಸಂಬಂಧಿಸಿದಂತೆ ಇಲ್ಲಿನ ಹೆಚ್ಚುವರಿ ಜಿಲ್ಲಾ ಮತ್ತು ಸೆಷನ್ಸ್ (ವಿಶೇಷ ಪೋಕ್ಸೋ) ನ್ಯಾಯಾಲಯ ಆರೋಪಿಗೆ ಸೋಮವಾರ ಗಲ್ಲು ಶಿಕ್ಷೆ ಹಾಗೂ 1 ಲಕ್ಷ ರೂ. ದಂಡ ವಿಧಿಸಿ ಆದೇಶ ಹೊರಡಿಸಿದೆ.

ಆಳಂದ ತಾಲ್ಲೂಕಿನ ದೇವಂತಗಿ ಗ್ರಾಮದ ಗುಂಡೇರಾವ ಚೋಪಡೆ (28) ಗಲ್ಲುಶಿಕ್ಷೆಗೆ ಒಳಗಾದ ಯುವಕ ಎಂದು ಗುರುತಿಸಲಾಗಿದೆ. ಆಳಂದ ತಾಲ್ಲೂಕಿನ ಗ್ರಾಮವೊಂದರ ಬಾಲಕಿ, 2023ರ ಜುಲೈ 15ರಂದು ಪುಸ್ತಕ ತರಲು ಮತ್ತೊಂದು

(2ನೇ ಪುಟ ನೋಡಿ)

## ಅಸಮಾನತೆ ತೊಡೆದುಹಾಕಿ ಸಂವಿಧಾನದ ಆಶಯಗಳನ್ನು ನಾವು ಎತ್ತಿಹಿಡಿಯಬೇಕು: ಮುಖ್ಯಮಂತ್ರಿ ಸಿದ್ದರಾಮಯ್ಯ



ಮಲ್ಲಮ್ಮ ನುಡಿ ವಾರ್ತೆ
ಬೆಂಗಳೂರು: ಏ.21 :ಸ್ವಾತಂತ್ರ್ಯ, ಸಮಾನತೆ ಹಾಗೂ ಭ್ರಾತೃತ್ವವನ್ನು ಎತ್ತಿ ಹಿಡಿಯುವ ಸಂವಿಧಾನದ ಆಶಯಗಳು ನೆರವೇರಬೇಕೆಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

ಇಂದು ವಿಧಾನಸೌಧದ ಬ್ಯಾಂಕ್ವೆಟ್ ಹಾಲ್‌ನಲ್ಲಿ ರಾಜ್ಯ ಸರ್ಕಾರಿ ನೌಕರರ ದಿನಾಚರಣೆ-2025 ಹಾಗೂ 2023ನೇ ಸಾಲಿನ ರಾಜ್ಯ ಮಟ್ಟದ ಸರ್ವೋತ್ತಮ ಸೇವಾ ಪ್ರಶಸ್ತಿ ಪ್ರದಾನ ಸಮಾರಂಭದ ಉದ್ಘಾಟನೆ ನೆರವೇರಿಸಿ ಮಾತನಾಡಿದರು.

ಪ್ರಜಾಪ್ರಭುತ್ವದಲ್ಲಿ ಶಾಸಕಾಂಗ, ನ್ಯಾಯಾಂಗ ಮತ್ತು ಪತ್ರಕಾರಂಗ ತನ್ನದೇ ಆದ ಧ್ಯೇಯ ಉದ್ದೇಶಗಳನ್ನು ಹೊಂದಿದೆ. ಇದು ಯಾವುದೇ ಒಂದು ಧರ್ಮ, ಜಾತಿಗೆ ಸೀಮಿತವಾಗಿಲ್ಲ. ಎಲ್ಲರನ್ನೂ ಸಮಾನರಾಗಿ ಕಾಣುವ ಗುಣವನ್ನು ನಾವು ಮೈಗೂಡಿಸಿಕೊಳ್ಳಬೇಕು ಎಂದು ತಿಳಿಸಿದರು.

ರಾಜ್ಯದಲ್ಲಿ 5.50 ಲಕ್ಷ ಸರ್ಕಾರಿ ನೌಕರರು ಕರ್ತವ್ಯ ನಿರ್ವಹಿಸುತ್ತಿದ್ದಾರೆ. ಇಂದು ಉತ್ತಮವಾಗಿ ಕೆಲಸ ನಿರ್ವಹಿಸಿದ 30 ಸರ್ಕಾರಿ ನೌಕರರಿಗೆ ಸರ್ಕಾರ ಸರ್ವೋತ್ತಮ ಪ್ರಶಸ್ತಿ ನೀಡಿ ಗೌರವಿಸಿದೆ. ಈ ಪ್ರಶಸ್ತಿ ಇತರರಿಗೆ ಮಾದರಿಯಾಗುವುದಲ್ಲದೇ ಪುರಸ್ಕೃತರ ಮೇಲಿನ ಜವಾಬ್ದಾರಿ ಹೆಚ್ಚಿಸಲಿದೆ ಎಂದರು.

(2ನೇ ಪುಟ ನೋಡಿ)

## ಚಿನ್ನದ ಬೆಲೆಯಲ್ಲಿ ಸಾರ್ವಕಾಲಿಕ ದಾಖಲೆ: 1 ಲಕ್ಷ ರೂ ಸಮೀಪ 10 ಗ್ರಾಂ ಚಿನ್ನ



ಮಲ್ಲಮ್ಮ ನುಡಿ ವಾರ್ತೆ
ನವದೆಹಲಿ:ಏ.21: ದೇಶದ ಆರ್ಥಿಕ ರಾಜಧಾನಿ ಮುಂಬೈನ ಜವೇರಿ ಬಜಾರ್‌ನಲ್ಲಿ ಚಿನ್ನದ ಬೆಲೆ ಸಾರ್ವಕಾಲಿಕ ಗರಿಷ್ಠ ಮಟ್ಟವನ್ನು ತಲುಪಿದೆ. 24 ಕ್ಯಾರೆಟ್ ಶುದ್ಧ 10 ಗ್ರಾಂ ಚಿನ್ನದ ಬೆಲೆ 1 ಲಕ್ಷ ರೂ. ಆಸುಪಾಸಿನಲ್ಲಿದ್ದು, ಇದು ಭಾರತೀಯ ಮಾರುಕಟ್ಟೆಯಲ್ಲಿ ಇದುವರೆಗಿನ ಚಿನ್ನದ ಬೆಲೆಯಲ್ಲಿನ ಅತಿದೊಡ್ಡ ಜಿಗಿತ ಎಂದು ಪರಿಗಣಿಸಲಾಗಿದೆ.

ಭಾರತದಲ್ಲಿ ಚಿನ್ನದ ಬೆಲೆ ಇಂದು ಹೊಸ ಸಾರ್ವಕಾಲಿಕ ಗರಿಷ್ಠ ಮಟ್ಟದಲ್ಲಿದೆ. 24 ಕ್ಯಾ-ರೆಟ್ ಚಿನ್ನವು ಪ್ರತಿ 10 ಗ್ರಾಂಗೆ ಐತಿಹಾಸಿಕ ರೂ.1,00,000 ಮಾರ್ಕ್ ಅನ್ನು ತಲುಪಲು ಈಗ ಕೇವಲ 1,650 ರೂಪಾಯಿ ದೂರದಲ್ಲಿದೆ. ಭಾರತದಲ್ಲಿ ಚಿನ್ನದ ದರದಲ್ಲಿ ಈ ತೀವ್ರ ಏರಿಕೆ ಹೊಸ ವಹಿವಾಟಿನ ವಾರದ ಆರಂಭದಲ್ಲಿ ಬಂದಿದೆ. 10 ಗ್ರಾಂ 24 ಕ್ಯಾರೆಟ್ ಚಿನ್ನದ ಬೆಲೆ ಈಗ 98,350 ರೂ.ಗಳಿಗೆ ತಲುಪಿದ್ದು, 22 ಕ್ಯಾರೆಟ್ ಚಿನ್ನದ ಬೆಲೆ 10 ಗ್ರಾಂಗೆ 90,150 ರೂ. ಗಳಿಗೆ ತಲುಪಿದೆ.

ತಜ್ಞರ ಪ್ರಕಾರ, ಅಂತರರಾಷ್ಟ್ರೀಯ ಮಾರುಕಟ್ಟೆಯಲ್ಲಿ ಚಿನ್ನದ ಬೆಲೆ ಏರಿ-ಕೆಯೇ ಈ ಏರಿಕೆಗೆ ಪ್ರಮುಖ ಕಾರಣ. ಅಮೆರಿಕ ಮತ್ತು ಯುರೋಪ್‌ನಲ್ಲಿ ಬಡ್ಡಿದರ ಕಡಿತದ ಸಾಧ್ಯತೆ, ಡಾಲರ್‌ನಲ್ಲಿನ ದುರ್ಬಲತೆ ಮತ್ತು ಮಧ್ಯಪ್ರಾಚ್ಯದಲ್ಲಿ ನಡೆಯುತ್ತಿರುವ ಭೌಗೋಳಿಕ ರಾಜಕೀಯ ಉದ್ವಿಗ್ನತೆಗಳು ಮತ್ತೊಮ್ಮೆ ಹೂಡಿಕೆದಾರರನ್ನು ಸುರಕ್ಷಿತ ಹೂಡಿಕೆಯಾಗಿ ಚಿನ್ನದತ್ತ ಆಕರ್ಷಿಸಿವೆ.

ಈ ಸುದ್ದಿ ಹೂಡಿಕೆದಾರರಿಗೆ ಲಾಭದಾಯಕವಾಗಿದ್ದರೂ, ಸಾಮಾನ್ಯ ಗ್ರಾಹಕರಿಗೆ ಚಿನ್ನ ಈಗ ಹೆಚ್ಚು ದುಬಾರಿಯಾಗಿದೆ. ವಿಶೇಷವಾಗಿ

(2ನೇ ಪುಟ ನೋಡಿ)

## ಪ್ರಧಾನಿ ನಿವಾಸದಲ್ಲಿ ಮೋದಿ-ವ್ಯಾನ್ಸ್ ಮಾತುಕತೆ



ಮಲ್ಲಮ್ಮ ನುಡಿ ವಾರ್ತೆ
ನವದೆಹಲಿ:ಏ.21: ಪ್ರಧಾನಿ ನರೇಂದ್ರ ಮೋದಿ ಅವರು ಸೋಮವಾರ ಅಮೆರಿಕದ ಉಪಾಧ್ಯಕ್ಷ ಜೆ.ಡಿ.ವ್ಯಾನ್ಸ್, ಅವರ ಪತ್ನಿ ಉಷಾ ವ್ಯಾನ್ಸ್ ಮತ್ತು ಅವರ ಮೂವರು ಮಕ್ಕಳನ್ನು ತಮ್ಮ ಅಧಿಕೃತ ನಿವಾಸದಲ್ಲಿ ಸ್ವಾಗತಿಸಿದರು.

ಇಂದು ಸಂಜೆ ವ್ಯಾನ್ಸ್ ಕುಟುಂಬ, ರಾಷ್ಟ್ರ ರಾಜಧಾನಿಯಲ್ಲಿರುವ ಪ್ರಧಾನಿಯವರ ಅಧಿಕೃತ ನಿವಾಸಕ್ಕೆ ಆಗಮಿಸಿತು. ನಂತರ ಅಮೆರಿಕ ಉಪಾಧ್ಯಕ್ಷರು, ಪ್ರಧಾನಿ ಮೋದಿ ಅವರೊಂದಿಗೆ ದ್ವಿಪಕ್ಷೀಯ ಮಾತುಕತೆ ಆರಂಭಿಸಿದ್ದಾರೆ.

ಅಮೆರಿಕ-ಚೀನಾ ವ್ಯಾಪಾರ ಯುದ್ಧದಿಂದಾಗಿ ನಡೆಯುತ್ತಿರುವ ಜಾಗತಿಕ ಅನಿಶ್ಚಿತತೆಯ ನಡುವೆ ಉಭಯ ನಾಯಕರ ನಡುವಿನ ಮಾತುಕತೆ ಮಹತ್ವ ಪಡೆದುಕೊಂಡಿದ್ದು, ವ್ಯಾಪಾರ ಒಪ್ಪಂದದತ್ತ ಗಮನ ಹರಿಸುವ ಸಾಧ್ಯತೆ ಇದೆ.

ಭಾರತ-ಅಮೆರಿಕ ಜಾಗತಿಕ ಕಾರ್ಯತಂತ್ರದ ಸಂಬಂಧಗಳನ್ನು ಮತ್ತಷ್ಟು ವಿಸ್ತರಿಸುವ ಮಾರ್ಗಗಳ ಕುರಿತು ಹಾಗೂ ವಾಷಿಂಗ್ಟನ್‌ನ ವ್ಯಾಪಾರ ನೀತಿಯ ಬಗ್ಗೆ ಭಾರತದ ಕಳವಳಗಳ ಕುರಿತು ಇಬ್ಬರೂ ನಾಯಕರು ಚರ್ಚಿಸುವ ನಿರೀಕ್ಷೆಯಿದೆ.

ಮಾತುಕತೆಯ ನಂತರ, ಪ್ರಧಾನ ಮಂತ್ರಿಯವರು ವ್ಯಾನ್ಸ್, ಅವರ ಭಾರತೀಯ ಮೂಲದ ಪತ್ನಿ ಉಷಾ ಚಿಲುಕುರಿ ಮತ್ತು ಉಪಾಧ್ಯಕ್ಷರೊಂದಿಗೆ ಇರುವ ಹಿರಿಯ ಯುಎಸ್ ಸರ್ಕಾರಿ ಅಧಿಕಾರಿಗಳ ನಿಯೋಗಕ್ಕೆ ಭೋಜನ ಕೂಟವನ್ನು ಆಯೋಜಿಸಲಿದ್ದಾರೆ.

ನಾಲ್ಕು ದಿನಗಳ ಭಾರತ ಪ್ರವಾಸದಲ್ಲಿರುವ ವ್ಯಾನ್ಸ್ ಅವರು ಇಂದು ಬೆಳಗ್ಗೆ ದೆಹಲಿಗೆ ಆಗಮಿಸಿದ್ದು, ಕುಟುಂಬ ಸಮೇತ ದೆಹಲಿಯ ಸ್ವಾಮಿನಾರಾಯಣ ಅಕ್ಷರಧಾಮ ದೇವಸ್ಥಾನಕ್ಕೆ ಭೇಟಿ ನೀಡಿದರು. ಈ ವೇಳೆ ವ್ಯಾನ್ಸ್ ದಂಪತಿ ಹಾಗೂ ಮೂವರು ಮಕ್ಕಳು ಸಾಂಪ್ರದಾಯಿಕ ಭಾರತೀಯ ಉಡುಪುಗಳನ್ನು ಧರಿಸಿದ್ದರು.

## ಚುನಾವಣಾ ಆಯೋಗದ ರಾಜಿ ಸ್ಪಷ್ಟ ಎಂದ ರಾಹುಲ್ ವಿರುದ್ಧ ಬಿಜೆಪಿ ಕಿಡಿ



ಮಲ್ಲಮ್ಮ ನುಡಿ ವಾರ್ತೆ
ನವದೆಹಲಿ:ಏ.21: ಮಹಾರಾಷ್ಟ್ರ ವಿಧಾನಸಭಾ ಚುನಾವಣೆಯಲ್ಲಿ ಬಿಜೆಪಿ ನೇತೃತ್ವದ ಮಹಾಯುತಿ ಮೈತ್ರಿಕೂಟದ ಗೆಲುವನ್ನು ಪ್ರಶ್ನಿಸಿದ ಲೋಕಸಭೆ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ವಿರುದ್ಧ ಸೋಮವಾರ ತೀವ್ರ ವಾಗ್ದಾಳಿ ನಡೆಸಿದ ಭಾರತೀಯ ಜನತಾ ಪಕ್ಷ(ಬಿಜೆಪಿ), ಅವರು ವಿದೇಶದಲ್ಲಿದ್ದಾಗಲೆಲ್ಲಾ ಹೀಗೆ ಎಂದು ತಿರುಗೇಟು ನೀಡಿದೆ.

ಕೇಂದ್ರ ಚುನಾವಣಾ ಆಯೋಗು "ರಾಜಿ ಮಾಡಿಕೊಂಡಿರುವುದರಿಂದ" ಮಹಾರಾಷ್ಟ್ರದಲ್ಲಿ ಬಿಜೆಪಿ ನೇತೃತ್ವದ ಮಹಾಯುತಿ ಗೆಲ್ಲಲು ಸಾಧ್ಯವಾಯಿತು ಎಂದು ರಾಹುಲ್ ಗಾಂಧಿ ಆರೋಪಿಸಿದ್ದಾರೆ.

ಭಾನುವಾರ ಅಮೆರಿಕದ ಬೋಸ್ಟನ್‌ನಲ್ಲಿ ನಡೆದ ಕಾರ್ಯಕ್ರಮವೊಂದರಲ್ಲಿ ಮಾತನಾಡಿದ ರಾಹುಲ್ ಗಾಂಧಿ, ಮಹಾರಾಷ್ಟ್ರ ವಿಧಾನಸಭಾ ಚುನಾವಣೆಯನ್ನು ಉಲ್ಲೇಖಿಸಿ,

(2ನೇ ಪುಟ ನೋಡಿ)

## ಸ್ಮಾರ್ಟ್ ಮೀಟರ್ ಹಗರಣ ಆರೋಪ : ಸಚಿವ ಜಾರ್ಜ್ ವಿರುದ್ಧ ಲೋಕಾಯುಕ್ತಕ್ಕೆ ಬಿಜೆಪಿ ದೂರು



ಮಲ್ಲಮ್ಮ ನುಡಿ ವಾರ್ತೆ
ಬೆಂಗಳೂರು:ಏ.21: ಸ್ಮಾರ್ಟ್ ಮೀಟರ್ ಹಗರಣ ಆರೋಪಕ್ಕೆ ಸಂಬಂಧಪಟ್ಟಂತೆ ಲೋಕಾಯುಕ್ತಕ್ಕೆ ಬಿಜೆಪಿ ದೂರು ನೀಡಿದೆ.

ಶಾಸಕರಾದ ಅಶ್ವಥ್ ನಾರಾಯಣ್, ಎಸ್.ಆರ್.ವಿಶ್ವನಾಥ್, ಧೀರಜ್ ಮುನಿರಾಜು ನೇತೃತ್ವದ ನಿಯೋಗದಿಂದ ಲೋಕಾಯುಕ್ತ ಕಚೇರಿಗೆ ಭೇಟಿ ನೀಡಿ, ದೂರು ಸಲ್ಲಿಸಿದ್ದಾರೆ. ಭ್ರಷ್ಟಾಚಾರ ನಿಯಂತ್ರಣ ಕಾಯ್ದೆಯಡಿ ದೂರು ನೀಡಿದ್ದು, ಇಂಧನ ಸಚಿವ ಕೆ.ಜೆ. ಜಾರ್ಜ್, ಗೌರವ್ ಗುಪ್ತಾ, ಟೆಕ್ನಿಕಲ್ ಡೈರೆಕ್ಟರ್ ಮಹಾಂತೇಶ್ & ಬಾಲಾಜಿ ಮೇಲೆ ದೂರು ನೀಡಲಾಗಿದೆ.

ಲೋಕಾಯುಕ್ತಕ್ಕೆ ದೂರು ನೀಡಿದ ಬಳಿಕ ಮಾತನಾಡಿದ ಶಾಸಕ ಅಶ್ವಥ್ ನಾರಾಯಣ್, ಇಂಧನ ಇಲಾಖೆ ಪ್ರಧಾನ ಕಾರ್ಯದರ್ಶಿ ಮೇಲೆ ಭ್ರಷ್ಟಾಚಾರ ನಿಯಂತ್ರಣ ಕಾಯ್ದೆಯಡಿ ದೂರು ನೀಡಿದ್ದೇವೆ. ಇಂಧನ ಸಚಿವ ಕೆಜೆ ಜಾರ್ಜ್ , ಗೌರವ್ ಗುಪ್ತಾ, ಟೆಕ್ನಿಕಲ್ ಡೈರೆಕ್ಟರ್ ಮಹಾಂತೇಶ್ & ಬಾಲಾಜಿ ವಿರುದ್ಧ ದೂರು ನೀಡಿದ್ದು, ರಾಜಶ್ರೀ ಕಂಪನಿಯ ಕಂಬ ತಯಾರಿಸುವ ಕಂಪನಿಗೆ ಸ್ಮಾರ್ಟ್ ಮೀಟರ್ ಅಳವಡಿಕೆಗೆ ಟೆಂಡರ್ ನೀಡಿದ್ದಾರೆ. ನಿಯಮಗಳ ಉಲ್ಲಂಘನೆ, ಬ್ಲಾಕ್ ಲಿಸ್ಟ್ ಕಂಪನಿಗೆ ಟೆಂಡರ್ ನೀಡಿದ್ದಾರೆ ಎಂದು ಆರೋಪಿಸಿದರು.

ಲೋಕಾಯುಕ್ತರಿಗೆ ಸವಿಸ್ತಾರವಾಗಿ ತಿಳಿಸಿದ್ದೇವೆ. ಇದನ್ನು ತಾರ್ಕಿಕ ಅಂತ್ಯಕ್ಕೆ ಕೊಂಡೊಯ್ಯಬೇಕಿದೆ. ಭ್ರಷ್ಟಾಚಾರದ ವಿರುದ್ಧ ನಾವು ಹೋರಾಟ ಮಾಡುತ್ತಿದ್ದೇವೆ. ಭ್ರಷ್ಟಾಚಾರ ಮುಕ್ತವಾಗಿಸಬೇಕು. ಇದೊಂದು ಬೇನಾಮಿ ಕಂಪನಿ. 9 ಸುಳ್ಳುಗಳನ್ನು ಜಾರ್ಜ್ ಹೇಳಿದ್ದಾರೆ. ಅದ್ಯಾವುದಕ್ಕೂ ಉತ್ತರವಿಲ್ಲ. ಸದನದ ಒಳಗೂ ಅಧಿಕಾರ ದುರ್ಬಳಕೆ ಮಾಡಿದ್ದಾರೆ. ಒಬ್ಬ ವ್ಯಕ್ತಿಗೆ ಟೆಂಡರ್ ಕೊಡಲು ಅಧಿಕಾರ ದುರ್ಬಳಕೆ ಮಾಡಿಕೊಂಡಿದ್ದಾರೆ ಎಂದು ಕಿಡಿ-ಕಾರಿದರು.

## 2ನೇ ಬಾರಿಗೆ ಉಪಗ್ರಹ ಜೋಡಣೆ ಪ್ರಕ್ರಿಯೆ ಯಶಸ್ವಿಯಾಗಿ ಪೂರ್ಣಗೊಳಿಸಿದ ಇಸ್ರೋ

ನವದೆಹಲಿ:ಏ.21: ಭಾರತೀಯ ಬಾಹ್ಯಾಕಾಶ ಸಂಶೋಧನಾ ಸಂಸ್ಥೆ ಇಸ್ರೋ ಮತ್ತೊಂದು ಮೈಲುಗಲ್ಲು ಸಾಧಿಸಿದ್ದು, ಬಾಹ್ಯಾಕಾಶದಲ್ಲಿ 2ನೇ ಬಾರಿಗೆ ಉಪಗ್ರಹ ಜೋಡಣೆ ಪ್ರಕ್ರಿಯೆ ಯಶಸ್ವಿಯಾಗಿ ಪೂರ್ಣಗೊಳಿಸಿದೆ.

ಈ ಕುರಿತು ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವ ಜಿತೇಂದರ್ ಸಿಂಗ್ ಎಕ್ಸ್‌ನಲ್ಲಿ ಮಾಹಿತಿ ಹಂಚಿಕೊಂಡಿದ್ದು, ಬಾಹ್ಯಾಕಾಶದಲ್ಲಿ ಉಪಗ್ರಹಗಳ ಎರಡನೇ ಡಾಕಿಂಗ್ ಪ್ರಕ್ರಿಯೆ ಯಶಸ್ವಿಯಾಗಿ ಪೂರ್ಣಗೊಂಡಿದೆ. ಈ ವಿಚಾರವನ್ನು ಹಂಚಿಕೊಳ್ಳಲು ಸಂತೋಷವಾಗುತ್ತಿದೆ ಎಂದಿದ್ದಾರೆ.

2024ರ ಡಿಸೆಂಬರ್ 30ರಂದು ಸ್ಪೇಡೆಕ್ಸ್ ಮಿಷನ್‌ನ ಕಖಐಗಿ-ಅ60 ರಾಕೆಟ್‌ನ್ನು ಯಶಸ್ವಿಯಾಗಿ ಉಡಾವಣೆ ಮಾಡಲಾಗಿತ್ತು. ನಂತರ 2025 ಜನವರಿ 16ರಂದು ಬೆಳಗ್ಗೆ 6:20ಕ್ಕೆ ಮೊದಲ ಬಾರಿಗೆ ಉಪಗ್ರಹಗಳನ್ನು ಯಶಸ್ವಿಯಾಗಿ ಡಾಕಿಂಗ್ ಮಾಡಲಾಗಿತ್ತು. ಮಾರ್ಚ್ 13ರ ಬೆಳಗ್ಗೆ 9:20ಕ್ಕೆ ಅನ್‌ಡಾಕ್ ಮಾಡಲಾಗಿತ್ತು. ಮುಂದಿನ 2 ವಾರಗಳಲ್ಲಿ ಮತ್ತಷ್ಟು ಪ್ರಯೋಗದ ಪ್ಲಾನ್ ಇರುವುದಾಗಿ ತಿಳಿಸಿದ್ದಾರೆ.

ಅಮೆರಿಕ, ರಷ್ಯಾ, ಚೀನಾ ಬಳಿಕ ಬಾಹ್ಯಾಕಾಶ ಡಾಕಿಂಗ್ ಪ್ರಯೋಗವನ್ನು ಪೂರ್ಣಗೊಳಿಸಿದ ನಾಲ್ಕನೇ ದೇಶವಾಗಿ ಭಾರತ ಹೊರಹೊಮ್ಮಿದೆ.

## ಒಂದನೇ ಪುಟದಿಂದ

## 1 ಲಕ್ಷ ರೂ ಸಮೀಪ 10 ಗ್ರಾಂ ಚಿನ್ನ

ಮದುವೆ ಸೀಸನ್‌ನಲ್ಲಿ, ಈ ಹೆಚ್ಚಳವು ಮಧ್ಯಮ ವರ್ಗದ ಜನರಿಗೆ ಸಮಸ್ಯೆಗಳನ್ನು ಉಂಟುಮಾಡಬಹುದು. ಹೊಸ ಆಭರಣಗಳನ್ನು ತಯಾರಿಸುವ ಬೇಡಿಕೆ ಕಡಿಮೆಯಾಗಿದ್ದು, ಜನರು ತಮ್ಮ ಹಳೆಯ ಚಿನ್ನವನ್ನು ಮಾರಾಟ ಮಾಡಲು ಆಸಕ್ತಿ ತೋರಿಸುತ್ತಿದ್ದಾರೆ ಎಂದು ಜವೇರಿ ಬಜಾರ್‌ನಲ್ಲಿ ವರ್ಷಗಳಿಂದ ವ್ಯಾಪಾರ ಮಾಡುತ್ತಿರುವ ಚಿನ್ನದ ವ್ಯಾಪಾರಿಗಳು ಹೇಳುತ್ತಾರೆ.

ಅಂತರರಾಷ್ಟ್ರೀಯ ಮಟ್ಟದಲ್ಲಿ ಅಸ್ಥಿರತೆ ಮುಂದುವರಿದರೆ ಮತ್ತು ಬೇಡಿಕೆ ಹಾಗೆಯೇ ಇದ್ದರೆ, ಮುಂಬರುವ ದಿನಗಳಲ್ಲಿ ಚಿನ್ನದ ಬೆಲೆ ಇನ್ನೂ ಹೆಚ್ಚಿನ ಎತ್ತರವನ್ನು ತಲುಪಬಹುದು ಎಂದು ಮಾರುಕಟ್ಟೆ ತಜ್ಞರು ನಂಬಿದ್ದಾರೆ. ಆದಾಗ್ಯೂ, ಲಾಭದ ಬುಕಿಂಗ್‌ನಿಂದಾಗಿ ಈಗ ಬೆಲೆಗಳು ಸ್ವಲ್ಪ ಕಡಿಮೆಯಾಗಬಹುದು ಎಂದು ಕೆಲವರು ನಂಬುತ್ತಾರೆ. ಆರ್ಥಿಕ ಏರಿಳಿತಗಳ ಸಮಯದಲ್ಲಿ ಚಿನ್ನದ ಬೆಲೆಯಲ್ಲಿನ ಈ ಐತಿಹಾಸಿಕ ಏರಿಕೆಯು ಈ ಲೋಹವು ಸುರಕ್ಷಿತ ಹೂಡಿಕೆ ಆಯ್ಕೆಗಳಲ್ಲಿ ಒಂದಾಗಿದೆ ಎಂಬುದನ್ನು ಮತ್ತೊಮ್ಮೆ ಸಾಬೀತುಪಡಿಸಿದೆ. ಈಗ ಮುಂಬರುವ ವಾರಗಳಲ್ಲಿ ಬೆಲೆ ಯಾವ ದಿಕ್ಕನ್ನು ತೆಗೆದುಕೊಳ್ಳುತ್ತದೆ ಎಂಬುದನ್ನು ನೋಡಲು ಆಸಕ್ತಿದಾಯಕವಾಗಿದೆ.

## ಭ್ರಷ್ಟಾಚಾರ ಪ್ರಕರಣ : ವಿಸ್ತೃತ ಪೀಠಕ್ಕೆ ವರ್ಗ

ನಿರ್ದೇಶಕ ಕೆ.ಎಸ್ ಶಿವಸ್ವಾಮಿ ವಿರುದ್ಧ ಭ್ರಷ್ಟಾಚಾರ ಮತ್ತು ಕ್ರಿಮಿನಲ್ ಸಂಚು ಆರೋಪ ಮಾಡಿದ್ದರು. ದೇವನಹಳ್ಳಿಯಲ್ಲಿ 2011 ರಲ್ಲಿ 26 ಎಕರೆ ಡಿನೋಟಿಫಿಕೇಷನ್ ಮಾಡಿ ಅಕ್ರಮ ನಡೆಸಲಾಗಿದೆ ಎಂದು ಆರೋಪಿಸಿ ಆಲಂ ಪಾಷಾ ದೂರು ನೀಡಿದ್ದರು. ಈ ಪ್ರಕರಣದಲ್ಲಿ ಯಡಿಯೂರಪ್ಪ ಹಾಗೂ ನಿರಾಣಿ ಅವರನ್ನು ಬಂಧಿಸದಂತೆ ಸುಪ್ರಿ?ಂ ಕೋರ್ಟ್ 2021ರ ಜನವರಿ 27ರಂದು ಆದೇಶ ನೀಡಿತ್ತು.

ದೂರುದಾರರು ಸಲ್ಲಿಸಿದ್ದ ಹಿಂದಿನ ದೂರನ್ನು ಪೂರ್ವಾನುಮತಿಯಿಲ್ಲದ ಕಾರಣಕ್ಕೆ ರದ್ದುಗೊಳಿಸಿದ್ದನ್ನು ಪ್ರಸ್ತಾಪಿಸಿದ ನ್ಯಾಯಪೀಠ, ಆರೋಪಿಯು ತನ್ನ ಸ್ಥಾನದಿಂದ ಕೆಳಗಿಳಿದ ನಂತರ ಹೊಸ ದೂರು ದಾಖಲಿಸುವುದಕ್ಕೆ ಅಡ್ಡಿಯಾಗುವುದಿಲ್ಲ ಎಂದು ಸ್ಪಷ್ಟಪಡಿಸಿತ್ತು.

## ನಾವು ಎತ್ತಿಹಿಡಿಯಬೇಕು: ಮುಖ್ಯಮಂತ್ರಿ ಸಿದ್ದರಾಮಯ್ಯ

ಕರ್ನಾಟಕ ಪ್ರಗತಿಶೀಲ ರಾಜ್ಯವಾಗಿದ್ದು, ಜಿಎಸ್‌ಟಿ ಸಂಗ್ರಹಣೆಯಲ್ಲಿ ದೇಶದಲ್ಲೇ ಎರಡನೇ ಸ್ಥಾನದಲ್ಲಿದೆ. ಬಾಬಾ ಸಾಹೇಬ್ ಅಂಬೇಡ್ಕರ್ ಅವರು ಸಂವಿಧಾನ ರಚಿಸಿ 75 ವರ್ಷಗಳಾದರೂ ಸಹ ಸಂವಿಧಾನದ ಧ್ಯೇಯೋದ್ದೇಶಗಳು ಇನ್ನೂ ಈಡೇರಿಲ್ಲ. ಸಮಾಜದ ಪರಿವರ್ತನೆಗೆ ಹೋರಾಟ ನಡೆಸಿ ತಮ್ಮ ಜೀವನವನ್ನು ಮುಡುಪಾಗಿಟ್ಟ ಗಾಂಧೀಜಿ, ಬಸವಣ್ಣನವರ ತತ್ವಗಳನ್ನು ನಾವು ಪಾಲಿಸಿ ಸಾಮಾಜಿಕ, ಆರ್ಥಿಕ, ಅಸಮಾನತೆ ತೊಡೆದುಹಾಕಬೇಕು ಎಂದರು.ಸರ್ಕಾರಿ ನೌಕರರು ತಮಗೆ ಸಿಕ್ಕಿರುವ ಅವಕಾಶವನ್ನು ಸದುಪಯೋಗಪಡಿಸಿ ಜನಸೇವೆ ಮಾಡಿ ಉತ್ತಮ ಹೆಸರು ಪಡೆಯಬೇಕು ಎಂದರು.

ಕಾರ್ಯಕ್ರಮದಲ್ಲಿ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಮಾತನಾಡಿ, ಜನರಿಗೆ ಉತ್ತಮ ಸೇವೆ ನೀಡಿದ ಅಧಿಕಾರಿ, ನೌಕರರನ್ನು ಜನರೇ ಗೌರವಿಸುತ್ತಾರೆ. ಆದರೆ ಕೆಲವರು ಜನರನ್ನು ವಿನಾಕಾರಣ ಅಲೆಯುವಂತೆ ಮಾಡಿ ಸತಾಯಿಸುತ್ತಾರೆ. ನಾವು ಜನಸ್ನೇಹಿಯಾಗಿ, ಸಮಾಜಮುಖಿಯಾಗಿ ಕೆಲಸ ನಿರ್ವಹಿಸಬೇಕು. ಸರ್ಕಾರದ ಕೆಲಸ ದೇವರ ಕೆಲಸ ಎಂದು ಮನಗೊಂಡು ಕಾನೂನಿನ ಚೌಕಟ್ಟಿನಲ್ಲಿ ಸಮರ್ಥವಾಗಿ ಕೆಲಸ ನಿರ್ವಹಿಸಬೇಕು. ಇದರಿಂದ ನೌಕರರಿಗೂ, ಜನಪ್ರತಿನಿಗಳಿಗೂ ಒಳ್ಳೆಯ ಹೆಸರು ಬರುತ್ತದೆ ಎಂದರು.

ಶಿವಾಜಿನಗರ ವಿಧಾನಸಭಾ ಕ್ಷೇತ್ರದ ಶಾಸಕರಾದ ರಿಜ್ವಾನ್ ಅರ್ಷದ್ ಮಾತನಾಡಿ, ಸರ್ಕಾರದ ಕಾರ್ಯಕ್ರಮಗಳನ್ನು ಜನರಿಗೆ ತಲುಪಿಸುವ ಮಹತ್ತರವಾದ ಜವಾಬ್ದಾರಿ ಸರ್ಕಾರಿ ನೌಕರರ/ ಅಧಿಕಾರಿಗಳ ಮೇಲಿದೆ. ನಾವು ಜಾತಿ, ಮತವನ್ನು ಮೀರಿ ಮನುಷ್ಯತ್ವದಿಂದ ಎಲ್ಲರನ್ನೂ ಸಮಾನ ರೀತಿಯಲ್ಲಿ ಕಾಣಬೇಕು ಎಂದರು.

ಕಾರ್ಯಕ್ರಮದಲ್ಲಿ ಸರ್ಕಾರಿ ನೌಕರರ ನಗದು ರಹಿತ ಚಿಕಿತ್ಸೆಯಾದ "ಕರ್ನಾಟಕ ಆರೋಗ್ಯ ಸಂಜೀವಿನಿ" ಯೋಜನೆಯ ಕಾರ್ಡನ್ನು ಸರ್ಕಾರಿ ನೌಕರರಿಗೆ ನೀಡುವ ಮೂಲಕ ವಿದ್ಯುಕ್ತವಾಗಿ ಗಣ್ಯರು ಚಾಲನೆ ನೀಡಿದರು.

ಅಲ್ಲದೇ ಆಡಳಿತ ತರಬೇತಿ ಸಂಸ್ಥೆ ಮೈಸೂರು ಇದರ ಆನ್‌ಲೈನ್ ಕನ್ನಡ ತರಬೇತಿ ತರಗತಿಗಳಿಗೆ ಸಹ ಚಾಲನೆ ನೀಡಿದರು. ಇದೇ ಸಂದರ್ಭದಲ್ಲಿ 2023ನೇ ಸಾಲಿನ ಸರ್ವೋತ್ತಮ ಪ್ರಶಸ್ತಿ ಪಡೆದ 30 ಸರ್ಕಾರಿ ನೌಕರರನ್ನು ಇದೇ ಸಂದರ್ಭದಲ್ಲಿ ತಲಾ 50,000 ನಗದು ಹಾಗೂ ಪ್ರಶಸ್ತಿ ಫಲಕ ನೀಡಿ ಗೌರವಿಸಲಾಯಿತು.

ಕಾರ್ಯಕ್ರಮದಲ್ಲಿ ಮುಖ್ಯಮಂತ್ರಿಗಳ ರಾಜಕೀಯ ಕಾರ್ಯದರ್ಶಿಗಳಾದ ಗೋವಿಂದರಾಜು, ವಿಧಾನಸಭೆಯ ಸರ್ಕಾರದ ಮುಖ್ಯ ಸಚೇತಕರಾದ ಅಶೋಕ್ ಮಹಾದೇವಪ್ಪ ಪಟ್ಟಣ್, ಹುನಗುಂದ ವಿಧಾನಸಭಾ ಕ್ಷೇತ್ರದ ಶಾಸಕರಾದ ವಿಜಯಾನಂದ ಕಾಶಪ್ಪನವರ್, ಸರ್ಕಾರದ ಮುಖ್ಯ ಕಾರ್ಯದರ್ಶಿಗಳಾದ ಡಾ.ಶಾಲಿನಿ ರಜನೀಶ್, ಮುಖ್ಯಮಂತ್ರಿಗಳ ಹೆಚ್ಚುವರಿ ಕಾರ್ಯದರ್ಶಿಗಳಾದ ಎಲ್.ಕೆ.ಅತೀಕ್, ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳಾದ ಗೌರವ ಗುಪ್ತ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯ ಕಾರ್ಯದರ್ಶಿಗಳಾದ ಜಿ.ಸತ್ಯವತಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಆಡಳಿತ ಸುಧಾರಣೆ)ಯ ಸರ್ಕಾರದ ಕಾರ್ಯದರ್ಶಿಗಳಾದ ತುಲಸಿ ಮದ್ದಿನೇನಿ, ಬೆಂಗಳೂರು ನಗರ ಜಿಲ್ಲಾಧಿಕಾರಿಗಳಾದ ಜಿ.ಜಗದೀಶ, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ರಾಜ್ಯಾಧ್ಯಕ್ಷರಾದ ಸಿ.ಎಸ್.ಷಡಾಕ್ಷರಿ ಹಾಗೂ ಇನ್ನಿತರ ಗಣ್ಯರು ಉಪಸ್ಥಿತರಿದ್ದರು.

## ರಾಜಿ ಸ್ಪಷ್ಟ ಎಂದ ರಾಹುಲ್ ವಿರುದ್ಧ ಬಿಜೆಪಿ ಕಿಡಿ

ಚುನಾವಣಾ ಆಯೋಗ "ರಾಜಿ ಮಾಡಿಕೊಂಡಿರುವುದು ಸ್ಪಷ್ಟವಾಗಿದೆ" ಮತ್ತು "ವ್ಯವಸ್ಥೆಯಲ್ಲಿ ಲೋಪಗಳಾಗಿವೆ" ಎಂದು ಆರೋಪಿಸಿದ್ದರು.

ಸರಳವಾಗಿ ಹೇಳುವುದಾದರೆ, ಮಹಾರಾಷ್ಟ್ರ ವಿಧಾನಸಭಾ ಚುನಾವಣೆಯಲ್ಲಿ ರಾಜ್ಯದಲ್ಲಿ ವಯಸ್ಕರಿಗಿಂತ ಹೆಚ್ಚಿನ ಜನರು ಮತ ಚಲಾಯಿಸಿದ್ದಾರೆ ಎಂದು ರಾಹುಲ್ ಗಾಂಧಿ ಹೇಳಿದ್ದರು.

"ಚುನಾವಣಾ ಆಯೋಗವು ಸಂಜೆ 5:30 ಕ್ಕೆ ನಮಗೆ ಮತದಾನದ ಅಂಕಿ ಅಂಶವನ್ನು ನೀಡಿತು ಮತ್ತು ಸಂಜೆ 5:30 ರಿಂದ 7:30 ರ ನಡುವೆ, 65 ಲಕ್ಷ ಮತದಾರರು ಮತ ಚಲಾಯಿಸಿದರು. ಇದು ಭೌತಿಕವಾಗಿ ಅಸಾಧ್ಯ. ಒಬ್ಬ ಮತದಾರ ಮತ ಚಲಾಯಿಸಲು ಸುಮಾರು 3 ನಿಮಿಷಗಳನ್ನು ತೆಗೆದುಕೊಳ್ಳುತ್ತದೆ. ಇದನ್ನು ಆಧರಿಸಿ ನೀವು ಲೆಕ್ಕ ಹಾಕಿದರೆ, ಮತದಾನದ ಪ್ರಕ್ರಿಯೆ ಮರು ದಿನ ಬೆಳಗಿನ ಜಾವ 2 ಗಂಟೆಯವರೆಗೆ ಮತದಾನ ನಡೆಯಬೇಕಿತ್ತು" ಎಂದು ರಾಹುಲ್ ಗಾಂಧಿ ಹೇಳಿದ್ದಾರೆ.

"ನಾವು ಈ ಕುರಿತು ವಿಡಿಯೋಗ್ರಫಿ ಕೇಳಿದಾಗ, ಅವರು ಅದನ್ನು ನಿರಾಕರಿಸಿದ್ದಲ್ಲದೆ, ಈಗ ನಮಗೆ ವಿಡಿಯೋಗ್ರಫಿ ಕೇಳಲು ಅವಕಾಶವಿಲ್ಲದ ರೀತಿಯಲ್ಲಿ ಕಾನೂನನ್ನು ಬದಲಾಯಿಸಿದರು" ಎಂದು ರಾಹುಲ್ ಗಾಂಧಿ ಟೀಕಿಸಿದ್ದಾರೆ.

"ಚುನಾವಣಾ ಆಯೋಗವು ರಾಜಿ ಮಾಡಿಕೊಂಡಿದೆ ಎಂಬುದು ನಮಗೆ ಸ್ಪಷ್ಟವಾಗಿದೆ ಮತ್ತು ವ್ಯವಸ್ಥೆಯಲ್ಲಿ ಏನೋ ತಪ್ಪಿದೆ ಎಂಬುದು ಸ್ಪಷ್ಟವಾಗುತ್ತಿದೆ. ನಾನು ಇದನ್ನು ಹಲವು ಬಾರಿ ಹೇಳಿದ್ದೇನೆ" ಎಂದು ಕಾಂಗ್ರೆಸ್ ನಾಯಕ ತಿಳಿಸಿದ್ದಾರೆ.

ರಾಹುಲ್ ಗಾಂಧಿ "ದೇಶದ್ರೋಹಿ"

ರಾಹುಲ್ ಗಾಂಧಿ ಹೇಳಿಕೆಗೆ ಕೆರಳಿ ಕೆಂಡವಾದ ಆಡಳಿತಾರೂಢ ಬಿಜೆಪಿ, ಅವರು ಒಬ್ಬ "ದೇಶದ್ರೋಹಿ" ಎಂದು ಜರಿದಿದೆ. ಅಲ್ಲದೆ ನ್ಯಾಷನಲ್ ಹೆರಾಲ್ಡ್ ಪ್ರಕರಣದಲ್ಲಿ ಇಡಿ ಕ್ರಮದಿಂದ ಹತಾಶೆಗೊಂಡಿರುವ ರಾಹುಲ್ ಗಾಂಧಿ ಚುನಾವಣಾ ಆಯೋಗದ ಬಗ್ಗೆ ಇಲ್ಲ ಸಲ್ಲದ ಹೇಳಿಕೆ ನೀಡುತ್ತಿದ್ದಾರೆ ಎಂದು ಬಿಜೆಪಿ ರಾಷ್ಟ್ರೀಯ ವಕ್ತಾರ ಸಂಬಿತ್ ಪಾತ್ರ ತಿರುಗೇಟು ನೀಡಿದ್ದಾರೆ.

"ನೀವು ನ್ಯಾಷನಲ್ ಹೆರಾಲ್ಡ್ ಪ್ರಕರಣದಿಂದ ಜಾರಿ ನಿರ್ದೇಶನಾಲಯದ ಮೇಲಿನ ಕೋಪವನ್ನು ಚುನಾವಣಾ ಆಯೋಗದ ಮೇಲೆ ಹಾಕುತ್ತಿದ್ದೀರಿ. ಹಾಗೆ ಮಾಡುವುದರಿಂದ ಏನೂ ಪ್ರಯೋಜನ ಆಗುವುದಿಲ್ಲ" ಎಂದು ಪಾತ್ರ ಹೇಳಿದ್ದಾರೆ.

"ಇಡಿ ನಿಮ್ಮನ್ನು ಬಿಡುವುದಿಲ್ಲ ಏಕೆಂದರೆ ಅದು ಸತ್ಯಗಳ ಆಧಾರದ ಮೇಲೆ ಕೆಲಸ ಮಾಡುತ್ತದೆ. ನ್ಯಾಷನಲ್ ಹೆರಾಲ್ಡ್ ಪ್ರಕರಣದಲ್ಲಿ ನಿಮ್ಮನ್ನು ಮತ್ತು ನಿಮ್ಮ ತಾಯಿಯನ್ನು ಬಂಧಿಸಿ ಜೈಲಿಗೆ ಕಳುಹಿಸಲಾಗುತ್ತದೆ" ಎಂದು ಪಾತ್ರ ಬಿಜೆಪಿ ಪ್ರಧಾನ ಕಚೇರಿಯಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಹೇಳಿದರು.

ಇನ್ನು ರಾಹುಲ್ ಗಾಂಧಿ ವಿರುದ್ಧ ವಾಗ್ದಾಳಿ ನಡೆಸಿದ ಕೇಂದ್ರ ಸಚಿವ ಧರ್ಮೇಂದ್ರ ಪ್ರಧಾನ್, ಕಾಂಗ್ರೆಸ್ ನಾಯಕರು "ವಿದೇಶದಲ್ಲಿದ್ದಾಗಲೆಲ್ಲಾ ಭಾರತ ಮತ್ತು ಅದರ ಪ್ರಜಾಪ್ರಭುತ್ವ ವ್ಯವಸ್ಥೆಗಳ ಬಗ್ಗೆ ದ್ವೇಷಪೂರಿತ ಆಲೋಚನೆ ಹಂಚಿಕೊಳ್ಳುವುದನ್ನು ಮುಂದುವರೆಸಿದ್ದಾರೆ" ಎಂದು ಎಕ್ಸ್ ನಲ್ಲಿ ಪೋಸ್ಟ್ ಮಾಡಿದ್ದಾರೆ.

ರಾಹುಲ್ ಗಾಂಧಿ ಹೇಳಿಕೆ ಸಮರ್ಥಿಸಿಕೊಂಡ ಕಾಂಗ್ರೆಸ್

ಏತನ್ಮಧ್ಯೆ, ಕಾಂಗ್ರೆಸ್ ತನ್ನ ಮಾಜಿ ಅಧ್ಯಕ್ಷರ ಹೇಳಿಕೆ ಸಮರ್ಥಿಸಿಕೊಂಡಿದ್ದು, ಇತ್ತೀಚಿನ ದಿನಗಳಲ್ಲಿ ವಿಶ್ವದ ಯಾವ ಭಾಗದಿಂದ ಅವರು ಮಾತನಾಡುತ್ತಾರೆ ಎಂಬುದು ಮುಖ್ಯವಲ್ಲ ಎಂದು ಪ್ರತಿಪಾದಿಸಿದೆ.

ಮುಂಬೈನಲ್ಲಿ ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಕಾಂಗ್ರೆಸ್ ವಕ್ತಾರ ಪವನ್ ಖೇರಾ, ವಿರೋಧ ಪಕ್ಷವು ಇಸಿಐ ಕಾರ್ಯನಿರ್ವಹಣೆಯ ಬಗ್ಗೆ ಅನುಮಾನ ವ್ಯಕ್ತಪಡಿಸಿದೆ ಮತ್ತು ಚುನಾವಣಾ ಆಯೋಗವು ಅವುಗಳಿಗೆ ಉತ್ತರಿಸಬೇಕು ಎಂದು ಹೇಳಿದರು.

"ಇಸಿಐ ಬಗ್ಗೆ ನಮಗೆ ಅನುಮಾನಗಳಿವೆ. ಮತದಾನದ ಕೊನೆಯ ಗಂಟೆಯಲ್ಲಿ ಮತದಾನದಲ್ಲಿ 10 ರಿಂದ 13 ಪ್ರತಿಶತದಷ್ಟು ಏರಿಕೆಯಾಗುವುದು ಭೌತಿಕವಾಗಿ ಸಾಧ್ಯವಿಲ್ಲ" ಎಂದು ಅವರು ವಾದಿಸಿದರು.

"ಇಸಿಐ ಉತ್ತರ ನೀಡಲಿ(ಕಾಂಗ್ರೆಸ್ ಎತ್ತಿರುವ ವಿಷಯಗಳಿಗೆ). ಬಿಜೆಪಿ ಏಕೆ ಪ್ರತಿಕ್ರಿಯಿಸುತ್ತಿದೆ? ವಿದೇಶಿ ನೆಲದಲ್ಲಿ ದೇಶೀಯ ರಾಜಕೀಯ ವಿಷಯಗಳ ಬಗ್ಗೆ ಮೊದಲು ಮಾತನಾಡಿದ್ದೇ ಪ್ರಧಾನಿ ನರೇಂದ್ರ ಮೋದಿ. ಅವರಿಂದಲೇ ನಾವು ಕಲಿತಿದ್ದೇವೆ" ಎಂದು ತಿರುಗೇಟು ನೀಡಿದರು.

## ನಾಳೆ ಮಕ್ಕಳ ಬೇಸಿಗೆ ರಂಗ ತರಬೇತಿ ಶಿಬಿರ

ಕಲಬುರಗಿ,ಏ.21:ಕಲಬುರಗಿ ರಂಗಾಯಣ ಮತ್ತು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರ ಸಂಯುಕ್ತಾಶ್ರಯದಲ್ಲಿ ಇದೇ ಏಪ್ರಿಲ್ 22 ರಂದು ಮಧ್ಯಾಹ್ನ 3 ಗಂ- ಟೆಗೆ ಕಲಬುರಗಿ ರಂಗಾಯಣದ ಸಭಾಂಗಣದಲ್ಲಿ ಮಕ್ಕಳ ಹಬ್ಬ-2025 ಬೇಸಿಗೆ ರಂಗ ತರಬೇತಿ ಶಿಬಿರ ಹಮ್ಮಿಕೊಳ್ಳಲಾಗಿದೆ.

ಮಕ್ಕಳ ಸಾಹಿತಿ ಎ.ಕೆ.ರಾಮೇಶ್ವರ ಉದ್ಘಾಟಿಸಲಿದ್ದು, ರಂಗಾಯಣದ ನಿರ್ದೇಶಕಿ ಸುಜಾತಾ ಜಂಗಮಶೆಟ್ಟಿ ಅಧ್ಯಕ್ಷತೆವಹಿಸುವರು. ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಕಲಬುರಗಿ ವಿಭಾಗದ ಜಂಟಿ ನಿರ್ದೇಶಕ ಬಸವರಾಜ ಹೂಗಾರ, ಸಹಾಯಕ ನಿರ್ದೇಶಕ ದತ್ತಪ್ಪ ಸಾಗನೂರ, ಗುಲಬರ್ಗಾ ವಿ.ವಿ. ಪೊಲೀಸ್ ಠಾಣೆಯ ಪಿ.ಐ ಸುಶೀಲಕುಮಾರ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಉಪನಿರ್ದೇಶಕ ರಾಜಕುಮಾರ ರಾಠೋಡ ಅವರು ಮುಖ್ಯ ಅತಿಥಿಗಳಾಗಿ ಆಗಮಿಸುವರು.

ಇದೇ ಸಂದರ್ಭದಲ್ಲಿ ಮಕ್ಕಳಿಂದ ಸಂಗೀತ ಮತ್ತು ನೃತ್ಯ ಪ್ರದರ್ಶನ ನಡೆಯಲಿದೆ.

## ಆರೋಪಿಗೆ ಗಲ್ಲು ಶಿಕ್ಷೆ

ಗ್ರಾಮಕ್ಕೆ ನಡೆದುಕೊಂಡು ಹೋಗುತ್ತಿದ್ದ ವೇಳೆ ಅಪರಾಧಿ ಗುಂಡೇರಾವ ಬಲವಂತವಾಗಿ ಅವಳನ್ನು ಕಬ್ಬಿನ ಗದ್ದೆಗೆ ಎಳೆದೊಯ್ದು ಅತ್ಯಾಚಾರ ಎಸಗಿದ ನಂತರ ಅವಳ ಉಸಿರುಗಟ್ಟಿಸಿ ಕೊಲೆಗೈದು ಪಕ್ಕದ ಹೊಲದ ಬಾವಿಯಲ್ಲಿ ಮೃತದೇಹವನ್ನು ಹಾಕಿದ್ದನು. ಈ ಬಗ್ಗೆ ಆಳಂದ ತಾಲೂಕಿನ ನಿಂಬರ್ಗಾ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿತ್ತು.

ಪ್ರಕರಣ ದಾಖಲಿಸಿಕೊಂಡು ತನಿಖೆ ಕೈಗೊಂಡಿದ್ದ ತನಿಖಾಧಿಕಾರಿ ಭಾಸು ಚವ್ಹಾಣ ಹಾಗೂ ಸಿಬ್ಬಂದಿ,ಪ್ರಕರಣದ ತನಿಖೆ ನಡೆಸಿ ನ್ಯಾಯಾಲಯಕ್ಕೆ ಆರೋಪಿ ವಿರುದ್ದ ದೋಷಾರೋಪ ಪಟ್ಟಿ ಸಲ್ಲಿಸಿದ್ದರು.ಪ್ರಕರಣದ ವಿಚಾರಣೆ ನಡೆಸಿದ ನ್ಯಾಯಾಧೀಶ ಯಮನಪ್ಪ ಬಮ್ಮಣಗಿ ಅವರು ಪೋಕ್ಸೋ ಕಾಯ್ದೆಯಡಿ ಆರೋಪಿಗೆ ಗಲ್ಲು ಶಿಕ್ಷೆ ಹಾಗೂ 1 ಲಕ್ಷ ರೂ. ದಂಡ ವಿಧಿಸಿ, ಆದೇಶ ಪ್ರಕಟಿಸಿದ್ದಾರೆ. ಅಲ್ಲದೆ, ಕಾನೂನು ಪ್ರಾಧಿಕಾರದ ವತಿಯಿಂದ 4 ಲಕ್ಷ ರೂ.ಪರಿಹಾರವನ್ನು ಮೃತ ಬಾಲಕಿಯ ತಾಯಿಗೆ ನೀಡಬೇಕು ಎಂದು ಆದೇಶದಲ್ಲಿ ತಿಳಿಸಿದ್ದಾರೆ.

ಪ್ರಕರಣದಲ್ಲಿ ಸರ್ಕಾರದ ಪರವಾಗಿ ವಿಶೇಷ ಸರ್ಕಾರಿ ಅಭಿಯೋಜಕ ಶಾಂತವೀರ ಬಿ.ತುಪ್ಪದ ಅವರು ವಾದ ಮಂಡಿಸಿದ್ದರು.

ನಿಂಬರ್ಗಾ ಠಾಣೆಯ ವ್ಯಾಪ್ತಿಯಲ್ಲಿ ನಡೆದಿದ್ದ ಬಾಲಕಿ ಮೇಲಿನ ಅತ್ಯಾಚಾರ, ಕೊಲೆ ಪ್ರಕರಣವು ಜಿಲ್ಲೆಯಾದ್ಯಂತ ತೀವ್ರ ಆಕ್ರೋಶಕ್ಕೆ ಕಾರಣವಾಗಿತ್ತು.

## ಸ್ವಾವಲಂಬಿ ಬದುಕು ಕಟ್ಟಿಕೊಳ್ಳಲು ಸಾಕಷ್ಟು ಅವಕಾಶ:ಡಾ.ಮೀನಾ




ಮಲ್ಲಮ್ಮನುಡಿವಾರ್ತೆಬಾಗಲಕೋಟೆ,ಏ.21- ಇಂದು ಮಹಿಳೆಗೆ ದುಡಿಮೆ ಮಾಡಲು ಸಾಕಷ್ಟು ಅವಕಾಶಗಳಿದ್ದು ಸ್ವಾವಲಂಬಿ ಬದುಕು ಕಟ್ಟಿಕೊಳ್ಳಲು ಪ್ರಯತ್ನ ಮಾಡಬೇಕು ಎಂದು ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾಲಯದ ವಿಶ್ರಾಂತ ಉಪಕುಲಪತಿ ಡಾ.ಮೀನಾ ಚಂದಾವರಕರ ಹೇಳಿದ್ದಾರೆ. ನಗರದ ಭಗಿನಿ ಸಮಾಜದ ಕಟ್ಟಡದಲ್ಲಿರುವ ಬಿಜಾಪುರ ಇಂಟಿಗ್ರೇಟೆಡ್ ರೂರಲ್ ಡೆವಲಪ್ಮೆಂಟ್ ಸೊಸೈಟಿ (ಬರ್ಡ್ಸ್) ಹುನಗುಂದ ಥೆರಪಿ ಸೆಂಟರ್‌ದಲ್ಲಿ ಭಾರತೀಯ ವಿಕಾಸ ಟ್ರಸ್ಟ್ ಮಣಿಪಾಲ ಇವರ ಸಹಯೋಗದೊಂದಿಗೆ ನಡೆದ ಹತ್ತು ದಿನಗಳ ಆರಿ ವರ್ಕ್ಸ ಉಚಿತ ತರಬೇತಿ ಮುಕ್ತಾಯ ಸಮಾರಂಭದಲ್ಲಿ ಮುಖ್ಯ ಅತಿಥಿಗಳಾಗಿ ಅವರು ಮಾತನಾಡಿದರು. ಸ್ವತಃ ದುಡಿದು ಹಣ ಪಡೆದಾಗ ಸಿಗುವ ಆನಂದವೇ ಬೇರೆ, ಸಣ್ಣದಾದ ದುಡಿಮೆ ಪ್ರಾರಂಭಿಸಿ ಅದರಿಂದಲೇ ಸಾಕಷ್ಟು ಜನರಿಗೆ ಉದ್ಯೋಗ ಕಲ್ಪಿಸಿದ ಮಹಿಳಾ ಉದ್ಯಮಿಗಳ ಉದಾಹರಣೆ ನೀಡಿದ ಡಾ.ಮೀನಾ ಚಂದಾವರಕರ, ಸ್ವತ: ದುಡಿದು ಹಣ ಪಡೆಯುವುದರಿಂದ ದೊರೆಯುವ ಆನಂದವೇ ಬೇರೆಯಾಗಿರುತ್ತದೆ ಎಂದು ಹೇಳಿ, ಕೌಶಲ್ಯ ತರಬೇತಿ ಜೊತೆ ತಯಾರಿಸಿದ ವಸ್ತುಗಳಿಗೆ ಮಾರುಕಟ್ಟೆ ಒದಗಿಸಬೇಕು ಎಂದು ಆಯೋಜಕರಿಗೆ ಸಲಹೆ ನೀಡಿದರು.

ಅತಿಥಿಗಳಾಗಿದ್ದ ಲಾಯನ್ಸ ಮಹಿಳಾ ಅಧ್ಯಕ್ಷೆ ನೇಹಾ ಇಂಜಗನೇರಿ ಹಾಗೂ ಮಾಜಿ ಅಧ್ಯಕ್ಷೆ ತೃಪ್ತಿ ದರಬಾರ ಮಾತನಾಡಿ, ಲಾಯನ್ಸಕ್ಲಬ್ ವತಿಯಿಂದಲೂ ಇಂಥಹ ಕೌಶಲ್ಯ ತರಬೇತಿ ಹಮ್ಮಿಕೊಳ್ಳಲಾಗುತ್ತಿದ್ದು, ಇದರ ಸದುಪಯೋಗ ಮಾಡಿಕೊಳ್ಳಬೇಕೆಂದರು. ತರಬೇತಿ ನೀಡಿದ ಶಿವಾನಿ ಮಾತನಾಡಿದರು. ಬರ್ಡ್ಸ ಅಧ್ಯಕ್ಷ ರಂಗನಗೌಡ ದಂಡಣ್ಣವರ ಅಧ್ಯಕ್ಷತೆ ವಹಿಸಿದ್ದರು. ಅಧ್ಯಕ್ಷೀಯ ಮಾತುಗಳನ್ನಾಡಿದರು. ಸಮಾರಂಭದಲ್ಲಿ ಶಿಬಿರಾರ್ಥಿಗಳಿಗೆ ಪ್ರಮಾಣ ಪತ್ರ ವಿತರಿಸಲಾಯಿತು.

ಪ್ರಾಸ್ತಾವಿಕವಾಗಿ ಮನೋಹರ ಕಟಗೇರಿ, ಮಹಾಂತೇಶ ಅಗಸಿಮುಂದಿನ ಮಾತನಾಡಿದರು.

ಶಿವಕುಮಾರ ರಿಂದ ಸ್ವಾಗತ ಪ್ರವೀಣ ವಂದಿಸಿದರು. ಥೇರಪಿಸ್ಟ ಮಿಸ್ ದೀಪಾ ಹುಣಶೀಗಿಡದ ನಿರೂಪಣೆ ಮಾಡಿದರು.

## ಅಫಜಲಪುರ ವರದಿಗಾರರಾಗಿ ನೇಮಕ



ಕಲಬುರಗಿ:ಏ.21:ಮಲ್ಲಮ್ಮ ನುಡಿ ಪ್ರಾದೇಶಿಕ ದಿನ ಪತ್ರಿಕೆ-ಯ ಅಫಜಲಪುರ ತಾಲೂಕು ವರದಿಗಾರರಾಗಿ ಮಂಜುನಾಥ ಮಲ್ಲಿಕಾರ್ಜುನ ಹಡಪದ ಉಡಚಣ ಹಟ್ಟಿ ಅವರನ್ನು ನೇಮಕ ಮಾಡಲಾಗಿದೆ.ಪತ್ರಿಕೆಯ ಓದುಗರು ಸುದ್ದಿಗಳಿಗಾಗಿ,ಜಾಹೀರಾತಿಗಾಗಿ ಸಂಪರ್ಕಿಸಿ.6360259231.

## ಏ.24 ರಂದು ಡಾ.ರಾಜ್‌ಕುಮಾರ್ 97ನೇ ಜಯಂತಿ ಅಂಗವಾಗಿ ರಾಜರಸ ಸಂಗೀತ ಕಾರ್ಯಕ್ರಮ

ಬೀದರ:ಏ.21:ಜಿಲ್ಲಾಡಳಿತ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಬೀದರ ಹಾಗೂ ಕರ್ನಾಟಕ ಕಲಾ, ವಿಜ್ಞಾನ ಹಾಗೂ ವಾಣಿಜ್ಯ ಮಹಾವಿದ್ಯಾಲಯ ಬೀದರ ಇವರ ಸಂಯುಕ್ತಾಶ್ರಯದಲ್ಲಿ ಏಪ್ರಿಲ್.24 ರಂದು ಬೆಳಿಗ್ಗೆ 11 ಗಂಟೆಗೆ ಕರ್ನಾಟಕ ಕಲಾ ವಿಜ್ಞಾನ ಹಾಗೂ ವಾಣಿಜ್ಯ ಮಹಾವಿದ್ಯಾಲಯ ಆವರಣ ಬೀದರದಲ್ಲಿ ಡಾ.ರಾಜಕುಮಾರ್ 97ನೇ ಜಯಂತಿ ಅಂಗವಾಗಿ ರಾಜರಸ ಸಂಗೀತ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

ಕಾರ್ಯಕ್ರಮದ ಉದ್ಘಾಟನೆಯನ್ನು ಬೆಂಗಳೂರು ಚಲನಚಿತ್ರ ನಿರ್ದೇಶಕರು ಹಾಗೂ ನಿರ್ಮಾಪಕರಾದ ಬಿ.ಜೆ.ವಿಷ್ಣುಕಾಂತ ಮಾಡಲಿದ್ದಾರೆ. ಅಧ್ಯಕ್ಷತೆಯನ್ನು ಬೀದರ ಕೆ.ಆರ್.ಇ.ಸಂಸ್ಥೆಯ ಅಧ್ಯಕ್ಷತರಾದ ಬಸವರಾಜ ಜಾಬಶೆಟ್ಟಿ ವಹಿಸಲಿದ್ದಾರೆ. ಮುಖ್ಯ ಅತಿಥಿಗಾಗಿ ಬೀದರ ವಿಶ್ವವಿದ್ಯಾಲಯದ ಕುಲಸಚಿವರಾದ ಸುರೇಖಾ, ಬೆಂಗಳೂರು ಜಾನಪದ ಅಕಾಡೆಮಿ ಸದಸ್ಯರಾದ ವಿಜಯಕುಮಾರ ಸೋನಾರೆ, ಬೀದರ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ಸಿದ್ರಾಮ ಸಿಂಧೆ ಹಾಗೂ ಕಾರ್ಯಕ್ರಮದ ವಿಶೇಷ ಉಪನ್ಯಾಸವನ್ನು ಬೀದರ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾದ ಸುರೇಶ ಚನ್ನಶೆಟ್ಟಿ ಅವರು ನೀಡಲಿದ್ದಾರೆ. ನಂತರ ಶಿವಕುಮಾರ ಪಾಂಚಾಳ ಆಕಾಶವಾಣಿ ಕಲಾವಿದರು, ಬಈದರ ಇವರಿಂದ ಸಂಗೀತ ರಸಮಂಜರಿ ಕಾರ್ಯಕ್ರಮ ಜರುಗಲಿದೆ.

ವಿಶೇಷ ಆಹ್ವಾನಿತರಾಗಿ ಬೀದರ ಕೆ.ಆರ್.ಇ.ಸಂಸ್ಥೆಯ ಉಪಾಧ್ಯಕ್ಷರಾದ ಬಿ.ಜಿ.ಶೆಟಕಾರ, ಕಾರ್ಯದರ್ಶಿಗಳಾದ ಸತೀಶ ಪಾಟೀಲ, ಜಂಟಿ ಕಾರ್ಯದರ್ಶಿಗಳಾದ ಶಿವಾನಂದ ಗಾದಗೆ ಆಗಮಿಸಲಿದ್ದಾರೆ.

## ಜಾತಿ ಗಣತಿ ಬೇಡ ಆಕ್ರಮ ಆಸ್ತಿ ಗಣತಿ ಮಾಡಿ ಕ್ರಮ ಕೈಗೊಳ್ಳಿ



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ:ಏ.21: ಗಣತಿ ಮಾಡಬೇಕಾಗಿರುವುದು ಜಾತಿಗಳನ್ನಲ್ಲ ಭವಿಷ್ಯದ ಕನಸುಗಳ ಗಣತಿ ಅತಿ ವೇಗದಲ್ಲಿ ಎಲ್ಲವೂ ಬದಲಾಗತ್ತಿರುವ ಈವತ್ತಿನ ಕಾಲಮಾನದಲ್ಲಿ ನಮಗೆ ಬೆಕಾಗಿರುವುದು ಜಾತಿ ಜನಗಣತಿ ಅಲ್ಲ. ಶಾಸಕರು ಸಂಸದರು ಮಂತ್ರಿ ಮಹೋದಯರ ಆಸ್ತಿ ಎಷ್ಟು ಹೆಚ್ಚಾಗಿದೆ ಅನ್ನುವುದರ ಗಣತಿ ಅವರು ಸಮಾಜಕ್ಕೆ ಎಷ್ಟು ಸೇವೆ ಮಾಡಿದ್ದಾರೆ ಅನ್ನುವುದರ ಗಣತಿ ಅಧಿಕಾರಿಗಳು ಭ್ರಷ್ಟಾಚಾರ ಮಾಡಿ ಲಂಚ ಪಡೆದು ಕೊಳೆ ಹೊಡೆದ ಆಕ್ರಮ ಹಣ ಆಸ್ತಿಗಳ ಗಣತಿ ಕಾರ್ಯ ಕೈಗೊಂಡು ಆಕ್ರಮವೆಂದು ಕಂಡು ಬಂದ ಆಸ್ತಿ ಯಾವುದೇ ಒತ್ತಡಕ್ಕೆ ಮಣಿಯದೆ ಮುಲಾಜಿಲ್ಲದೆ ಮುಟ್ಟುಗೋಲು ಹಾಕಿ ರಾಜ್ಯದ ಬಡವರ ಪರ ಯೋಜನೆಗಳನ್ನು ಅನುಷ್ಠಾನಕ್ಕೆ ತಂದು ಮೂಲ ಬುತ ಸೌಕರ್ಯ ಕಲ್ಪಿಸಲು ಸರ್ಕಾರ ಅಗತ್ಯ ಕಠಿಣ ಕ್ರಮ ಕೈಗೊಳ್ಳಲು ಮುಂದಾಗಲಿ ಎಂದು ಸಾಮಾಜಿಕ ಹೋರಾಟಗಾರ ವಿಶ್ವನಾಥ ಪಾಟೀಲ್ ಗವನಳ್ಳಿ ಅವರು ರಾಜ್ಯ ಸರ್ಕಾರಕ್ಕೆ ಒತ್ತಾಯ ಪಡಿಸಿದ್ದಾರೆ

## ಮುಧೋಳ (ಬಿ):ನರೇಗಾ ಕಾರ್ಮಿಕರಿಗೆ ಉಚಿತ ಆರೋಗ್ಯ ಶಿಬಿರ



ಮಲ್ಲಮ್ಮ ನುಡಿ ವಾರ್ತೆ

ಕಮಲನಗರ:ಏ.21:ತಾಲೂಕಿನ ಮುಧೋಳ(ಬಿ) ಗ್ರಾಮದಲ್ಲಿ ದುಡಿಯೋಣ ಬಾ ಅಭಿಯಾನ ಮತ್ತು ಸ್ತ್ರೀಚೇತನ ಅಭಿಯಾನಕ್ಕೆ ಚಾಲನೆ ನೀಡಿ ನರೇಗಾ ಕೂಲಿಕಾರರಿಗೆ ಆರೋಗ್ಯ ಶಿಬಿರ ನಡೆಸಲಾಯಿತು.

ಗ್ರಾ.ಪಂ.ನ ಪಂಚಾಯತ ಅಭಿವೃದ್ಧಿ ಅಧಿಕಾರಿ ದತ್ತಾತ್ರಿ ಪೂಜಾರಿ ಮಾತನಾಡಿ,

ಆರೋಗ್ಯವೇ ಭಾಗ್ಯ ಎಂಬಂತೆ ದೈಹಿಲವಾಗಿ ಸದೃಢವಾಗಿದ್ದರೆ ಮಾತ್ರ ಮಾನಸಿಕ ನೆಮ್ಮದಿ ಇರಲು ಸಾಧ್ಯ. ಆದ್ದರಿಂದ ಯಾರು ಆರೋಗ್ಯದ ಬಗ್ಗೆ ನಿರ್ಲಕ್ಷ್ಯ ತೋರದೇ ತಪಾಸಣೆಯನ್ನು ಮಾಡಿಕೊಳ್ಳಿ ಎಂದು ತಿಳಿಸಿದರು.


ಗ್ರಾಮದಿಂದ ಯಾರು ವಲಸೆ ಹೋಗದೇ ಪ್ರತಿಯೊಬ್ಬರು ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯ ಸದ್ಬಳಕೆ ಮಾಡಿಕೊಂಡು ಸ್ವಾವಲಂಭಿ ಜೀವನ ನಡೆಸಿ ಇದೀಗ ಕೂಲಿ ಮೊತ್ತ ಕೂಡ 370 ಆಗಿದ್ದು, ಪುರುಷ ಮತ್ತು ಮಹಿಳೆಯರಿಗೆ ಸಮಾನ ಕೂಲಿ ಸಿಗುವುದರ ಜೊತೆಗೆ ಸಮಯ ಕೂಡ ಸಿಗುತ್ತದೆ. ಇನ್ನು ಹೆಚ್ಚಿನ ಕೂಲಿಕಾರರು ಇದರ ಲಾಭ ಪಡೆದುಕೊಳ್ಳಿ, ಗರ್ಭಿಣಿ ಮಹಿಳೆಯರಿಗೆ, ಹಿರಿಯ ನಾಗರಿಕರಿಗೆ ಮತ್ತು ವಿಶೇಷಚೇತನರಿಗೆ ಕೆಲಸದಲ್ಲಿ ರಿಯಾಯತಿ ಕೂಡ ಇದೆ. ಜೊತೆಗೆ ಆರೋಗ್ಯವೇ ಭಾಗ್ಯವಾಗಿದ್ದು, ಎಲ್ಲ ಕೂಲಿಕಾರರು ಆರೋಗ್ಯದ ಬಗ್ಗೆ ನಿಷ್ಕಾಳಜಿ ತೋರಿಸದೇ ಎಲ್ಲರು ಆರೋಗ್ಯದ ಕಡೆ ಗಮನ ಹರಿಸಿ ಅದಕ್ಕಾಗಿ ನೀವು ಕೆಲಸ ಮಾಡುವ ಸ್ಥಳದಲ್ಲಿಯೇ ಆರೋಗ್ಯ ಶಿಬಿರ ಏರ್ಪಡಿಸಲಾಗಿದೆ ಎಲ್ಲರು ಇದರ ಸದುಪಯೋಗ ಪಡೆದುಕೊಳ್ಳಿ ಎಂದರು. ಜೊತೆಗೆ ನರೇಗಾ ಕೂಲಿ ಕಾರ್ಮಿಕರಿಗೆ ಅನೂಕೂಲವಾಗಲಿ ಎಂದು ಕೂಸಿನ ಮನೆ ಕೇಂದ್ರವನ್ನು ಪ್ರಾರಂಭಿಸಲಾಗಿದೆ. ಆದ ಕಾರಣ ನಿಮ್ಮ ಮಕ್ಕಳನ್ನು ಕೂಸಿನ ಮನೆ ಕೇಂದ್ರದಲ್ಲಿ ಬಿಟ್ಟರೆ ಆ ಮಕ್ಕಳನ್ನು ನೋಡಿಕೊಳ್ಳಲು ಆರೈಕೆದಾರರು ಇದ್ದಾರೆ ಪೌಷ್ಟಿಕ ಆಹಾರ ಜೊತೆಗೆ ಆಟ, ಪಾಠಗಳನ್ನು ಕೂಡ ಮಾಡಿಸುತ್ತಾರೆ.

ಎಚ್ ಐಓ ಸಂಜುಕುಮಾರ ಮಾತನಾಡಿ ನೀರಿನ ತೊಟ್ಟಿಗಳನ್ನು ಚನ್ನಾಗಿ ತೊಳೆದು ಸ್ವಚ್ಛ ಬಟ್ಟೆಯಿಂದ ಒರೆಸಿ ನೀರನ್ನು ಸಂಗ್ರಹಿಸಿ ಸೇವಿಸಿ, ಇಲ್ಲವಾದಲ್ಲಿ ಮಲೇರಿಯಾ, ಟಿಬಿ ಅಂತಹ ರೋಗಗಳು ಬರುತ್ತವೆ. ಆನೆಕಾಲು ರೋಗ, ಕ್ಷಯ ರೋಗದ ಬಗ್ಗೆ ವಿವರಿಸಿದರು. ಜ್ವರ, ಕೆಮ್ಮು, ನೆಗಡಿಯಂತಹ ಲಕ್ಷಣಗಳು ಕಂಡರೆ ಬಂದರೆ ತಕ್ಷಣವೇ ಆಸ್ಪತ್ರೆಗೆ ತರಳಿ ವೈದ್ಯರನ್ನು ಸಂಪರ್ಕಿಸಿ ಎಂದರು.

ಕೂಲಿಕಾರರಿಗೆ ಬಿ.ಪಿ, ಶುಗರ್ ತಪಾಸಣೆ ಮಾಡಲಾಯಿತು.

ಈ ಸಂದರ್ಭದಲ್ಲಿ ಅಧ್ಯಕ್ಷರಾದ ಧನರಾಜ್ ಕಾಸ್ಲೆ, ಸದಸ್ಯರಾದ ತುಳಸಿರಾಮ ರಾಠೋಡ, ಉಪಾಧ್ಯಕ್ಷರಾದ ನಿಕಿತಾ ಉದಯ ಸೋಲಾಪೂರೆ, ಎಚ್ ಐಓ ಅನೀಲಕುಮಾರ, ಐಇಸಿ ಸಂಯೋಜಕರಾದ ಸವಿತಾ ನಾಗೇಶ, ಬಿಲ್ ಕಲೆಕ್ಟರ್ ಸಾಯಿಕುಮಾರ, ಗ್ರಾಮ ಕಾಯಕ ಮಿತ್ರ ಪ್ರಿಯಾಂಕ, ವಾಟರ್ ಮ್ಯಾನ್ ಉತ್ತಮ, ಕೂಲಿಕಾರರು ಹಾಗೂ ಗ್ರಾಮ ಪಂಚಾಯತ ಸಿಬ್ಬಂದಿಗಳು ಇದ್ದರು.

## ವಿದ್ಯುತ್ ಸ್ಪರ್ಶದಿಂದ ಮೃತಪಟ್ಟ ವ್ಯಕ್ತಿಯ ಕುಟುಂಬಕ್ಕೆ ಶಾಸಕರ ಹಸ್ತದಿಂದ ಪರಿಹಾರ



ಮಲ್ಲಮ್ಮ ನುಡಿ ವಾರ್ತೆ

ಗುರುಮಠಕಲ್: ಏ. 21: ಕೆಲವು ದಿನಗಳ ಹಿಂದೆ ಗುರುಮಠಕಲ್ ತಾಲೂಕಿನ ಯದ್ಲಾಪುರ್ ಗ್ರಾಮದಲ್ಲಿ ವಿದ್ಯುತ್ ಸ್ಪರ್ಶದಿಂದ ಮೃತಪಟ್ಟ ಅನಿಲ್ ತಂದೆ ಸಾಬಣ್ಣ ಇವರಿಗೆ ಜೆಸ್ಕಾಂ ಇಲಾಖೆಯ ವತಿಯಿಂದ ಮಂಜೂರಾದ 5 ಲಕ್ಷ ರೂಪಾಯಿಗಳ ಪರಿಹಾರ ಧನವನ್ನು ಗುರುಮಠಕಲ್ ಮತಕ್ಷೇತ್ರದ ಯುವ ಶಾಸಕರಾದ ಶರಣಗೌಡ ಕಂದಕೂರ ಅವರು ಮೃತ ಅನಿಲ್ ಅವರ ತಂದೆಯವರಾದ ಸಾಬಣ್ಣ ರವರಿಗೆ ಇಂದು ನೀಡಿ ಸಾಂತ್ವನ ಹೇಳಿದರು.

ಈ ಸಂದರ್ಭದಲ್ಲಿ ಜನತಾದಳ ಪಕ್ಷದ ಜಿಲ್ಲಾಧ್ಯಕ್ಷರಾದ ಸುಭಾಷ್ ಚಂದ್ರ ಕಟಕಟಿ ಯದ್ಲಾಪುರ್ ಗ್ರಾಮದ ಮುಖಂಡರಾದ ಅನಂತಪ್ಪ ಬೋಯಿನ್, ಮಹೇಶ್, ಲಿಂಗಾರೆಡ್ಡಿ ಮತ್ತು ಜೆಸ್ಕಾಂ ಇಲಾಖೆಯ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರದ ಮಾನಪ್ಪ ಮತ್ತು ಶಾಖಾಧಿಕಾರಿಯಾದ ಗೋಳಪ್ಪ ಮತ್ತು ಸಂದೀಪ್ ಹಜಾರೆ ಇವರು ಉಪಸ್ಥಿತರಿದ್ದರು.

## ಪುರುಷಾರ್ಥ ಸಾಧನೆಗೆ ಆರೋಗ್ಯ ಮುಖ್ಯ : ಅಮೃತಾನಂದ ಮಹಾಸ್ವಾಮಿಗಳು.





ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ: ಏ 21 ನಮ್ಮ ದೇಶದಲ್ಲಿ ಪ್ರಾಚೀನ ಕಾಲದಿಂದ ಇಂದಿನವರೆಗೂ ಶ್ರೇಷ್ಠವಾದ ವೈದ್ಯ ಪದ್ಧತಿಯಿದೆ. ಪುರುಷಾರ್ಥಗಳು ಪಡೆಯಲು ಆರೋಗ್ಯಮುಖ್ಯವಾಗಿದೆ ಎಂದು ಬಾಲಗಾಂವನಗುರುದೇವಾಶ್ರಮದ ಪೂಜ್ಯ ಶ್ರೀ ಅಮೃತಾನಂದ ಮಹಾಸ್ವಾಮಿಗಳು ಹೇಳಿದರು.

ಶ್ರೀ ಬಸವೇಶ್ವರ ದೇವಸ್ಥಾನ ಪಂಚ ಕಮಿಟಿ ಮತ್ತು ವಿಶ್ವಸ್ಥ ಸಮಿತಿವತಿಯಿಂದ ಶ್ರೀಬಸವೇಶ್ವರ ಜಾತ್ರೆ ಮಹೋತ್ಸವ ಅಮೃತ ಮಹೋತ್ಸವ ಪ್ರಯುಕ್ತ ನಗರದ ಅಕ್ಕಮಹಾದೇವಿ ಕಾಲೇಜು ಆವರಣದಲ್ಲಿ ಆಯೋಜಿಸಿದ್ದ ಆರೋಗ್ಯ ತಪಾಸಣೆ, ರಕ್ತ ಮತ್ತು ಅಂಗದಾನ ಶಿಬಿರ ಉದ್ಘಾಟಿಸಿ ಮಾತನಾಡಿ ಶ್ರಮಕ್ಕೆ, ಬೆವರಿಗೆ ಆದ್ಯತೆ ನೀಡಿದರೆ ಆರೋಗ್ಯ ಚೆನ್ನಾಗಿರುತ್ತದೆ ಎಂದರು. ವೈದ್ಯರು ಆರೋಗ್ಯ ತಪಾಸಣೆ ಮಾಡಿ ಔಷಧಿ ಕೊಡುತ್ತಾರೆ. ಆದರೆ ನಾವು ನಮ್ಮ ಆರೋಗ್ಯ ಚೆನ್ನಾಗಿ ಇಟ್ಟುಕೊಳ್ಳಬೇಕು. ಆರೋಗ್ಯ ಚನ್ನಾಗಿರಲು ಉತ್ತಮ ಕೆಲಸ ಮಾಡಬೇಕು. ಬೆಳೆವ ಭೂಮಿ, ಸುಳಿವ ಗಾಳಿ, ಕುಡಿವ ನೀರು ಸೇರಿ ನಿಸರ್ಗ ಕೆಟ್ಟಿದೆ ಎನ್ನುತ್ತೇವೆ. ಸಹಜತೆ ಬಿಟ್ಟು ಕೃತಕತೆಗೆ ಜೋತು ಬಿದ್ದಿರುವ ನಮ್ಮ ಜೀವನ ವಿಧಾನ ಕೆಟ್ಟಿದೆ. ಅದಕ್ಕೇ ಬಿಪಿ, ಶುಗರ್, ಕ್ಯಾನ್ಸರ್, ಬೊಜ್ಜು ಹೆಚ್ಚಾಗುತ್ತದೆ. ನಮ್ಮ ದೇಹ ಹಗುರಾಗುಂತ ಆಹಾರ ಸೇವಿಸಬೇಕು ಎಂದರು.

ಬೀದರ ಬ್ರೀಮ್ಸ್ ನ ಅಂಗರಚನಾಶಾಸ್ತ್ರ ವಿಭಾಗದ ಮುಖ್ಯಸ್ಥ ಡಾ. ಸಂದೀಪ ದೇಶಮುಖ ಮಾತನಾಡಿ, ಅಂಗಾಂಗ ದಾನ ಮಾಡಿ ಹಲವರ ಜೀವನ ಉಳಿಸಲು ಸಾಧ್ಯವಾಗುತ್ತದೆ. ಅಂಗಾಂಗ ಅಧ್ಯಯನಕ್ಕಾಗಿ ಅಂಗ ರಚನಾ ಶಾಸ್ತ್ರದ ವಿದ್ಯಾರ್ಥಿಗಳ ಕಲಿಕೆಯಲ್ಲಿ ಇದು ಅನುಕೂಲ ಎಂದರು.

ಬ್ರೀಮ್ಸ್ ನ ಡಾ. ಜ್ಯೋತಿ ಅವರು ಮಾತನಾಡಿ, ಶರೀರದ ಪ್ರತಿಯೊಂದು ಅಂಗಗಳು ಮುಖ್ಯ. ಸಾವಿನ ನಂತರ ಅದರ ದಾನದಿಂದ ಅವರ ಅಂಗಾಂಗ ಬೇರೆಯವರ ಕಷ್ಟಕ್ಕೆ ಸಹಾಯಕವಾಗುತ್ತದೆ ಎಂದರು.

ಬಿಡಿವಿಸಿ ಉಪಾಧ್ಯಕ್ಷ ಡಾ ಜಿ.ಎಸ್. ಭುರಾಳೆ ಮಾತನಾಡಿ, ಶ್ರೀ ಬಸವೇಶ್ವರ ದೇವಸ್ಥಾನ ಪಂಚ ಕಮಿಟಿ ಮತ್ತು ವಿಶ್ವಸ್ಥ ಸಮಿತಿ ವತಿಯಿಂದ ಕಳೆದ ಹತ್ತು ವರ್ಷಗಳಿಂದ ಆರೋಗ್ಯ ತಪಾಸಣೆ ಮತ್ತು ರಕ್ತದಾನ ಶಿಬಿರ ನಡೆಸಿಕೊಂಡು ಬರುಲಾಗುತ್ತಿದೆ. ಈ ಸಲ ಅಂಗಾಂಗ ದಾನ ಮತ್ತು ದೇಹದಾನ ಹಾಗೂ ಆಯುಷ್ಮಾನ್ ಭಾರತ ಕಾರ್ಡ್ ಹಾಗೂ ಆರೋಗ್ಯ ವಿಮೆ ಮಾಡಿಸುವ ಹೊಸ ಯೋಜನೆ ಹಮ್ಮಿಕೊಂಡಿದ್ದೇವೆ ಎಂದರು. ಬಿಡಿಪಿಸಿ ಅಧ್ಯಕ್ಷ ಬಸವರಾಜ ಕೋರಕೆ ಅಧ್ಯಕ್ಷತೆ ವಹಿಸಿದ್ದರು. ಅಮೋಘ ಸಿದ್ಧ ಮಹಾಸ್ವಾಮಿಗಳು, ಬಿಡಿವಿಸಿ ಅಧ್ಯಕ್ಷ ಶಶಿಕಾಂತ ದುರ್ಗೆ, ಬ್ರೀಮ್ಸ್ ನ ಡಾ. ವಿಜಯಕುಮಾರ್ ಅಂತಪ್ಪ , ಹಿರಿಯ ನಾಗರಿಕರ ಸಂಘದ ಅಧ್ಯಕ್ಷ ಸಿ.ಬಿ. ಪರತಾಪುರೆ, ತಜ್ಞ ವೈದ್ಯರಾದ ಡಾ. ಶರದ ಮಸೂದಿ, ಡಾ. ಗುರುಬಸವ ಲಕಮಾಜಿ, ಡಾ. ಅನಿಲ್ ಮುದ್ದಾ, ಡಾ. ಸದಾನಂದ ಪಾಟೀಲ, ಡಾ. ಪೃಥ್ವಿರಾಜ್ ಬಿರಾದಾರ, ಡಾ. ಸಂದೀಪ ರಂಗದಾಳ, ಆರೋಗ್ಯ ವಿಮೆ ಸಂಯೋಜಕ ಪ್ರವೀಣ ಮಹೇಂದ್ರಕರ, ಆಯುಷ್ಮಾನ್ ಭಾರತನ ಸಂಯೋಜಕ ರವೀಂದ್ರ ಎಚ್.ಎಸ್, ಬಿಡಿಪಿಸಿ ಉಪಾಧ್ಯಕ್ಷ ಮಲ್ಲಿಕಾರ್ಜುನ ಚಿರಡೆ, ಕೋಶಾಧ್ಯಕ್ಷ ರಾಜಕುಮಾರ ಹೊಳಕುಂದೆ, ಕಾರ್ಯದರ್ಶಿ ಶ್ರೀಕಾಂತ ಬಡದಾಳೆ, ಸಹ ಕಾರ್ಯದರ್ಶಿ ವಿವೇಕಾನಂದ ಹೊದಲೂರೆ, ನಿರ್ದೇಶಕರಾದ ಸುಭಾಷ ಹೊಳಕುಂದೆ, ಅಶೋಕ ನಾಗರಾಳೆ, ಕಾಶಪ್ಪಾ ಸಕ್ಕರಭಾವಿ, ಜಗನ್ನಾಥ ಖೂಬಾ, ಭದ್ರಿನಾಥ ಪಾಟೀಲ, ಅನಿಲಕುಮಾರ ರಗಟೆ ರೇವಣಪ್ಪಾ ರಾಯವಾಡೆ ಬಿಡಿವಿಸಿ ನಾಗಯ್ಯ ಸ್ವಾಮಿ, ಮೊದಲಾದವರಿದ್ದರು. ಅಂಗಾಂಗ ದಾನ ನೋಂದಣಿ ಮಾಡಿಸಿದವರನ್ನು ಸನ್ಮಾನಿಸಲಾಯಿತು. 80 ಜನರ ಹೃದಯ ತಪಾಸಣೆ, 75 ಜನ ರಕ್ತ ದಾನ 06 ದೇಹದಾನ 04 ಜನ ಅಂಗಾಂಗ ದಾನ ಮಾಡಿದ್ದಾರೆ. ಆರ್ಯಾ ಕಂಪ್ಯೂಟರ್ ಸಹಯೋಗದಲ್ಲಿ 190 ಆಯುಷ್ಮಾನ್ ಕಾರ್ಡ್ ನೋಂದಣಿ ಮಾಡಿಸಲಾಯಿತು. ಜ್ಯೋತಿ ತುಗಾವೆ ನಿರೂಪಿಸಿ ವಂದಿಸಿದರು.

## ನಾಳೆ ಸರ್ಕಾರಿ ನೌಕರರ ಸಂಘದ ನೂತನ ಪದಾಧಿಕಾರಿಗಳ ಪದಗ್ರಹಣ



ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:- ಪಟ್ಟಣದ ಗಾಂಧಿ ವೃತ್ತ (ಚೌಕ್) ಸಮೀಪ ಇರುವ ಆರ್ಯ ಸಮಾಜ ಮಂದಿರದಲ್ಲಿ ಏಪ್ರಿಲ್ 23ರಂದು ಬೆಳಿಗ್ಗೆ 10:30 ಘಂಟೆಗೆ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ತಾಲೂಕ ಸಂಘದ ವತಿಯಿಂದ ಸಂವಿಧಾನ ಶಿಲ್ಪಿ ಡಾ. ಬಾಬಾ ಸಾಹೇಬ್ ಅಂಬೇಡ್ಕರ್ ಅವರ 134ನೇ ಜಯಂತೋತ್ಸವ ಹಾಗೂ ನೂತನ ಪದಾಧಿಕಾರಿಗಳ ಪದಗ್ರಹಣ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಸರ್ಕಾರಿ ನೌಕರರ ಸಂಘದ ತಾಲೂಕಾಧ್ಯಕ್ಷ ರಾಜಶೇಖರ ಉಪ್ಪಿನ ತಿಳಿಸಿದ್ದಾರೆ. ಡಾ. ಬಾಬಾ ಸಾಹೇಬ್ ಅಂಬೇಡ್ಕರ್ ಅವರ ಭಾವಚಿತ್ರಕ್ಕೆ ಸರ್ಕಾರಿ ನೌಕರರ ಸಂಘದ ಜಿಲ್ಲಾ ಕಾರ್ಯದರ್ಶಿ ಪ್ರಭುಲಿಂಗ ತುಗಾಂವೆ, ದೇವಪ್ಪ ಚಾಂಬೋಳೆ, ರಾಜಕುಮಾರ ಮಾಳಗೆ ಪೂಜೆ ಸಲ್ಲಿಸಿದ್ದಾರೆ. ಉದ್ಘಾಟಕರಾಗಿ ಸರ್ಕಾರಿ ನೌಕರರ ಸಂಘದ ಜಿಲ್ಲಾಧ್ಯಕ್ಷ ಸೋಮಶೇಖರ ಬಿರಾದಾರ್ ಚಿದ್ರಿ, ಅಧ್ಯಕ್ಷತೆ ರಾಜಶೇಖರ ಉಪ್ಪಿನ, ಅಧಿಕಾರ ಹಸ್ತಾಂತರ ನಿಕಟ ಪೂರ್ವ ಅಧ್ಯಕ್ಷ ರಾಜಕುಮಾರ ಬೇಲೂರೆ, ಉಪನ್ಯಾಸ ಡಾ. ಜಯಕುಮಾರ್ ಎ. ಸಿಂಧೆ, ತಹಶೀಲ್ದಾರ್ ಮಂಜುನಾಥ್ ಪಂಚಾಳ, ತಾಲೂಕ ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ಲಕ್ಷ್ಮಿ ಬಿರಾದಾರ್, ಪುರಸಭೆ ಮುಖ್ಯಾಧಿಕಾರಿ ಹುಸಾಮುದ್ದೀನ್ ಬಾಬಾ, ಕ್ಷೇತ್ರ ಶಿಕ್ಷಣಾಧಿಕಾರಿ ವೆಂಕಟೇಶ್ ಗುಡಾಳ, ಸುರೇಶ್ ಚನ್ನಶೆಟ್ಟಿ, ರಾಜೇಂದ್ರಕುಮಾರ ಗಂದಗೆ, ಡಾ. ವಿಜಯ ಹಿರಸಕ್ಕರ್, ಬಾಷುಮಿಯಾ ಕೊಂಚೂರ್, ಡಾ. ಶಾಂತವೀರ್ ಗೋಪಾ, ಕೃಷ್ಣರೆಡ್ಡಿ, ವೆಂಕಟಪ್ಪ, ರಾಮಕೃಷ್ಣ ನಿರ್ಣಾಕ್ಕರ್, ಡಾ. ದಯಾನಂದ ಕಾರಬಾರಿ, ಶಿವಪ್ಪ ಗುಮ್ಮಾ, ಅಶೋಕಕುಮಾರ ಮಹೇಂದ್ರಕ್ಕರ್, ರಾಜಪ್ಪ ಜಮಾದರ್, ಮಾರುತಿ ಖಂಡಗೊಂಡ, ಪಂಡಿತ ಕಲ್ಯಾಣಿ, ಅನೀಲಕುಮಾರ್ ಸಿಂಧೆ, ಪ್ರೇಮಿಳಾ ರೆಡ್ಡಿ, ಸಂಗಮೇಶ ಜವಾದಿ ಮುಖ್ಯ ಅತಿಥಿಗಳಾಗಿ ಭಾಗವಹಿಸಲ್ಲಿದ್ದಾರೆ. ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮ ಯಶಸ್ವಿಗೊಳಿಸಬೇಕೆಂದು ರಾಜಶೇಖರ ಉಪ್ಪಿನ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅದ್ಧೂರಿಯಾಗಿ ಜರುಗಿದ ರಾಮನವಮಿ ಉತ್ಸವ




ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ: ಪಟ್ಟಣದಲ್ಲಿ ಶ್ರೀರಾಮ ನವಮಿಯನ್ನು ಶ್ರದ್ಧಾ, ಭಕ್ತಿಯಿಂದ ಅದ್ಧುರಿಯಾಗಿ ಆಚರಿಸಲಾಯಿತು. ಶ್ರೀರಾಮನಿಗೆ ಅಲಂಕಾರ, ವಿಶೇಷ ಪೂಜೆ ಸಲ್ಲಿಸಿ, ಶ್ರೀರಾಮ ಸೇನೆಯ ಕಾರ್ಯಕರ್ತರು, ಭಕ್ತರು ಶ್ರೀರಾಮನ ಭಾವಚಿತ್ರ ಮತ್ತು ಶಿವಾಜಿ ಮಹಾರಾಜರ ಭಾವಚಿತ್ರದ ಭವ್ಯ ಮೆರವಣಿಗೆ ನಡೆಸಿದರು. ಪಟ್ಟಣದ ರಾಮದಾಸಿ ಮಠ (ಹನುಮಾನ) ದೇವಸ್ಥಾನದಿಂದ ಆರಂಭಗೊಂಡ ಮೆರವಣಿಗೆ ವಿವಿಧ ಬೀದಿಗಳ ಮೂಲಕ ಭವ್ಯ ಮೆರವಣಿಗೆ ಜರುಗಿ-ತ್ತು. ಮೆರವಣಿಗೆಯುದ್ದಕ್ಕೂ ಶ್ರೀರಾಮ ದೇವರ ಜಯಘೋಷ ಮುಗಿಲು ಮುಟ್ಟಿದ್ದವು. ಕ್ಷೇತ್ರದ ಶಾಸಕ ಡಾ. ಸಿದ್ದು ಪಾಟೀಲ್, ಮಾಜಿ ಸಚಿವ ರಾಜಶೇಖರ ಪಾಟೀಲ್ ಡಿಜೆ ಹಾಡಿಗೆ ಹೆಜ್ಜೆ ಹಾಕಿದರು. ಯುವಕರು ಕೇಸರಿ ಧ್ವಜ ಹಾರಿಸುತ್ತ ಕುಣಿದು ಕುಪ್ಪಳಿಸಿ, ಸಂಭ್ರಮಿಸಿದರು. ಈ ಸಂದರ್ಭದಲ್ಲಿ ಮಲ್ಲಿಕಾರ್ಜುನ ಪಾಟೀಲ, ಶ್ರೀ ರಾಮ ನವಮಿ ಉತ್ಸವ ಸಮಿತಿ ಅಧ್ಯಕ್ಷ ಸಚಿನ ಮಠಪತಿ, ಆಕಾಶ ಗುತ್ತೇದಾರ, ಸಾಯಿ ಶೀರ್ಕೆ, ಉಮೇಶ ರೆಡ್ಡಿ, ರಂಗಾರೆಡ್ಡಿ, ದತ್ತು ಗೌಳಿ, ಪ್ರವೀಣ ಮೇತ್ರಾಸಕರ್, ಅನೀಲಕುಮಾರ್ ಶಿಂಧೆ, ವಿಠಲ ತೆಲಂಗ್, ರಾಜು ಪೂಜಾರಿ, ಅಮರ ರೆಡ್ಡಿ, ಸಿದ್ದು ಚೆನ್ನುರ, ಸಾಯಿ ಮಂಕಲ್, ದತ್ತು ಹಲಗಿ, ರಮೇಶ ಗೌಳಿ, ಅಭಿ ಬರ್ಲಾ, ರವಿ ಬೊರಳೆ ಸೇರಿದಂತೆ ರಾಮ ಭಕ್ತರು ಮೆರವಣಿಗೆಯಲ್ಲಿ ಪಾಲ್ಗೊಂಡಿದ್ದರು.

## ಪೌರ ಕಾರ್ಮಿಕರನ್ನು ಸರ್ಕಾರಿ ನೌಕರರೆಂದು ಪರಿಗಣಿಸಿ ಸೌಲಭ್ಯ ನೀಡಿ: ನೀಲಕಂಠ




ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:- ಕರ್ನಾಟಕ ರಾಜ್ಯ ಪೌರ ನೌಕರರ ಸಂಘ ಶಾಖೆ ಚಿಟಗುಪ್ಪ ವತಿಯಿಂದ ಪಟ್ಟಣದ ಪುರಸಭೆಯಲ್ಲಿ ಪೌರ ಸೇವಾ ನೌಕರರನ್ನು ಸರಕಾರಿ ನೌಕರರೆಂದು ಪರಿಗಣಿಸಿ ಅವರಿಗೆ ನೀಡುವ ಸೌಲಭ್ಯ ನಮಗೂ ನೀಡಬೇಕು ಹಾಗೂ ಇನ್ನಿತರೆ ಬೇಡಿಕೆಗಳು ಈಡೇರಿಸುವಂತೆ ಆಗ್ರಹಿಸಿ ಪುರಸಭೆ ನೌಕರರು ಕೈಗೆ ಕಪ್ಪು ಪಟ್ಟಿ ಧರಿಸಿ ಧರಣಿ ನಡೆಸಿದರು. ಸಂಘದ ಅಧ್ಯಕ್ಷ ನೀಲಕಂಠ ಮಾತನಾಡಿ, ಎಲ್ಲ ಪೌರ ಕಾರ್ಮಿಕರನ್ನು ಸರ್ಕಾರಿ ನೌಕರರೆಂದು ಪರಿಗಣಿಸಿ ಜಿಪಿಎಫ್, ಕೆಜಿಐಡಿ, ಜ್ಯೋತಿ ಸಂಜೀವಿನಿ ಸೇರಿದಂತೆ ಸರಕಾರಿ ನೌಕರರು ಪಡೆಯುವ ಎಲ್ಲ ಸೌಲಭ್ಯಗಳನ್ನು ನೀಡಬೇಕು ಎಂದು ಆಗ್ರಹಿಸಿದರು. ಈ ಸಂದರ್ಭದಲ್ಲಿ ಉಪಾಧ್ಯಕ್ಷ ಧನರಾಜ ಸೇರಿದಂತೆ ಪುರಸಭೆ ಅಧಿಕಾರಿಗಳು, ಸಿಬ್ಬಂದಿ ವರ್ಗದವರು ಹಾಗೂ ಪೌರ ಕಾರ್ಮಿಕರು ಮತ್ತು ಹೊರಗುತ್ತಿಗೆ ನೌಕರರು ಉಪಸ್ಥಿತರಿದ್ದರು.

## ಸೇಡಂ ತಾಲೂಕಿನ ಗುಂಡೇಪಲ್ಲಿ ಸರ್ಕಾರಿ ಡಿಗ್ರಿ ಕಾಲೇಜಿನಲ್ಲಿ ಬಿ.ಎ., ಬಿ.ಕಾಂ. ಪದವಿ ತರಗತಿಗಳಿಗೆ ಪ್ರವೇಶಗಳು ಪ್ರಾರಂಭ.

ಮಲ್ಲಮ್ಮ ನುಡಿ ವಾರ್ತೆ

ಸೇಡಂ ಏ. 21. ತಾಲೂಕಿನ ಗುಂಡೇಪಲ್ಲಿ(ಕೆ ) ಗ್ರಾಮದಲ್ಲಿ 2023-24ರಲ್ಲಿ ಕಲಬುರಗಿ ಜಿಲ್ಲೆಯ ಏಕೈಕ ಮಾದರಿಯ ಪ.ಜಾತಿ/ಪ. ವರ್ಗಗಳ ವಸತಿಯುಕ್ತ ಪ್ರಥಮ ದರ್ಜೆ ಕಾಲೇಜು ಪ್ರಾರಂಭಗೊಂಡಿದ್ದು ಗುಲಬರ್ಗಾ ವಿಶ್ವವಿದ್ಯಾಲಯದಿಂದ ಸಂಲಗ್ನತೆಯೊಂದಿಗೆ ಸುಸಜ್ಜಿತ ಆಧುನಿಕ ಶೈಲಿಯಲ್ಲಿ ಕಟ್ಟಡ ಹೊಂದಿದೆ. 2025-26ನೇ ಶೈಕ್ಷಣಿಕ ಸಾಲಿನಿಂದ ಪದವಿ ತರಗತಿಗಳಿಗಾಗಿ ಬಿ.ಎ., (ಇತಿಹಾಸ, ರಾಜ್ಯಶಾಸ್ತ್ರ, ಅರ್ಥಶಾಸ್ತ್ರ, ಸಮಾಜಶಾಸ್ತ್ರ) ಮತ್ತು ಬಿ.ಕಾಂ ಕೋರ್ಸಗಳಿಗೆ ಪ್ರವೇಶಗಳು ಪ್ರಾರಂಭಗೊಂಡಿವೆ. ಈ ಭಾಗದ ಪಿಯುಸಿ/ಐಟಿಐ ಪಾಸಾದ ವಿದ್ಯಾರ್ಥಿಗಳು ವಿಶೇಷವಾಗಿ ವಿದ್ಯಾರ್ಥಿನಿಯರಿಗೆ ಅನುಕೂಲಕರವಾಗಿದ್ದು ಉನ್ನತ ಶಿಕ್ಷಣದಿಂದ ವಂಚಿತರಾದ ಅರ್ಹ ಪ.ಜಾತಿ/ಪ.ವರ್ಗಗಳ ಹಾಗೂ ಇತರೆ ಹಿಂದುಳಿದ ವರ್ಗಗಳ ಅರ್ಹ ವಿದ್ಯಾರ್ಥಿಗಳು ಪ್ರವೇಶ ಪಡೆಯಬಹುದಾಗಿದೆ. ಸರ್ಕಾರದ ಎಲ್ಲ ರೀತಿಯ ಸೌಲಭ್ಯಗಳು, ಶಿಷ್ಯವೇತನ, ಹಾಗೂ ಎಲ್ಲ ವಿದ್ಯಾರ್ಥಿನಿಯರಿಗೆ ಬೋಧನಾ ಶುಲ್ಕದಿಂದ ವಿನಾಯತಿ ಇರುತ್ತದೆ ಎಂದು ಕಾಲೇಜಿನ ಪ್ರಾಂಶುಪಾಲರಾದ ಡಾ. ಜೈಕಿಶನ ಠಾಕೂರ ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ. ಹೆಚ್ಚಿನ ಮಾಹಿತಿಗಾಗಿ ಮೊಬೈಲ ಸಂ.9845478101/9481614337(ಶರಣು) ಹಾಗೂ 8105453127 ಕಾಲೇಜಿನ ಅಧೀಕ್ಷಕರ ಸಂಖ್ಯೆಗೆ ಸಂಪರ್ಕಿಸಲು ಕೋರಿದೆ.




ರಾಜ್ಯದಲ್ಲಿ ಇತ್ತೀಚೆಗೆ ನಡೆದ ಸಿಇಟಿ ಪರೀಕ್ಷೆ ವೇಳೆ ಜನಿವಾರ ಧರಿಸಿದ್ದ ವಿದ್ಯಾರ್ಥಿಗಳಿಗೆ ಅವಮಾನ ಮಾಡಿದ ಘಟನೆಯನ್ನು ಖಂಡಿಸಿ ಜನಿವಾರ ಧಾರಿಣಿ ಸಮಾಜದಿಂದ ತಾಳಿಕೋಟಿ ಪಟ್ಟಣದಲ್ಲಿ ಸೋಮವಾರ ಬೃಹತ್ ಪ್ರತಿಭಟನಾ ಮೆರವಣಿಗೆ ನಡೆಸಿ ತಹಸಿಲ್ದಾರ್ ಗೆ ಮನವಿ ಸಲ್ಲಿಸಲಾಯಿತು. ಈ ವೇಳೆ ಸಮಾಜದ ಗಣ್ಯರಾದ ವಾಸುದೇವ ಹೆಬಸೂರ, ಅಣ್ಣಪ್ಪ ಜಗತಾಪ, ಜಿ.ಟಿ.ಘೋರ್ಪಡೆ, ಮುದುಕಪ್ಪ ಬಡಿಗೇರ, ಮಾನಸಿಂಗ್ ಕೊಕಟನೂರ, ಅಮಿತಸಿಂಗ್ ಮನಗೂಳಿ, ರವಿ ಚಂದುಕರ, ದತ್ತು ಉಬಾಳೆ, ವಿಠಲ್ ಮೋಹಿತೆ, ಪ್ರಮೋದ್ ಅಗರ್ವಾಲ್, ತಮ್ಮಣ್ಣ ದೇಶಪಾಂಡೆ, ಪ್ರಕಾಶ ಉಬಾಳೆ, ಸತ್ಯನಾರಾಯಣ ತಾಳಪಲ್ಲೆ ಹಾಗೂ ಸಮಾಜ ಬಾಂಧವರು ಇದ್ದರು.

## 'ಮಾಧ್ಯಮ ರತ್ನ ಸಿರಿ' ಪ್ರಶಸ್ತಿಗೆ ಆಯ್ಕೆ



ಮಲ್ಲಮ್ಮ ನುಡಿ ವಾರ್ತೆ

ತಾಳಿಕೋಟಿ ಪಟ್ಟಣದ ಯುವ ಪತ್ರಕರ್ತ ನಂದಕುಮಾರ್ ಕುಲಕರ್ಣಿ ಇವರು ಶ್ರೀ ವಿರಕ್ತೇಶ್ವರ ಭರತನಾಟ್ಯ ಸಂಸ್ಥೆ ತಾಳಿಕೋಟಿ ಇವರು ಕೊಡ ಮಾಡುವ 2024-25 ನೇ ಸಾಲಿನ ರಾಜ್ಯಮಟ್ಟದ "ಮಾಧ್ಯಮ ರತ್ನ ಸಿರಿ" ಪ್ರಶಸ್ತಿಗೆ ಭಾಜನರಾಗಿದ್ದಾರೆ ಮೇ 3 ರಂದು ಪಟ್ಟಣದಲ್ಲಿ ನಡೆಯಲಿರುವ ಸಂಸ್ಥೆಯ 6ನೇ ವಾರ್ಷಿಕೋತ್ಸವ ಸಮಾರಂಭದಲ್ಲಿ ಅವರಿಗೆ ಈ ಪ್ರಶಸ್ತಿಯನ್ನು ಪ್ರಧಾನ ಮಾಡಲಾಗುವುದು.

# ನಡೆದಾಡುವ ದೇವರು ಲಿಂ. ಡಾ.ಚನ್ನಬಸವ ಪಟ್ಟದ್ದೇವರು

ಮಲ್ಲಮ್ಮ ನುಡಿ ವಾರ್ತೆ

ಸಾಮಾಜಿಕ, ಧಾರ್ಮಿಕ, ಶೈಕ್ಷಣಿಕ, ಸಮಾನತೆಗಾಗಿ, ಈ ಭಾಗದ ಅಭಿವೃದ್ಧಿಗಾಗಿ, ಸ್ವಂತ ಕಲ್ಲು ಕಲಸಿ ಶಾಲೆ ಕಟ್ಟಿರುವ ಕಾಯಕ ಜೀವಿ, ಮುಷ್ಠಿ ಫಂಡ್ ನಿಂದ ಬಡವರಿಗೆ ಶಿಕ್ಷಣ ನೀಡಿದ, ನಿಜಾಂ ಆಳ್ವಿಕೆಯಲ್ಲಿ ಉರ್ದು ದಬ್ಬಾಳಿಕೆ ನಡುವೆ ಕನ್ನಡವನ್ನು ಉನ್ನಬಡಿಸಿದ, ಕಲ್ಯಾಣ ಕರ್ನಾಟಕ ಭಾಗದ ನಡೆದಾಡುವ ದೇವರು ಎಂದು ಖ್ಯಾತನಾಮ ಹೊಂದಿರುವ **ಪೂಜ್ಯ ಶ್ರೀ ಮ.ಘ.ಚ. ಡಾ. ಚನ್ನಬಸವ ಪಟ್ಟದ್ದೇವರು.**

ಕಮಲನಗರದಲ್ಲಿ ಹುಟ್ಟಿದ ಕನ್ನಡದ ಪಟ್ಟದ್ದೇವರು:

ಕರ್ನಾಟಕದ ಕಿರಿಟ ಬೀದರ ಜಿಲ್ಲೆಯ, ಕಮಲನಗರ ತಾಲೂಕಿನಲ್ಲಿ 22/04/1890ರಲ್ಲಿ ಸಂಗಮ್ಮ ರಾಜಪ್ಪ ಬುಳ್ಳಾ ದಂಪತಿಗಳ ಉದರದಲ್ಲಿ ಜನಿಸಿದ ಮಹಾರುದ್ರಪ್ಪ ಬುಳ್ಳಾ ಎಂಬ ಮಹಾ ಪುರುಷ ಬಾಲಕ, ಚಿಕ್ಕ ವಯಸ್ಸಿನಲ್ಲಿ ಪ್ಲೇಗೋ ರೋಗದಿಂದ ತಂದೆ ತಾಯಿಯನ್ನು ಕಳೆದು ಕೊಂಡರು. ಮುಂದೆ ಇವರ ಸಂಬಧಿಕರು ಇವರನ್ನು ಭಾಲ್ಕಿಯ ಸಿದ್ದಬಸವ ಸ್ವಾಮೀಜಿಗಳಿಂದ ಲಿಂಗ ದೀಕ್ಷೆ ನೀಡಿ ಭಾಲ್ಕಿ ಮಠಕ್ಕೆ ಒಪ್ಪಿಸದರು.

**ಮುದೋಳ(ಬಿ) ಸ್ವಾಮಿಗಳಿಂದ ಬಾಲ್ಯ ಶಿಕ್ಷಣ:**

ಭಾಲ್ಕಿ ಮಠದಲ್ಲಿ ಗುರು ಸೇವೆ ಮಾಡುತ್ತಾ, ಬಹಳ ಭಕ್ತಿಮಯ ಶಿಷ್ಯನನ್ನು ಲಿಂಗ ದೀಕ್ಷೆ ನಂತರ ಚನ್ನಬಸವ ಎಂದು ನಾಮಕರಣ ಮಾಡಿ, ಮುಂದೆ ಇವರಿಂದ ಈ ಭಾಗದಲ್ಲಿ ಹೆಚ್ಚಿನ ಸಮಾಜ ಸುಧಾರಣೆ ಆಗಬೇಕೆಂದು,

ಕನ್ನಡ ಶಿಕ್ಷಣ ನೀಡಲು ಕಮಲನಗರ ತಾಲೂಕಿನ ಮುಧೋಳ(ಬಿ) "ಚರಮೂರ್ತಿ" ಶ್ರೀ ಮಠದಲ್ಲಿ ಶಿವಲಿಂಗ ಮಹಾಸ್ವಾಮಿಗಳ ಹತ್ತಿರ ಕಳುಹಿಸಿದರು. ಶಾಲೆಗಳು ಇಲ್ಲದ ಆವಾಗಿನ ಪರಿಸ್ಥಿತಿಯಲ್ಲಿ ಸ್ವಾಮೀಜಿಗಳಿಂದ ಮಠದಲ್ಲಿ ಕನ್ನಡ ಜ್ಞಾನ ನೀಡಲಾಗುತ್ತಿತ್ತು. ಶ್ರೀಗಳಿಂದ ಕನ್ನಡ, ಸಂಸ್ಕೃತಿ ಮತ್ತು ಒಳ್ಳೆಯ ಸಂಸ್ಕಾರ ಪಡೆದರು. ಹಾನಗಲ್ಲ ಕುಮಾರ ಶಿವಯೋಗ ಮಂದಿರದಲ್ಲಿ ಹೆಚ್ಚಿನ ಶಿಕ್ಷಣ ಪಡೆದರು.

1924ರಲ್ಲಿ ಭಾಲ್ಕಿ ಮಠದ ಪೀಠಾಧಿಪತಿಯಾಗಿ ಪಟ್ಟಾಭಿಷೇಕ:

ಚರಮೂರ್ತಿ ಶಿವಲಿಂಗ ಮಹಾಸ್ವಾಮಿಗಳು ಮತ್ತು ಹಾನಗಲ್ಲ ಕುಮಾರ ಶಿವಯೋಗಿ ಸೇರಿದಂತೆ ಇನ್ನಿತರ ಮಹಾಸ್ವಾಮಿಗಳ ಸಾನಿಧ್ಯದಲ್ಲಿ ಚನ್ನಬಸವ ಪಟ್ಟದ್ದೇವರು ಅದ್ದೂರಿಯಾಗಿ ಪಟ್ಟಾಭಿಷೇಕ ಮಾಡಲಾಯಿತು. ಆನೆಮೇಲೆ ಭಾಲ್ಕಿಯ ಗಲ್ಲಿ ಗಲ್ಲಿಯಲ್ಲಿ ಮೆರವಣಿಗೆ ನಡೆಯಿತು, ಸಾವಿರಾರು ಭಕ್ತರು ಸಂಭ್ರಮ ಸಡಗರಪಟ್ಟರು.

ಹೊರಗಡೆ ಉರ್ದು ಫಲಕ ಹಾಕಿ ಒಳಗಡೆ ಕನ್ನಡ ಕಲಿಸಿದ ಪಟ್ಟದ್ದೇವರು:

ನಿಜಾಮ ಆಳ್ವಿಕೆಯ ಇದ್ದ ಈ ಪ್ರದೇಶದಲ್ಲಿ ಉರ್ದು ಶಿಕ್ಷಣಕ್ಕೆ ಹೆಚ್ಚಿನ ಒತ್ತು ನೀಡಲಾಗಿತ್ತು, ಕನ್ನಡ ಕಲಿಯಲು ಅವಕಾಶ ಇರಲಿಲ್ಲ, ಇಂಥ ಸಂದರ್ಭದಲ್ಲಿ ಹೊರಗಡೆ ಉರ್ದು ಫಲಕ ಹಾಕಿ ಒಳಗಡೆ ಕನ್ನಡ ಶಿಕ್ಷಣವನ್ನು ನೀಡಿದ ನಮ್ಮ ಕನ್ನಡದ ಪಟ್ಟ ದೇವರು. 1936ರಲ್ಲಿ ಶಾಂತಿವರ್ಧಕ ಶಿಕ್ಷಣ ಸಂಸ್ಥೆ ಸ್ಥಾಪಿಸಿ ಬಡ ಮಕ್ಕಳಿಗೆ ಶಿಕ್ಷಣ ದಾಸೋಹ ನೀಡಿದರು.


ಮುಂದೆ 1992ರಲ್ಲಿ ಹಿರೇಮಠ ಸಂಸ್ಥಾನ ವಿದ್ಯಾಪೀಠ ಟ್ರಸ್ಟ್ ಸ್ಥಾಪಿಸಿ ಗುರುಕುಲ ಶಿಕ್ಷಣ ಕ್ಕೆ ಒತ್ತು ನೀಡಿದರು.

**ನೂತನ ಅನುಭವ ಮಂಟಪದ ಶಿಲ್ಪಿ:**

12ನೇ ಶತಮಾನದಲ್ಲಿ ಶರಣರು, ಕಾಯಕ ಜೀವಿಯಾಗಿ ಸಮಾಜ ಸುಧಾರಣೆಗೆ ವಚನಗಳ ಮೂಲಕ ವಚನ ಕ್ರಾಂತಿಯನ್ನು ಹರಿಸಿದರು, ಕರ್ನಾಟಕದ ಯಾವ ಸರ್ಕಾರ, ಯಾವ ಮಠಗಳು ಬಸವಕಲ್ಯಾಣದ ಕಡೆ ಮುಖ ಮಾಡದಿದ್ದಾಗ, ಭಾಲ್ಕಿ ಮಠದಿಂದ ಪಾದಯಾತ್ರೆ ಮೂಲಕ ಬಸವಕಲ್ಯಾಣಕ್ಕೆ ಹೋಗಿ ಅನುಭವ ಮಂಟಪ ಸ್ಥಾಪಿಸಿ ನಾಡಿನ ಗಮನ ಸೆಳೆದವರು.

ಅಸ್ಪರ್ಶತೆ ತೊಡಗಿಸಿದ ಸ್ವಾಮೀಜಿ:

ದಲಿತರಿಗೆ ಬಾವಿ ನೀರು ತೆಗೆದುಕೊಳ್ಳಲು ಅವಕಾಶ ನೀಡದ ಸಂದರ್ಭದಲ್ಲಿ ಮುಂದೆ ನಿಂತು ನೀರು ಕೊಡಿಸಿದ್ದರು. ದಲಿತರಿಗೆ ಲಿಂಗದೀಕ್ಷೆ ನೀಡಿ, ಎಲ್ಲರನ್ನು ಸಮಾನರಾಗಿ ಕಾಣುವ ಪೂಜ್ಯರು ಯಾರಿಗೆ ಭೇದ ಭಾವ ಮಾಡುತ್ತಿರಲಿಲ್ಲ, ಹಿಂದೂ ಮುಸ್ಲಿಂ ಎನ್ನದೆ ಎಲ್ಲರು ಶ್ರೀ ಗಳನ್ನು ಬಹಳ ಗೌರವ ದಿಂದ ಕಾಣುತ್ತಿದ್ದರು.



ಬೀದರ ಜಿಲ್ಲೆಯ ಮಕ್ಕಳ ಶೈಕ್ಷಣಿಕ ಕ್ಷೇತ್ರದಲ್ಲಿ ಸಾಧನೆ

ಡಾ. ಚನ್ನಬಸವ ಪಟ್ಟದ್ದೇವರು ಅಂದು ಶಾಂತಿವರ್ಧಕ ಶಿಕ್ಷಣ ಸಂಸ್ಥೆ ಹಾಗೂ ಹಿರೇಮಠ ಸಂಸ್ಥಾನ ವಿದ್ಯಾಪೀಠ ಟ್ರಸ್ಟ್ ಸ್ಥಾಪಿಸಿದ ಶಿಕ್ಷಣ ಸಂಸ್ಥೆಯಲ್ಲಿ ಕಲಿತ ಮಕ್ಕಳು ಇಂದು ರಾಜ್ಯ -ಅಂತರರಾಜ್ಯ ಮಟ್ಟದಲ್ಲಿ ಸಾಧನೆ ಮಾಡುತ್ತಿದ್ದು, ಪೂಜ್ಯರು ಈ ಭಾಗದಲ್ಲಿ ಹಚ್ಚಿದ ಎರಡೂ ಶಿಕ್ಷಣದ ಗಿಡಗಳು ಇಂದು ವಿಶಾಲವಾದ ಹೆಮ್ಮರವಾಗಿ ಸಾವಿರಾರು ಮಕ್ಕಳ ಉಜ್ವಲ ಭವಿಷ್ಯದ ಬುನಾದಿಯಾಗಿದೆ. ಇದು ಅವರು ನಮ್ಮ ಭಾಗದಲ್ಲಿ ಮಾಡಿದ ಶೈಕ್ಷಣಿಕ ಕ್ರಾಂತಿಯಾಗಿದೆ.

ಪೂಜ್ಯರ ಆಶೀರ್ವಾದದಿಂದ ಇಲ್ಲಿಯ ನಾಯಕರು, ಸ್ವಾಮೀಜಿಗಳು ರಾಜ್ಯದಂತ್ಯ ಪ್ರಸಿದ್ದಿ:

ಅಂದು ಪೂಜ್ಯರ ಜೊತೆ-ಗೂಡಿ ಸಮಾಜ ಸುಧಾರಣೆ ಮಾಡಿದ ನಾಯಕರು ಇಂದು ಜಿಲ್ಲೆಯಲ್ಲದೆ ಕರ್ನಾಟಕ ರಾಜ್ಯದ ತುಂಬಾ ಹೆಸರುವಾಸಿಯಾದ ನಾಯಕರಾಗಿ ಹೊರಹೊಮ್ಮಿದ್ದಾರೆ, ಈ ಭಾಗದಲ್ಲಿರುವ ಸಣ್ಣ ಮಠವು ಇಂದು ರಾಜ್ಯದ ನಾನಾ ಭಾಗದ ಪ್ರಸಿದ್ಧ ಮಠಾಧೀಶರು ಬಂದು ಭೇಟಿನೀಡುವಂತ ಖ್ಯಾತಿಗಳಿಸಿದೆ, ಆಶೀರ್ವಾದದಿಂದ ಪೂಜ್ಯರ ಆಚಾರ ವಿಚಾರಗಳನ್ನು ಎತ್ತಿ ಹಿಡಿಯುವ ಇಂದಿನ ಪೀಠಾಧಿಪತಿಗಳು ರಾಜ್ಯ ಅಂತರ ರಾಜ್ಯ ಮಟ್ಟದಲ್ಲಿ ಬೆಳೆದು ಸೇವೆ ನೀಡುತ್ತಿದ್ದಾರೆ.

ಸಾಮಾಜಿಕ ಕ್ಷೇತ್ರದಲ್ಲಿ ಹೋರಾಟ:

ಪಟ್ಟದೇವರು ಸಾಮಾಜಿಕ ಸೇವೆಯಲ್ಲಿ ತಮ್ಮನ್ನು ತಾವು ತೊಡಗಿಸಿಕೊಂಡು, ಸಾಮಾಜಿಕ ಹೋರಾಟದಲ್ಲಿ ಮುನ್ನುಗ್ಗುತ್ತಿದ್ದರು, ರೈಲು ರೋಕೋ ಚಳುವಳಿ ಮಾಡಿ, ತಮ್ಮ ಸಾಮಾಜಿಕ ಬದ್ಧತೆ ಎತ್ತಿ ಹಿಡಿದ್ದರು. ಬರಗಾಲ ಇದ್ದಾಗ "ಮುಷ್ಠಿ ಫಂಡ್" ಸ್ವಂತ ಜೋಳಿಗೆ ಹಿಡಿದು ಮನೆ ಮನೆಗೆ ತೇರಳಿ ಬಡ ಮಕ್ಕಳ ಶಿಕ್ಷಣ ಹಾಗೂ ಊಟ ನೀಡುತ್ತಿದ್ದರು. ಇಂತಹ ಕಾರ್ಯ ಜನಕ್ಕೆ ಬಹಳ ಹತ್ತಿರ ಮಾಡಿತ್ತು, ಈ ಸ್ವಾಮೀಜಿ ನಮ್ಮಗಾಗಿ ಇಷ್ಟು ಕಷ್ಟಪಡುತ್ತಿದ್ದಾರೆ ಇವರು ನಮ್ಮ ಭಾಗದ ದೇವರು, ನಮ್ಮಗೆ ಸಿಕ್ಕ ನಡೆದಾಡುವ ದೇವರು ಎಂದು ಕೊಂಡಾಡುತ್ತಿದ್ದರು.

**ಶ್ರೀ ಗಳ ಸಾಧನೆಗೆ ಪ್ರಶಸ್ತಿಗಳ ಮಾಹಾಪುರ:**

ಸ್ವಾಮೀಜಿಯವರಿಗೆ ಭಾರತದ ಮಾಜಿ ರಾಷ್ಟ್ರಪತಿ ಶ್ರೀ ಗಿಯಾನಿ ಜೈಲ್ ಸಿಂಗ್ ಅವರು ರಾಷ್ಟ್ರೀಯ ಸಮಗ್ರತೆ ಪ್ರಶಸ್ತಿ ನೀಡಿ ಗೌರವಿಸಿದರು. ಗುಲ್ಬರ್ಗ ವಿಶ್ವವಿದ್ಯಾನಿಲಯವು ಅವರಿಗೆ ಗೌರವ ಡಾಕ್ಟರ್ ಆಫ್ ಲಿಟರೇಚರ್ ಪದವಿಯನ್ನು ನೀಡುವ ಮೂಲಕ ಅವರ ಅಸಾಧಾರಣ ಕೊಡುಗೆಗಳನ್ನು ಗುರುತಿಸಿದೆ. ಹೀಗೆ ಅವರಿಗೆ ಅನೇಕ ಪ್ರಶಸ್ತಿಗಳಿಂದ ಗೌರವಿಸಲಾಯಿತು.

**ಏಪ್ರಿಲ್ 22 1999 ರಂದು ನಮ್ಮನ್ನು ಅಗಲಿದರು:**

ಶತಾಯುಷಿ ಶ್ರೀ ತಮ್ಮ 109 ವರ್ಷ ಕಾಲ

ಸುದೀರ್ಘ ಸೇವೆ ಈ ಭಾಗದ ಜನರಿಗೆ ನೀಡಿದರು, ಇವರ ಮೋಕ್ಷ ಕಾರ್ಯಕ್ಕೆ ರಾಜ್ಯದ ಹೆಸರಾಂತ ಸ್ವಾಮೀಜಿಗಳು ಸಾಕ್ಷಿಯಾಗಿದ್ದರು. ಭಾಲ್ಕಿಯಲ್ಲಿ ಚನ್ನಬಸವ ಆಶ್ರಮ ಎಂದು ಇವರ ಗದ್ದುಗೆ ಕಟ್ಟಲಾಗಿದೆ.

ಹೀಗೆ ಈ ಭಾಗದಲ್ಲಿ ಸಾಮಾಜಿಕ, ಧಾರ್ಮಿಕ, ಶೈಕ್ಷಣಿಕ, ಸಮಾನತೆಗಾಗಿ, ಈ ಭಾಗದ ಅಭಿವೃದ್ಧಿಗಾಗಿ, ಸ್ವಂತ ಕಲ್ಲು ಕಲಸಿ ಶಾಲೆ ಕಟ್ಟಿರುವ ಕಾಯಕ ಜೀವಿ, ಮುಷ್ಠಿ ಫಂಡ್ ನಿಂದ ಬಡವರಿಗೆ ಶಿಕ್ಷಣ ನೀಡಿದ, ನಿಜಾಂ ಆಳ್ವಿಕೆಯಲ್ಲಿ ಉರ್ದು ದಬ್ಬಾಳಿಕೆ ನಡುವೆ ಕನ್ನಡವನ್ನು ಉನ್ನ ಬಡಿಸಿದ ನಡೆದಾಡುವ ದೇವರಾಗಿ ಎಲ್ಲರ ಮನಸಿನಲ್ಲಿ ಮನೆ ಮಾಡಿದ್ದಾರೆ.

ಶ್ರೀಗಳು ಕನಸು ಕಂಡ ಸಮಾಜ ಇಂದು ಎಷ್ಟರ ಮಟ್ಟಿಗೆ ಸಾಧನೆ ಮಾಡಿದೆ ಎಂದರೆ ಸ್ವರ್ಗದಲ್ಲಿ ಇರುವ ಶ್ರೀಗಳು ತುಂಬಾ ಖುಷಿ ಪಡುತ್ತಾರೆ,

ಶ್ರೀಗಳ ಹೆಸರನ್ನು ಅಜರಾಮರವಾಗಿ ಇಡಲು ಪ್ರಯತ್ನವಾಗುತ್ತಿವೆ, ಅವರ ಹೆಸರಿಂದ ಎಲ್ಲಿಂದ ಎಲ್ಲಿವರಿಗೆ ಬೆಳದ ಸಮಾಜ, ಗಡಿ ಭಾಗ ಕಮಲನಗರದಲ್ಲಿ ನಿಜಾಮ ಆಳ್ವಿಕೆಯಲ್ಲಿ ಕನ್ನಡ ಬೆಳಿಸಿದ ನೆಲದಲ್ಲಿ ಸ್ವತಂತ್ರವಾಗಿ ಮುಕ್ಕಾಲು ಶತಮಾನವಾದರೂ ಇಂದು ಕೂಡ ಒಂದೂ ಸರಕಾರಿ ಕನ್ನಡ ಪ್ರೌಢಶಾಲೆ ಇಲ್ಲಾ, ಗಡಿ ಪ್ರದೇಶದಲ್ಲಿ ಕನ್ನಡ ಬೆಳವಣಿಗೆ ಕುಂಟಿತಗೊಂಡಿದೆ, ಶ್ರೀಗಳು ತಮ್ಮ ಚಲುವಳಿ ಪ್ರಾರಂಭಿಸಿದ ಹೋರಾಟಕ್ಕೆ ಮತ್ತೆ ಜೀವ ತುಂಬಿ ಅವರ ಕನಸನ್ನು ಎತ್ತರಕ್ಕೆ ಕೊಂಡೋಯುವ ಜವಾಬ್ದಾರಿ ನಾವು ಮರೆಯಬಾರದು.



ಲೇಖನ:
ಪರಮೇಶ ರಾಂಪುರೆ,
ವರದಿಗಾರರು
ಕಮಲನಗರ.
ಮೊ.9980209238

# ಏ.30 ರಂದು ಶ್ರೀ ಬಸವ ಜಯಂತಿ ಕಾರ್ಯಕ್ರಮ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಏಪ್ರಿಲ್ 21- ಇದೇ 2025ರ ಏಪ್ರಿಲ್ 30ರ ಬುಧವಾರ ರಂದು ಶ್ರೀ ಬಸವ ಜಯಂತ್ಯೋತ್ಸವವನ್ನು ಜಿಲ್ಲಾಡಳಿತ ಹಾಗೂ ಯಾದಗಿರಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಜಿಲ್ಲೆಯ ವತಿಯಿಂದ ಆಚರಣೆ ಹಿನ್ನೆಲೆ ಶ್ರೀ ಬಸವ ಜಯಂತ್ಯೋತ್ಸವವನ್ನು ಜಿಲ್ಲಾ, ತಾಲ್ಲೂಕು ಮಟ್ಟದ ಎಲ್ಲಾ ಕಛೇರಿಗಳಲ್ಲಿ, ತಾಲ್ಲೂಕು, ಗ್ರಾಮ ಪಂಚಾಯತಗಳಲ್ಲಿ, ಎಲ್ಲಾ ಅನುದಾನಿತ, ಅರೆ ಅನುದಾನಿತ ಹಾಗೂ ಸರ್ಕಾರಿ ಶಾಲಾ, ಕಾಲೇಜುಗಳಲ್ಲಿ ಮತ್ತು ತಮ್ಮ ಅಧೀನ ಕಾರ್ಯಾಲಯದಲ್ಲಿ ಈ ಜಯಂತಿಯನ್ನು ಅರ್ಥಪೂರ್ಣವಾಗಿ ಗೌರವಯುತವಾಗಿ ಆಚರಿಸುವಂತೆ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಬೇಕು ಎಂದು ಯಾದಗಿರಿ ಜಿಲ್ಲಾಧಿಕಾರಿ ಡಾ.ಸುಶೀಲಾ.ಬಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜಿಲ್ಲಾ ಉಸ್ತುವಾರಿ ಸಚಿವ ಶ್ರೀ ಶರಣಬಸಪ್ಪ ದರ್ಶನಾಪೂರ ಅವರ ಜಿಲ್ಲಾ ಪ್ರವಾಸ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ: ಏಪ್ರಿಲ್ 21: ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ಉದ್ದಿಮೆಗಳ ಸಚಿವರು ಹಾಗೂ ಯಾದಗಿರಿ ಜಿಲ್ಲಾ ಉಸ್ತುವಾರಿ ಸಚಿವರಾದ ಶ್ರೀ ಶರಣಬಸಪ್ಪ ದರ್ಶನಾಪೂರ ಅವರು ಏಪ್ರಿಲ್ 22 ರಂದು ಯಾದಗಿರಿ ಹಾಗೂ ಶಹಾಪುರಗೆ ಭೇಟಿ ನೀಡಿ ಈ ಕೆಳಕಂಡ ಕಾರ್ಯಕ್ರಮಗಳಲ್ಲಿ ಭಾಗವಹಿಸುವರು.

ಇದೇ ಏಪ್ರಿಲ್ 22 ರಂದು ಬೆಳಿಗ್ಗೆ 10.30 ಗಂಟೆಗೆ ಯಾದಗಿರಿಗೆ ಆಗಮಿಸಿ, ಜಿಲ್ಲಾ ಉಸ್ತುವಾರಿ ಸಚಿವರ ಕಾರ್ಯಾಲಯದಲ್ಲಿ, ಯಾದಗಿರಿ – ರಾಯಚೂರು ಲೋಕಸಭಾ ಕ್ಷೇತ್ರದ ಮಾನ್ಯ ಸಂಸದರು ಹಾಗೂ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ಅಧಿಕಾರಿಗಳೊಂದಿಗೆ ಶಹಾಪುರ ಬೈಪಾಸ್ ರಸ್ತೆ ನಿರ್ಮಾಣ ಕುರಿತು ಚರ್ಚಿಸುವರು.

ನಂತರ ಮಧ್ಯಾಹ್ನ 12 ಗಂ-ಟೆಗೆ ಶಹಾಪೂರಗೆ ಆಗಮಿಸಿ, ಸ್ಥಳೀಯ ಕಾರ್ಯಕ್ರಮದಲ್ಲಿ ಭಾಗವಹಿಸುವರು ಹಾಗೂ ಸಾರ್ವಜನಿಕ ಕುಂದುಕೊರತೆಗಳ ವಿಚಾರಣೆ ನಡೆಸುವರು. ತದನಂತರ ಸಂಜೆ 5 ಗಂಟೆಗೆ ಕಲಬುರಗಿಗೆ ಪ್ರಯಾಣ ಬೆಳೆಸುವರು.

## ರಾಜಾಪುರ ಗ್ರಾಮಸ್ಥರಿಂದ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರಿಗೆ ಸನ್ಮಾನ



ಮಲ್ಲಮ್ಮ ನುಡಿ ವಾರ್ತೆ

ಶಹಾಪುರ: ನೂತನ ಶಹಾಪುರ ತಾಲೂಕ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರಾಗಿ ಆಯ್ಕೆಯಾಗಿರುವ ಶಿವಮಾಹಂತಪ್ಪ ಸಾಹುಕಾರ ಚಂದಾಪುರ ಇವರನ್ನು ತಾಲೂಕಿನ ರಾಜಾಪುರ.ಬಿ. ಗ್ರಾಮದ ಕಾಂಗ್ರೆಸ್ ಮುಖಂಡರು ಮತ್ತು ಕಾರ್ಯಕರ್ತರು ಶಹಾಪುರ ಪಟ್ಟಣದ ಪ್ರವಾಸಿ ಮಂದಿರದಲ್ಲಿ ಸನ್ಮಾನಿಸಿ ಅಭಿನಂದನೆ ತಿಳಿಸಿದರು. ಸನ್ಮಾನ ಸ್ವೀಕರಿಸಿ ನೂತನ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಶಿವಮಾಂತಪ್ಪ ಸಾಹುಕಾರ ಚಂದಾಪುರ ಮಾತನಾಡಿ ಪಕ್ಷವು ನನ್ನ ಕೆಲಸ ಕಾರ್ಯ ಪಕ್ಷ ಸಂಘಟನೆ ಗುರುತಿಸಿ ಮಹತ್ವದ ಜವಾಬ್ದಾರಿ ಸ್ಥಾನ ನೀಡಿದೆ ನಾನು ಪಕ್ಷದ ತತ್ವ ಸಿದ್ಧಾಂತಗಳಿಗೆ ಬದ್ಧನಾಗಿ ಪಕ್ಷದ ಏಳಿಗೆಗೆ ಪ್ರಾಮಾಣಿಕವಾಗಿ ಶ್ರಮಿಸುವೆ ತಮ್ಮೆಲ್ಲರ ಸಹಕಾರದ ಅವಶ್ಯಕತೆ ಇದ್ದು ಮುಂದಿನ ದಿನಗಳಲ್ಲಿ ತಾಲೂಕಿನ ಪ್ರತಿ ಗ್ರಾಮಗಳಿಗೂ ತೆರಳಿ ಪಕ್ಷ ಸಂಘಟನೆ ಮಾಡುವುದರ ಜೊತೆಗೆ ನಮ್ಮ ಕಾಂಗ್ರೆಸ್ ಪಕ್ಷದ ಅಭಿವೃದ್ಧಿ ಕೆಲಸಗಳ ಕುರಿತು ಜನರಲ್ಲಿ ಜಾಗೃತಿ ಮೂಡಿಸುವುದಾಗಿ ತಿಳಿಸಿದರು.

ಈ ಸಂದರ್ಭದಲ್ಲಿ ರಾಜಾಪುರ ಬಿ. ಗ್ರಾಮದ ಕಾಂಗ್ರೆಸ್ ಮುಖಂಡರು ಕಾರ್ಯಕರ್ತರು ಹಾಗೂ ಇನ್ನಿತರರು ಉಪಸ್ಥಿತರಿದ್ದರು.



ಡಾಕ್ಟರ್ ಬಾಬಾ ಸಾಹೇಬ್ ಅಂಬೇಡ್ಕರ್ ಹಾಗೂ ಡಾಕ್ಟರ್ ಬಾಬು ಜಗಜೀವನ್ ರಾಮ್ ಜಯಂತೋತ್ಸವ , ಮೇ 13 ರಂದು ನಡೆಯುವ ಕಾರ್ಯಕ್ರಮದ ಅಧ್ಯಕ್ಷರಾದ ವಾಸುದೇವ್ ಕಟ್ಟಿಮನಿ ಹಾಗೂ ಪ್ರಚಾರ ಸಮಿತಿ ಅಧ್ಯಕ್ಷರಾದ ಧರ್ಮಣ್ಣ ನಾಟೇಕರ್ ರವರಿಗೆ ಸಮಾಜದ ಹಿರಿಯ ಮುಖಂಡರು ಗೌರವಿಸಿ ಸನ್ಮಾನಿಸಲಾಯಿತು.

ಮೋಹನ್ ರಾಜ್ ಗೌಡ ಕನ್ಯಕೊಳುರ್. ಮಲ್ಲಿಕಾರ್ಜುನ್ ಕಟ್ಟಿಮನಿ. ಹನುಮಂತ್ ಗೊಬ್ಬೂರು. ಹೊನ್ನಪ್ಪ ನಾಟೇಕರ್. ಪರಶುರಾಮ್ ಮಹಲ್ ರೋಜ. ಮಲ್ಲಿಕಾರ್ಜುನ್ ಶಿರ್ವಾಳ. ಭೀಮರಾಯ ಬಡಿಗೇರ್. ಸಮಾಜದ ಮುಖಂಡರು ಉಪಸ್ಥಿತರಿದ್ದರು.

## ನಕಲಿ ಅಂಕಪಟ್ಟಿ ಜಾಲದ ಆರೋಪಿತನಿಗೆ ಜಾಮೀನು ನಿರಾಕರಣೆ



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ:ಏ.4: ನಕಲಿ ಅಂಕಪಟ್ಟಿ ತಯಾರಿಸಿ ವಿತರಣೆ ಪ್ರಕರಣದಲ್ಲಿ ಸಿಕ್ಕಿಬಿದ್ದು ಕಲಬುರಗಿ ಸ್ಟೇಷನ್ ಬಜಾರ್ ಪೊಲೀಸರ ವಶದಲ್ಲಿರುವ ದೆಹಲಿ ಮೂಲದ ನಕಲಿ ಅಂಕಪಟ್ಟಿಯ ಪ್ರಮುಖ ರೂವಾರಿ ಆರೋಪಿ ರಾಜೀವ್ ಸಿಂಗ್ ಅರೋರಾ ಅವರಿಗೆ ಜಾಮೀನು ನೀಡಲು ಇಲ್ಲಿನ 5ನೇ ಹೆಚ್ಚುವರು ವಿಶೇಷ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಲಯ ನಿರಾಕರಿಸಿದೆ.

# ಬಸವ ಜಯಂತಿ ಆಚರಣೆ ಪೂರ್ವಭಾವಿ ಸಭೆಯಲ್ಲಿ ತಹಸಿಲ್ದಾರ್ ಡಾ.ಹೂಗಾರ ಮನವಿ



ಮಲ್ಲಮ್ಮ ನುಡಿ ವಾರ್ತೆ

ತಾಳಿಕೋಟಿ: ಸಮಾಜಕ್ಕೆ ತಮ್ಮ ಆಚಾರ-ವಿಚಾರ ಸಂದೇಶಗಳನ್ನು ತಲುಪಿಸಿದ ಬಸವಣ್ಣನವರ ಕೊಡುಗೆ ಅಪಾರ. ಅಂಥಹ ಭಕ್ತಿ ಭಂಡಾರಿ ಬಸವಣ್ಣನವರ ಜಯಂತಿಯನ್ನು ಏಪ್ರಿಲ್ 30ರಂದು ಪಟ್ಟಣದಲ್ಲಿ ಅರ್ಥಪೂರ್ಣವಾಗಿ ಅದ್ದೂ-ರಿಯಾಗಿ ಆಚರಿಸಲಾಗುವುದು ಎಂದು ತಹಸಿಲ್ದಾರ್ ಡಾ.ವಿನಯಾ ಹೂಗಾರ ಹೇಳಿದರು. ಪಟ್ಟಣದ ತಹಶೀಲ್ದಾರ್ ಕಚೇರಿಯ ಸಭಾಂಗಣದಲ್ಲಿ ವಿಶ್ವಗುರು ಬಸವಣ್ಣನವರ ಜಯಂತಿ ಆಚರಣೆ ಸಂಬಂಧ ಶನಿವಾರ ಹಮ್ಮಿಕೊಂಡಿದ್ದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಮಹಾನುಭಾವರ ಜೀವನ ಮೌಲ್ಯಗಳು ಸಮಾಜಕ್ಕೆ ನೀಡುವ ಸಲುವಾಗಿ ಜಯಂತಿಗಳನ್ನು ಆಚರಿಸಲಾಗುತ್ತಿದೆ ಜಯಂತಿಗಳ ಆಚರಣೆ ಉದ್ದೇಶ ಮಹನೀಯರ ಆದರ್ಶಗಳನ್ನು ಪಾಲನೆ ಮಾಡುವುದು ಆಗಿದೆ ಬಸವಣ್ಣನವರನ್ನು ರಾಜ್ಯ ಸರ್ಕಾರವು ಸಂಸ್ಕೃತಿಕ ನಾಯಕ ಎಂದು ಘೋಷಿಸಿದೆ ಎಂದು ತಿಳಿಸಿದರು. ಏಪ್ರಿಲ್ 30 ರಂದು ಮುಂಜಾನೆ ಎಂಟು ಗಂಟೆಗೆ ತಹಸಿಲ್ದಾರ್ ಕಾರ್ಯಾಲಯದಲ್ಲಿ ಹಾಗೂ ತಾಲೂಕಿನ ಎಲ್ಲಾ ಸರ್ಕಾರಿ ಕಚೇರಿಗಳಲ್ಲಿ ಬಸವಣ್ಣನವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಪುಷ್ಪ ನಮನ ಅರ್ಪಿಸಲಾಗುವುದು. ಜಯಂತಿ ಅಂಗವಾಗಿ ಪಟ್ಟಣದ ರಾಜವಾಡೆದಿಂದ ಮುಂಜಾನೆ 8-30ಗಂಟೆಗೆ ಬಸವಣ್ಣನವರ ಭಾವಚಿತ್ರದ ಭವ್ಯ ಮೆರವಣಿಗೆ ನಡೆಯಲಿದೆ. ಮೆರವಣಿಗೆಯು ಕತ್ರಿಬಜಾರ್, ಶಿವಾಜಿ ಸರ್ಕಲ್, ಮಹಾರಾಣಾ ಪ್ರತಾಪ ಸಿಂಹ ಸರ್ಕಲ್, ಬಸ್ ನಿಲ್ದಾಣ ಮಾರ್ಗವಾಗಿ ಶ್ರೀ ಬಸವೇಶ್ವರ ವೃತ್ತದ ವೇದಿಕೆ ಕಾರ್ಯಕ್ರಮದ ವರೆಗೆ ನಡೆಯಲಿದೆ ಎಂದರು. ಬಸವೇಶ್ವರ ವೃತ್ತದಲ್ಲಿರುವ ಬಸವಣ್ಣವರ ಪ್ರತಿಮೆಯ ಸ್ಥಳದ ಆವರಣದಲ್ಲಿ ಸ್ವಚ್ಛತೆ, ಜಯಂತಿ ನಡೆಯುವ ಸ್ಥಳದಲ್ಲಿ ವೇದಿಕೆ ಹಾಗೂ ಆಸನಗಳ ವ್ಯವಸ್ಥೆ, ಕುಡಿಯುವ ನೀರಿನ, ಪ್ರಸಾದ ವ್ಯವಸ್ಥೆ ಜವಾಬ್ದಾರಿಯನ್ನು ವಹಿಸಿಕೊಡಲಾಯಿತು. ಜಯಂತಿ ವೇದಿಕೆ ಕಾರ್ಯಕ್ರಮದಲ್ಲಿ ವಿಶೇಷ ಉಪನ್ಯಾಸ ನೀಡಲು ಸಂಪನ್ಮೂಲ ವ್ಯಕ್ತಿಯೊಬ್ಬರನ್ನು ನಿಯೋಜಿಸಲಾಗುವುದು ಎಂದು ನಿರ್ಣಯಿಸಲಾಯಿತು. ಸಭೆಯಲ್ಲಿ ಉಪಸ್ಥಿತ ಸಮಾಜದ ಮುಖಂಡರಾದ ಗಂಗಾಧರ ಕಸ್ತೂರಿ, ಮಹಾಂತೇಶ ಮುರಾಳ, ಪ್ರಭುಗೌಡ ಮದರ್ಕಲ್, ಜಿ.ಜಿ. ಮದರಕಲ್ ತಮ್ಮ ಸಲಹೆ ಸೂಚನೆಗಳನ್ನು ನೀಡಿ ಕಾರ್ಯಕ್ರಮದ ಯಶಸ್ವಿಗೆ ಸಮಾಜದ ಸಂಪೂರ್ಣ ಸಹಕಾರ ಇರುವುದಾಗಿ ತಿಳಿಸಿದರು. ಪೂರ್ವಭಾವಿ ಸಭೆಯಲ್ಲಿ ಪುರಸಭೆ ಮುಖ್ಯಾಧಿಕಾರಿ ಮೋಹನ ಜಾಧವ, ಕ್ಷೇತ್ರ ಶಿಕ್ಷಣಾಧಿಕಾರಿ ಬಿ.ಎಸ್.ಸಾವಳಗಿ, ಆರೋಗ್ಯ ಆಡಳಿತಾಧಿಕಾರಿ ಡಾ. ಶ್ರೀಶೈಲ್ ಹುಕ್ಕೇರಿ, ಕೃಷಿ ಅಧಿಕಾರಿ ಮಹೇಶ ಜೋಷಿ, ತಾಪಂನ ಮಹಾಂತಗೌಡ ದೊರೆಗೋಳ, ಸಿ.ಆರ್.ಸಿ.ರಾಜು ವಿಜಾಪುರ, ಶಿರಸ್ತೆದಾರ್ ಜೆ.ಆರ್. ಜೈನಾಪೂರ, ಮುನ್ನಾ ಅತ್ತಾರ, ಎಂ.ಎಸ್.ಸರಶೆಟ್ಟಿ, ಇಬ್ರಾಹಿಂ ಮನ್ಸೂರ್, ನಾಗಪ್ಪಚಿನಗುಡಿ, ಮಲಕಾಜಪ್ಪ ಯರನಾಳ, ಜಗದೀಶ ಬಿಳೇಬಾವಿ, ಶಿವರಾಜ್ ಗುಂಡಕನಾಳ, ಈಸು ಬಿದರಕುಂದಿ, ಅಶೋಕ ಚಿನಗುಡಿ, ಶಫೀಕ ಇನಾಮದಾರ ಹಾಗೂ ತಾಲೂಕ ಮಟ್ಟದ ಅಧಿಕಾರಿಗಳು ಇದ್ದರು.

### ಏ.23 ಕ್ಕೆ ಯಾದಗಿರಿ ಜನಾಕ್ರೋಶ ಯಾತ್ರೆ ಯಶಸ್ವಿಗೊಳಿಸೋಣ :

# ಅಮೀನ್ ರೆಡ್ಡಿ ಪಾಟೀಲ್ ಯಾಳಗಿ ಕರೆ.




ಮಲ್ಲಮ್ಮ ನುಡಿ ವಾರ್ತೆ

ಮೊನ್ನೆ ನಡೆದ ಸಿಇಟಿ ಪರಿಕ್ಷೇಯಲ್ಲಿ ವಿದ್ಯಾರ್ಥಿಯ ಜನಿವಾರ ಪ್ರಕರಣಕ್ಕೆ ಸಂಬಂಧಿಸಿದಂತೆ ಕಾಂಗ್ರೆಸ್ ಸರ್ಕಾರ ಸಮಾಜದಲ್ಲಿ ಅಸಹಿಷ್ಣುತೆ ಉಂಟು ಮಾಡುವ ಕೆಲಸ ಮಾಡುತ್ತಿದೆ ಎಂದು ಜಿಲ್ಲಾ ಬಿಜೆಪಿ ನಿಕಟಪೂರ್ವ ಅಧ್ಯಕ್ಷ ಅಮೀನರಡ್ಡಿ ಯಾಳಗಿ ಆರೋಪಿಸಿದರು. ಸಾಂಪ್ರದಾಯಿಕ ಧಾರ್ಮಿಕ ಉಡುಗೆ ತೊಡುಗೆಗಳಿಗೆ ದಕ್ಕೆಯುಂಟು ಮಾಡುವುದು ಅಕ್ಷಮ್ಯ ಅಪರಾಧ. ಹೊಸ ತಂತ್ರಜ್ಞಾನಗಳನ್ನು ಬಳಸುವ ಮೂಲಕ ಯಾವುದೇ ಪರೀಕ್ಷೆಗಳಿಗೆ ಹಾಜರಾಗುವ ವಿದ್ಯಾರ್ಥಿ ಹಾಗೂ ವಿದ್ಯಾರ್ಥಿನಿಯರನ್ನು ತಪಾಸಣೆ ಮಾಡಿ. ಅದರಲ್ಲಿ ದೋಷ ಕಂಡು ಬಂದರೆ ಅಂತವರ ವಿರುದ್ಧ ಕ್ರಮ ಕೈಗೊಳ್ಳುವ ಕೆಲಸವಾಗಬೇಕಿದೆ ಎಂದರು.

ಶಹಾಪುರ: ರಾಜ್ಯ ಸರ್ಕಾರದ ವೈಫಲ್ಯಗಳನ್ನು ಜನರಿಗೆ ತಿಳಿಸುವ ನಿಟ್ಟಿನಲ್ಲಿ ಭಾರತೀಯ ಜನತಾ ಪಕ್ಷ ಹಮ್ಮಿಕೊಂಡಿರುವ ಜನಾಕ್ರೋಶ ಯಾತ್ರೆ ಏ.23 ರಂದು ಯಾದಗಿರಿ ನಗರಕ್ಕೆ ಆಗಮಿಸಲಿದೆ ಎಂದು ಬಿಜೆಪಿ ನಿಖಟಪೂರ್ವ ಜಿಲ್ಲಾಧ್ಯಕ್ಷ ಅಮೀನ್ ರೆಡ್ಡಿ ಯಾಳಗಿ ಹೇಳಿದರು.

ನಗರದ ಮಾಜಿ ಜಿಲ್ಲಾಧ್ಯಕ್ಷರ ನಿವಾಸದಲ್ಲಿ ಪತ್ರಿಕಾ ಗೋಷ್ಠಿಯಲ್ಲಿ ಮಾತನಾಡಿದ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ನೇತೃತ್ವದಲ್ಲಿ ನಡೆಯಲಿರುವ ಜನಾಕ್ರೋಶ ಯಾತ್ರೆಯಲ್ಲಿ ಪ್ರತಿಪಕ್ಷದ ನಾಯಕರುಗಳಾದ ಆರ್.ಅಶೋಕ, ಛಲವಾದಿ ನಾರಾಯಣಸ್ವಾಮಿ, ಸಂಸದ ಗೋವಿಂದ ಕಾರಜೋಳ, ಮಾಜಿ ಮಂತ್ರಿ ಶ್ರೀರಾಮುಲು ಸೇರಿದಂತೆಯೇ ಅನೇಕರು ಭಾಗವಹಿಸಲಿದ್ದು, ಜಿಲ್ಲೆಯ ನಾಲ್ಕು ವಿಧಾನಸಭಾ ಕ್ಷೇತ್ರಗಳ ಪಕ್ಷದ ನಾಯಕರು, ಕಾರ್ಯಕರ್ತರು ಅಂದಿನ ಹೋರಾಟಕ್ಕೆ ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಬೇಕೆಂದು ಮನವಿ ಮಾಡಿದರು. ಬಿಜೆಪಿ ಜಿಲ್ಲಾ ಅಧ್ಯಕ್ಷ ಬಸವರಾಜ ವಿಭೂತಿ ಹಳ್ಳಿ ಅವರು ಮಾತನಾಡಿ ಅಂದು ಬೆಳಗ್ಗೆ 10 ರಿಂದ ಮಧ್ಯಾಹ್ನ 12.30 ರ ತನಕ ಭ್ರಷ್ಟ ಕಾಂಗ್ರೆಸ್ ಸರ್ಕಾರದ ವಿರುದ್ಧ ಹೋರಾಟ ನಡೆಯಲಿದೆ. ಸಿಎಂ ಸಿದ್ದರಾಮಯ್ಯ ನೇತೃತ್ವದ ರಾಜ್ಯ ಸರ್ಕಾರ ಎಲ್ಲ ರಂಗಗಳಲ್ಲಿ ವಿಫಲವಾಗಿದೆ. ಜನರ ವಿಶ್ವಾಸ ಕಳೆದುಕೊಂಡಿದ್ದಾರೆ, ಹಳ್ಳಿಗಳಲ್ಲಿ ಸಾರ್ವಜನಿಕರು ಹಿಡಿ ಶಾಪ ಹಾಕುತ್ತಿದ್ದಾರೆಂದು ಎಂದರು. ಕಾಂಗ್ರೆಸ್ ಸರ್ಕಾರ ಕಲ್ಯಾಣ ಕರ್ನಾಟಕ ಭಾಗವನ್ನು ಅಭಿವೃದ್ಧಿ ಮಾಡುವುದಾಗಿ ಸುಳ್ಳು ಹೇಳಿ ಜನರಿಗೆ ಮೊಸ ಮಾಡಲಾಗುತ್ತಿದೆ. ಕಲಬುರಗಿಯಲ್ಲಿ ನಡೆದ ಸಂಪುಟ ಸಭೆಯಲ್ಲಿ ಕೈಗೊಂಡ ಯಾವ ನಿರ್ಧಾರವೂ ಜಾರಿಯಾಗಿಲ್ಲ ಎಂದು ಅವರು ದೂರಿದರು. ಈಗ ಜಾತಿಗಣತಿ ವಿಷಯದಲ್ಲಿ ಎಲ್ಲರ ನಡುವೆ ಜಗಳ ಹಚ್ಚುವ ಕೆಲಸ ಈ ಸರ್ಕಾರ ಮಾಡಿದೆ ಎಂದರು.

ಈ ಸಂದರ್ಭದಲ್ಲಿ ಹಿರಿಯ ಮುಖಂಡರಾದ ಡಾ. ಚಂದ್ರಶೇಖರ ಸುಬೇದಾರ, ರಾಜಶೇಖರ ಗೂಗಲ್, ಅಡಿವೆಪ್ಪ ಜಾಕಾ, ನಗರ ಮಂಡಲ ಅಧ್ಯಕ್ಷರಾದ ಚಂದ್ರಶೇಖರ ಯಾಳಗಿ, ಗ್ರಾಮೀಣ ಮಂಡಲ ಅಧ್ಯಕ್ಷರಾದ ತಿರುಪತಿ ಹತ್ತಿಕಟಗಿ, ಜಿಲ್ಲಾ ಕಾರ್ಯದರ್ಶಿಯಾದ ದಾಮು ಪವಾರ, ಬಸವರಾಜ ಅರುಣಿ, ತಿರುಪತಿ, ವಿನೋದ ಗೋಗಿ ಸೇರಿದಂತೆ ಮುಖಂಡರು ಹಾಗೂ ಕಾರ್ಯಕರ್ತರು ಇದ್ದರು.

# ಹಾಡು ಹಗಲೇ ಬೈಕ್ ನಲ್ಲಿದ್ದ ಹಣ ಎಗರಿಸಿದ ಕಳ್ಳರು..!

(ಶಿವು ರಾಠೋಡ)

ಮಲ್ಲಮ್ಮ ನುಡಿ ವಾರ್ತೆ

ಹುಣಸಗಿ: ಹುಣಸಗಿ ನಗರದಲ್ಲಿ ಮದ್ಯಾಹ್ನ 12:30 ರ ಸಮಯಕ್ಕೆ ಬೈಕ್ ನಲ್ಲಿದ್ದ ನಗದು ಹಣವನ್ನು ಎಗರಿಸಿ ಪರಾರಾರಿಯಾದ ಘಟನೆ ನಡೆದಿದೆ.

ಮಲ್ಲೇಶ್ ತಂದೆ ಬಸಪ್ಪ ಯಾಳಗಿ ಎನ್ನುವ ಗುಂಡಲಗೇರಿ ಗ್ರಾಮದ ಯುವಕ ನಗರದ SBI ಬ್ಯಾಂಕ್ ನಿಂದ 1,35,000 ಹಣವನ್ನು ಡ್ರಾ ಮಾಡಿಕೊಂಡು ಬಂದಿದ್ದ ಎನ್ನಲಾಗಿದೆ. ದೇವಪುರ ಮುಖ್ಯರಸ್ತೆಗೆ ಹೊಂದಿಕೊಂಡಿರುವ ರಾಯಲ್ ರೆಸ್ಟೋರೆಂಟ್ ನ ಮುಂದೆ ಬೈಕ್ ನಿಲ್ಲಿಸಿ ಪೆಟ್ರೋಲ್ ಗೆಂದು ಖಾಲಿ ಬಾಟಲಿ ತೆಗೆದುಕೊಂಡು ಬರುವ ಹೊತ್ತಿಗೆ ಅದನ್ನೇ ಕಾದು ಕುಳಿತಿದ್ದ ಗ್ಯಾಂಗ್ ಬೈಕ್ನಲ್ಲಿದ್ದ 1, 30,000 ನಗದನ್ನು ಎಗರಿಸಿ ಪರಾರಿಯಾಗಿದ್ದಾರೆ ಎಂದು ಪೊಲೀಸ್ ಮೂಲಗಳಿಂದ ತಿಳಿದು ಬಂದಿದೆ. ಹಣ ಕಳ್ಳತನದ ದೃಶ್ಯ ರೆಸ್ಟಾರೆಂಟ್ ನ ಸಿಸಿ ಕ್ಯಾಮೆರಾದಲ್ಲಿ ಸೆರೆಯಾಗಿದ್ದು, ಹುಣಸಗಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಮುನಿರಾಬಾದ್ ಗ್ರಾಮ ಪಂಚಾಯತಿಯಲ್ಲಿ ಮನೆಗಳ ಆಯ್ಕೆ ಹಾಗೂ ಸಾರ್ವಜನಿಕ ಆಸ್ತಿ ಸಂಬಂಧಿತ ವಿಚಾರಗಳ ಬಗ್ಗೆ ನಡೆದ ಗ್ರಾಮಸಭೆ.



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ತಾಲೂಕಿನ ಮುನಿರಾಬಾದ್ ಡ್ಯಾಂ ಗ್ರಾಮ ಪಂಚಾಯತಿಯಲ್ಲಿ ದಿನಾಂಕ 21-04-2025 ರಂದು ಗ್ರಾಮಸಭೆ ಯಶಸ್ವಿಯಾಗಿ ನಡೆಯಿತು. ಸಭೆಯಲ್ಲಿ ಬಸವ ವಸತಿ ಹಾಗೂ ಡಾ. ಬಿ.ಆರ್. ಅಂಬೇಡ್ಕರ್ ವಸತಿ ಯೋಜನೆ ಅಡಿಯಲ್ಲಿ ಮನೆಗಳ ಆಯ್ಕೆ ಪ್ರಕ್ರಿಯೆ ಜರಗಿತು.

ಬಸವ ವಸತಿ ಯೋಜನೆಯ ಅಡಿಯಲ್ಲಿ ಒಟ್ಟು 20 ಮನೆಗಳ ಆಯ್ಕೆ ನಡೆದಿದ್ದು, ಇದರಲ್ಲಿ ಅಲ್ಪಸಂಖ್ಯಾತರ ಪೈಕಿ 16 ಮನೆಗಳು ಮತ್ತು ಸಾಮಾನ್ಯ ಪೈಕಿ 4 ಮನೆಗಳನ್ನು ಮಂಜೂರಿ ಮಾಡಲಾಗಿದೆ. ಇದೇ ರೀತಿಯಾಗಿ ಡಾ. ಬಿ.ಆರ್. ಅಂಬೇಡ್ಕರ್ ವಸತಿ ಯೋಜನೆಯ ಅಡಿಯಲ್ಲಿ ಒಟ್ಟು 10 ಮನೆಗಳನ್ನು ಮಂಜೂರಿ ಮಾಡಲಾಗಿದ್ದು, ಈ ಮನೆಗಳಲ್ಲಿ ಪರಿಶಿಷ್ಟ ಜಾತಿಯವರಿಗೆ 7 ಹಾಗೂ ಪರಿಶಿಷ್ಟ ಪಂಗಡದವರಿಗೆ 3 ಮನೆಗಳು ಲಭಿಸಿವೆ. ಒಟ್ಟಾರೆ 30 ಮನೆಗಳ ಆಯ್ಕೆ ಪ್ರಕ್ರಿಯೆ ಸಭೆಯಲ್ಲಿ ಪೂರೈಸಲಾಗಿದೆ.

ಈ ಸಭೆಯಲ್ಲಿ ಗ್ರಾಮ ಪಂಚಾಯತಿಯ ಅಧ್ಯಕ್ಷರು, ಉಪಾಧ್ಯಕ್ಷರು ಹಾಗೂ ಎಲ್ಲಾ ಸದಸ್ಯರು, ತಾಲೂಕು ಗ್ಯಾರಂಟಿ ಅನುಷ್ಠಾನ ಸಮಿತಿ ಅಧ್ಯಕ್ಷರಾದ ಬಾಲಚಂದ್ರನ್ ಹಾಗೂ ಗ್ರಾಮ ಪಂಚಾಯತಿಯ ಸಿಬ್ಬಂದಿ ಉಪಸ್ಥಿತರಿದ್ದು, ಜನಸಾಮಾನ್ಯರ ಅನುಕೂಲಕ್ಕಾಗಿ ಸಾರ್ವಜನಿಕ ಆಸ್ತಿಯ ಪಟ್ಟವಿಲ್ಲದ ಸಮಸ್ಯೆಗಳ ಕುರಿತಂತೆ ಚರ್ಚೆ ನಡೆಯಿತು. ಮುನಿರಾಬಾದ್ ಡ್ಯಾಂ ಗ್ರಾಮ ವ್ಯಾಪ್ತಿಯಲ್ಲಿ ಸಾರ್ವಜನಿಕ ಆಸ್ತಿಯ ಪಟ್ಟೆ ಇಲ್ಲದ ಕಾರಣ ವಿವಿಧ ಸಮಸ್ಯೆಗಳು ಉದ್ಭವಿಸುತ್ತಿವೆ ಎಂಬ ವಿಷಯವನ್ನು ಜನತೆ ಗಮನಕ್ಕೆ ತಂದರು. ಈ ಕುರಿತು ಅಭಿವೃದ್ಧಿ ಅಧಿಕಾರಿಗಳನ್ನು ಪ್ರಶ್ನಿಸಿದಾಗ ಅವರು ಈ ವಿಷಯವನ್ನು ಸರ್ಕಾರ ಮಟ್ಟದಲ್ಲಿ ಈಗಾಗಲೇ ಪ್ರಸ್ತಾಪಿಸಲಾಗಿದೆ ಎಂದು ಸ್ಪಷ್ಟನೆ ನೀಡಿದರು.

ಗ್ರಾಮಸ್ಥರು ಹಾಗೂ ಸ್ಥಳೀಯ ಸಂಘ ಸಂಸ್ಥೆಗಳ ಪದಾಧಿಕಾರಿಗಳು ಈ ಪ್ರಕ್ರಿಯೆಗೆ ಸಂಪೂರ್ಣ ಸಹಕಾರ ನೀಡುವುದಾಗಿ ತಿಳಿಸಿದ್ದಾರೆ. ವಿಶೇಷವಾಗಿ ಗ್ರಾಮಸ್ಥರಾದ ಶಿವಕುಮಾರ್ ಗೌಡ ಹಾಗೂ ತಾಲೂಕು ಗ್ಯಾರಂಟಿ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಬಾಲಚಂದ್ರನ್ ಈ ಸಂಬಂಧ ಗ್ರಾಮಸ್ಥರಿಗೆ ಮಾಹಿತಿ ನೀಡಿದರು.

ಗ್ರಾಮಸಭೆ ರಾಷ್ಟ್ರಗೀತೆಯೊಂದಿಗೆ ಮುಕ್ತಾಯಗೊಂಡಿತು.

# ಜನಾಕ್ರೋಶ ಯಾತ್ರೆಯಲ್ಲಿ ಪಾಲ್ಗೊಳ್ಳಲು ಮನವಿ



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ: ನಾಳೆ ಜನಾಕ್ರೋಶ ಯಾತ್ರೆ ಯಾದಗಿರಿ ನಗರಕ್ಕೆ ಆಗಮಿಸಲಿದ್ದು ಯಾದಗಿರಿ ಮತಕ್ಷೇತ್ರದಿಂದ ಅತೀ ಹೆಚ್ಚು ಕಾರ್ಯಕರ್ತರು ಈ ಜನಾಕ್ರೋಶ ಯಾತ್ರೆಯಲ್ಲಿ ಪಾಲ್ಗೊಂಡು ಸರ್ಕಾರದ ವಿರುದ್ಧ ಧ್ವನಿಮೊಳಗಿಸಬೇಕೆಂದು ಬಿಜೆಪಿ ಮುಖಂಡ ಚೆನ್ನಾರೆಡ್ಡಿಗೌಡ ಬಿಳ್ಹಾರ್ ಮನವಿ ಮಾಡಿದ್ದಾರೆ.

ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು ಪೆಟ್ರೋಲ್, ಡಿಸೇಲ್ ಹಿಡಿದು ಹಾಲು ಮೊಸರು, ಟೋಲ್ ಶುಲ್ಕ, ವಿದ್ಯುತ್ ದರ, ಕಾರು ವಾಣಿಜ್ಯ, ಒಳಗೊಂಡು ಎಲ್ಲದರ ಬೆಲೆಯನ್ನು ಏರಿಸುವಂತಹ ಕಾರ್ಯ ಕಾಂಗ್ರೆಸ್ ಸರ್ಕಾರ ಮಾಡಿದೆ ದಿನನಿತ್ಯ ಬಡವರಿಂದ ಹಿಡಿದು ಎಲ್ಲರಿಗೂ ಅವಶ್ಯವಾಗಿರುವ ಹಾಲಿನ ದರ ಪ್ರತಿ ಲೀಟರ್‌ಗೆ 4 ರೂ. ಹೆಚ್ಚಳ ಮಾಡಿದ್ದಾರೆ ಇದರಿಂದ ಪ್ರತಿ ತಿಂಗಳಿಗೆ 120 ರೂ.ಗೂ ಅಧಿಕ ಹೊರೆ ಬಡವರಿಗೆ ಬಿಳ್ಳಲಿದೆ ಗ್ಯಾರೆಂಟಿ ಯೋಜನೆಗಳಿಂದ ಯಾರಿಗೂ ಉಪಯೋಗವಾಗುತ್ತಿಲ್ಲಾ ಹೆಂಡತಿಗೆ ಕೊಟ್ಟು ಗಂಡನಿಂದ ಕಸಿದುಕೊಳ್ಳುವಂತಹ ಕೆಲಸ ಕಾಂಗ್ರೆಸ್ ಸರ್ಕಾರದಿಂದ ನಡೆದಿದೆ ಒಂದೆಡೆ ಮಹಿಳೆಯರಿಗೆ ಬಸ್ ಪ್ರೀ ಎಂದು ಇನ್ನೊಂದೆಡೆ ಬಸ್ ದರ ಏರಿಕೆ ಮಾಡಲಾಗಿದೆ ವಿದ್ಯುತ್ ಪ್ರೀ ಎಂದು ಕೊಟ್ಟು ವಿದ್ಯುತ್ ದರ ಏರಿಸಲಾಗಿದೆ 100 ಬಾಂಡ್ ಇಂದು 500 ರೂ. ಏರಿಸಲಾಗಿದೆ ಬಡವರು ಮಧ್ಯಮವರ್ಗದವರು ಜೀವನ ನಡೆಸುವದೇ ದುಸ್ಥರವಾಗಿದೆ ಎಂದಿದ್ದಾರೆ. ರಾಜ್ಯ ಸರ್ಕಾರವು ತನ್ನ ಗ್ಯಾರೆಂಟಿ ಯೋಜನೆಗಳ ಉಳಿಸಿಕೊಳ್ಳುವ ನೆಪದಲ್ಲಿ ದಿನಬಳಕೆ ವಸ್ತುಗಳಿಂದ ಹಿಡಿದು ಎಲ್ಲದರ ಮೇಲೆ ತೇರಿಗೆ ಹೆಚ್ಚಿಸಿ ಬಡವರ ಗಾಯದ ಮೇಲೆ ಬರೆ ಎಳೆಯುವಂತಹ ಕಾರ್ಯ ಮಾಡುತ್ತಿದೆ, ಅದರಲ್ಲೂ ರಾಜ್ಯದಲ್ಲಿ ಅಭಿವೃದ್ಧಿ ಎಂಬುದು ನಿಂತ ನೀರಾಗಿದೆ ಅಭಿವೃದ್ಧಿ ಎಂಬುದು ಶೂನ್ಯವಾಗಿ ಬಿಟ್ಟಿದೆ 2 ವರ್ಷಗಳಿಂದ ಯಾವುದೇ ಅಭಿವೃದ್ಧಿ ಕಾರ್ಯಗಳು ನಡೆಯುತ್ತಿಲ್ಲಾ ರಾಜ್ಯ ಸರ್ಕಾರವು ಇಂದು 60% ಸರ್ಕಾರವೆಂಬುದು ಸಾಬೀತು ಪಡಿಸಿದೆ ಸಂಪೂರ್ಣ ಭ್ರಷ್ಟಾಚಾರದಲ್ಲಿ ಮೊಳಗಿರುವ ರಾಜ್ಯ ಸರ್ಕಾರವು ಎಂದು ತೊಲಗಿ ಹೋಗುತ್ತದೆ ಎಂದು ಜನರು ಹಿಡಿ ಶಾಪ ಹಾಕಲಿಕ್ಕೆ ಹತ್ತಿದ್ದಾರೆ ಇಂತಹ ದುರಾಡಳಿತ ಸರ್ಕಾರದ ವಿರೂದ್ಧ ಪ್ರತಿಯೊಬ್ಬರೂ ಪ್ರತಿಭಟಿಸುವದು ಅಗತ್ಯವಾಗಿದೆ ಎಂದರು.

ಹೀಗಾಗಿ ಇದೇ ದಿ.23 ರಂದು ನಗರಕ್ಕೆ ಜನಾಕ್ರೋಶ ಯಾತ್ರೆ ಆಗಮಿಸಲಿದ್ದು ಹೆಚ್ಚಿನ ಸಂಖ್ಯೆಯಲ್ಲಿ ಕಾರ್ಯಕರ್ತರು ಭಾಗವಹಿಸಿ ಯಶಸ್ವಿಗೊಳಿಸಬೇಕೆಂದು ಮನವಿ ಮಾಡಿದರು.




ಕಲಬುರಗಿಯಲ್ಲಿ ಅಖಿಲ ಕರ್ನಾಟಕ ದಲಿತ ಸೇನೆಯ ರಾಜ್ಯ ಘಟಕದ ಅಧ್ಯಕ್ಷರಾದ ದತ್ತಾತ್ರೇಯ ಕುಡಕಿ ಹಾಗೂ ಜಿಲ್ಲಾ ಘಟಕದ ಅಧ್ಯಕ್ಷರಾದ ಸಂಜೀವಕುಮಾರ ಕಾಂಬಳೆಯವರು ತಮ್ಮ ಅಖಿಲ ಕರ್ನಾಟಕ ದಲಿತ ಸೇನೆಯ ಕಾರ್ಯಾಲಯದಲ್ಲಿ ಮಲ್ಲಮ್ಮ ನುಡಿ ಪತ್ರಿಕೆ ಓದುತ್ತಿರುವುದು. ಇದು ಉತ್ತಮವಾದ ಪ್ರಾದೇಶಿಕ ಪತ್ರಿಕೆಯಾಗಿದೆಯೆಂದು ಅವರು ಮೆಚ್ಚುಗೆ ವ್ಯಕ್ತಪಡಿಸಿದರು.

# ಫಿರೋಜಾಬಾದ: ಹೂಳೆತ್ತುವ ಕಾಮಗಾರಿ ಪರಿಶೀಲನೆ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಏ.21-ತಾಲೂಕಿನ ಫಿರೋಜಾಬಾದ್ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಬರುವ ಫಿರೋಜಾಬಾದ್ ಗ್ರಾಮದ ಹೂಳೆತ್ತುವ ಕಾಮಗಾರಿ ಸ್ಥಳಕ್ಕೆ ತಾಲ್ಲೂಕ ಪಂಚಾಯತಿ ಕಾರ್ಯ ನಿರ್ವಾಹಕ ಅಧಿಕಾರಿಗಳು ಭೇಟಿ ನೀಡಿ ಪರಿಶೀಲನೆ ನಡೆಸಿದರು. ಈ ವೇಳೆ ಮಾತನಾಡಿದ ಅವರು, ಪ್ರತಿಯೊಬ್ಬ ಕೂಲಿ ಕಾರ್ಮಿಕರು ಪಿಎಂಜೆಜೆವೈ ಮತ್ತು ಪಿಎಂ ಎಸ್ ಬಿವೈ ಯೋಜನೆಗಳ ಇನ್ಶುರೆನ್ಸ್ ಮಾಡಿಕೊಳ್ಳಬೇಕು ಹಾಗೂ ಇಂದಿನಿಂದ ಕೂಲಿ ಮೊತ್ತ 370 ರೂ.ಗಳಿಗೆ ಹೆಚ್ಚಿಸಲಾಗಿದ್ದು, ಎಲ್ಲರೂ ನಿಗದಿಪಡಿಸಿದ ಅಳತೆಗನುಗುಣವಾಗಿ ಕೆಲಸ ನಿರ್ವಹಿಸಬೇಕು ಎಂದು ಸೂಚಿಸಿದರು.

ಬಳ್ಳಾರಿ: ಏ.24 ರಂದು ಡಾ.ರಾಜ್ ಕುಮಾರ್ ಜನ್ಮ ದಿನಾಚರಣೆ

# ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳಲು ಕರೆ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಏ.21–ನಟಸಾರ್ವಭೌಮ, ವರನಟ ಡಾ.ರಾಜ್ ಕುಮಾರ್ ಅವರ ಜನ್ಮ ದಿನಾಚರಣೆ ಕಾರ್ಯಕ್ರಮವನ್ನು ಇದೇ ಏ.24 ರಂದು ಜಿಲ್ಲಾಡಳಿತ ವತಿಯಿಂದ ನಗರದ ಡಾ.ಜೋಳದರಾಶಿ ದೊಡ್ಡನಗೌಡ ರಂಗಮಂದಿರದಲ್ಲಿ ಅದ್ದೂರಿಯಾಗಿ ಆಚರಿಸಲು ನಿರ್ಧರಿಸಲಾಯಿತು.

ಸೋಮವಾರ ನಗರದ ಸಹಾಯಕ ಆಯುಕ್ತರ ಕಚೇರಿ ಸಭಾಂಗಣದಲ್ಲಿ ಸಹಾಯಕ ಆಯುಕ್ತರಾದ ಪಿ.ಪ್ರಮೋದ್ ಅವರ ಅಧ್ಯಕ್ಷತೆಯಲ್ಲಿ ನಡೆದ ಪೂರ್ವಭಾವಿ ಸಭೆಯಲ್ಲಿ ಈ ತೀರ್ಮಾನ ಕೈಗೊಳ್ಳಲಾಗಿದೆ.

ಏ.24 ರಂದು ಬೆಳಿಗ್ಗೆ 09 ಗಂಟೆಗೆ ನಗರದ ಡಾ.ರಾಜ್ ಕುಮಾರ್ ಉದ್ಯಾನವನದ ಬಳಿಯ ಡಾ.ರಾಜ್ ಕುಮಾರ್ ಅವರ ಪುತ್ಥಳಿಗೆ ಗಣ್ಯರಿಂದ ಮಾಲಾರ್ಪಣೆ ಮಾಡಲಾಗುವುದು. ಬಳಿಕ ಅಂದು ಸಂಜೆ 5 ಗಂಟೆಗೆ ಡಾ.ಜೋಳದರಾಶಿ ದೊಡ್ಡನಗೌಡ ರಂಗಮಂದಿರದಲ್ಲಿ ಡಾ.ರಾಜ್ ಕುಮಾರ್ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮತ್ತು ಅವರ ಚಲನಚಿತ್ರ ಗೀತೆಗಳ ಗಾಯನ ಕಾರ್ಯಕ್ರಮ ಆಯೋಜಿಸಲು ನಿರ್ಧರಿಸಲಾಯಿತು.

ಕಾರ್ಯಕ್ರಮದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಡಾ.ರಾಜ್ ಕುಮಾರ್ ಅವರ ಅಭಿಮಾನಿಗಳು, ಕಾಲೇಜು ವಿದ್ಯಾರ್ಥಿಗಳು, ಸಾರ್ವಜನಿಕರು ಸೇರಿದಂತೆ ರಾಜಕೀಯ ಮುಖಂಡರು, ಎಲ್ಲ ಇಲಾಖೆಗಳ ಅಧಿಕಾರಿಗಳು ಮತ್ತು ಸಿಬ್ಬಂದಿ ತಪ್ಪದೇ ಕಾರ್ಯಕ್ರಮಕ್ಕೆ ಹಾಜರಾಗಬೇಕು. ಡಾ.ರಾಜ್ ಕುಮಾರ್ ಅವರ ಕನ್ನಡ ಭಾಷಾಭಿಮಾನ, ಕಲಾ ಪ್ರತಿಭೆ ಎಲ್ಲರಿಗೂ ಮನ ಮುಟ್ಟುವಂತಾದರೆ ಜಯಂತಿ ಆಚರಣೆಗೂ ಅರ್ಥ ಬರುತ್ತದೆ ಎಂದು ಸಹಾಯಕ ಆಯುಕ್ತ ಪಿ.ಪ್ರಮೋದ್ ಅವರು ತಿಳಿಸಿದರು.

ಶಿಷ್ಟಾಚಾರದನ್ವಯ ಆಹ್ವಾನ ಪತ್ರಿಕೆ ಮುದ್ರಿಸಿ ಗಣ್ಯರನ್ನು ಆಹ್ವಾನಿಸಲಾಗುವುದು. ಕುಡಿಯುವ ನೀರಿನ ವ್ಯವಸ್ಥೆ, ಕಾರ್ಯಕ್ರಮ ಸ್ಥಳದಲ್ಲಿ ಸ್ವಚ್ಛತೆ ಕಾರ್ಯ ಕೈಗೊಳ್ಳಬೇಕು ಎಂದು ಸಂಬಂಧಿಸಿದ ಅಧಿಕಾರಿಗಳಿಗೆ ತಿಳಿಸಿದರು.

ಸಭೆಯಲ್ಲಿ ಹಾಜರಿದ್ದ ವಿವಿಧ ಸಂಘಟನೆಗಳ ಮುಖಂಡರು ಮಾತನಾಡಿ, ಡಾ.ರಾಜ್ ಕುಮಾರ್ ಜನ್ಮ ದಿನಾಚರಣೆ ಕಾರ್ಯಕ್ರಮವನ್ನು ಅಚ್ಚುಕಟ್ಟಾಗಿ ಆಯೋಜಿಸಬೇಕು. ನಗರದ ಡಾ.ರಾಜ್ ಕುಮಾರ್ ಉದ್ಯಾನವನದ ಡಾ.ರಾಜ್ ಕುಮಾರ್ ಅವರ ಪುತ್ಥಳಿಯ ಸುತ್ತಲೂ ಸ್ವಚ್ಛತಾ ಕಾರ್ಯ ಕೈಗೊಳ್ಳಬೇಕು. ಮಾಲಾರ್ಪಣೆ ಮಾಡಲು ಶಾಶ್ವತ ಏಣಿ ವ್ಯವಸ್ಥೆ ಮಾಡಬೇಕು ಎಂದು ಸಭೆಗೆ ತಿಳಿಸಿದರು.

ನಗರದಲ್ಲಿ ಡಾ.ರಾಜ್ ಕುಮಾರ್ ರಸ್ತೆ ಎಂದು ನಾಮಕರಣಗೊಂಡು 18 ವರ್ಷ ಕಳೆದಿದ್ದು, ಆ ರಸ್ತೆಯ ಪ್ರಾರಂಭದಲ್ಲಿ ಡಾ.ರಾಜ್ ಕುಮಾರ್ ರಸ್ತೆ ಎಂದು ಮಹಾದ್ವಾರ ನಿರ್ಮಿಸಬೇಕು ಎಂದು ಮುಖಂಡರು ಸಭೆಯಲ್ಲಿ ಪ್ರಸ್ತಾಪಿಸಿದರು. ಈ ಕುರಿತು ಮಹಾನಗರ ಪಾಲಿಕೆಯ ಆಯುಕ್ತರಿಗೆ ಪತ್ರ ಬರೆಯಲಾಗುವುದು ಎಂದು ಸಹಾಯಕ ಆಯುಕ್ತ ಪಿ.ಪ್ರಮೋದ್ ಅವರು ತಿಳಿಸಿದರು.

ಡಾ.ರಾಜ್ ಕುಮಾರ್ ಅವರ ಜೀವನ ಚರಿತ್ರೆ ಕುರಿತು ತಿಳಿಸಲು ಸಂಪನ್ಮೂಲ ವ್ಯಕ್ತಿಗಳಿಂದ ವಿಶೇಷ ಉಪನ್ಯಾಸ ಆಯೋಜಿಸಬೇಕು. ಕಾರ್ಯಕ್ರಮ ಕುರಿತು ಹೆಚ್ಚಿನ ಪ್ರಚಾರ ನೀಡಲು ನಗರದ ಗಡಿಗಿ ಚೆನ್ನಪ್ಪ ವೃತ್ತ, ಹೆಚ್.ಆರ್.ಗವಿಯಪ್ಪ ವೃತ್ತ ಮತ್ತು ಡಾ.ಜೋಳದರಾಶಿ ದೊಡ್ಡನಗೌಡ ರಂಗಮಂದಿರ ಬಳಿ ಬ್ಯಾನರ್ ಅಳವಡಿಸಬೇಕು ಎಂದು ಮುಖಂಡರು ಸಲಹೆ ನೀಡಿದರು.

ಈ ಸಂದರ್ಭದಲ್ಲಿ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ವಾರ್ತಾ ಸಹಾಯಕ ವಿ.ಸಿ.ಗುರುರಾಜ, ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ನಿಷ್ಠಿ ರುದ್ರಪ್ಪ, ಕರ್ನಾಟಕ ಯುವ ಸಂಘದ ಗೌರವಾಧ್ಯಕ್ಷ ಸಿರಿಗೇರಿ ಪನ್ನರಾಜ್, ಕರ್ನಾಟಕ ಜನಸೈನ್ಯ ಸಂಸ್ಥಾಪಕ ರಾಜ್ಯಾಧ್ಯಕ್ಷ ಕೆ.ಎರ್ರಿಸ್ವಾಮಿ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

# ಕುರುಗೋಡು: ರೋಜ್ ಗಾರ್ ದಿವಸ್ ಆಚರಣೆ



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಏ.21–ಕುರುಗೋಡು ತಾಲ್ಲೂಕಿನ ದಮ್ಮೂರು ಮತ್ತು ಸಿಂಧಿಗೇರಿ ಗ್ರಾಮ ಪಂಚಾಯಿತಿಗಳ ವ್ಯಾಪ್ತಿಯಲ್ಲಿ ಉದ್ಯೋಗ ಖಾತರಿ ಯೋಜನೆಯಡಿ ಕಾಲುವೆ ಹೂಳೆತ್ತುವ ಕಾಮಗಾರಿ ಸ್ಥಳದಲ್ಲಿ ರೋಜ್ ಗಾರ್ ದಿವಸ್ ಅನ್ನು ಸೋಮವಾರ ಆಚರಿಸಲಾಯಿತು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹ್ಯಾರೀಸ್ ಸುಮೇರ್ ಅವರು ಮಾತನಾಡಿ, ಗ್ರಾಮೀಣ ಪ್ರದೇಶಗಳಿಗೆ ಮೂಲಸೌಕರ್ಯ ಕಲ್ಪಿಸುವ ಅಭಿವೃದ್ಧಿ ಹಾಗೂ ಗುಳೆ ತಪ್ಪಿಸಲು ಸ್ಥಳೀಯರಿಗೆ ಉದ್ಯೋಗ ಸೃಷ್ಟಿಸುವ ಉದ್ದೇಶದಿಂದ ನರೇಗಾ ಯೋಜನೆ ರೂಪಿಸಲಾಗಿದೆ. ನರೇಗಾದಿಂದ ಈಗಾಗಲೇ ಗ್ರಾಮೀಣ ಪ್ರದೇಶಗಳಲ್ಲಿ ಹಲವು ಕಾಮಗಾರಿ ಅನುಷ್ಠಾನಗೊಳಿಸಲಾಗುತ್ತಿದೆ. ಈ ಯೋಜನೆಯ ಯಶಸ್ವಿಗೆ ಕಾರ್ಮಿಕರ ಶ್ರಮವೇ ಮೂಲಾಧಾರವಾಗಿದೆ ಎಂದರು.

ಇದೇ ಸಂದರ್ಭದಲ್ಲಿ ಕೂಲಿ ಕೆಲಸಕ್ಕೆ ಹಾಜರಾದವರಿಗೆ ಮಾತ್ರ ಹಾಜರಾತಿ ನೀಡಬೇಕು. ಹಿರಿಯ ನಾಗರಿಕರಿಗೆ ಹಾಗೂ ಗರ್ಭಿಣಿ ಮಹಿಳೆಯರಿಗೆ, ವಿಶೇಷ ಚೇತನರಿಗೆ ಅರ್ಧದಷ್ಟು ಕೆಲಸ ನೀಡುವಂತೆ ಮಾಹಿತಿ ನೀಡಿದರು.

ಮನರೇಗಾ ಯೋಜನೆಯಡಿ ಕನಿಷ್ಠ ಶೇ.60 ಮಹಿಳೆಯರು ಭಾಗವಹಿಸುವಿಕೆ, ಎನ್ಎಂಎಂಎಸ್ ಆಪ್ ಹಾಜರಾತಿ ಕುರಿತು ತಿಳಿಸಿದರು. ನಾಲಾ ಹೂಳೆತ್ತುವ ಕಾಮಗಾರಿಯ ಅಳತೆಯ ಕುರಿತು ವಿವರಿಸಿದ ಅವರು, ಮಹಿಳಾ ಕಾರ್ಮಿಕರು ಕೂಸಿನ ಮನೆಯ ಸದುಪಯೋಗ ಪಡೆಯಬೇಕು ಎಂದರಲ್ಲದೇ, ಪಿಎಂಜೆಜೆವೈ ಮತ್ತು ಪಿಎಂಎಸ್‌ಬಿವೈ ವಿಮಾ ಯೋಜನೆ ಕುರಿತು ಮಾಹಿತಿ ನೀಡಿದರು.

ಈ ಸಂದರ್ಭದಲ್ಲಿ ಕುರುಗೋಡು ತಾಲ್ಲೂಕು ಪಂಚಾಯತ್ ನ ಕಾರ್ಯನಿರ್ವಾಹಕ ಅಧಿಕಾರಿ ಕೆ.ವಿ.ನಿರ್ಮಲ, ಸಹಾಯಕ ನಿರ್ದೇಶಕ ಪಿ.ಶಿವರಾಮರೆಡ್ಡಿ, ಗ್ರಾಪಂ ಅಭಿವೃದ್ಧಿ ಅಧಿಕಾರಿ ಮಲ್ಲಿಕಾರ್ಜುನ ಸೇರಿದಂತೆ ಗ್ರಾಪಂ ಕಾರ್ಯದರ್ಶಿ, ತಾಂತ್ರಿಕ ಸಂಯೋಜಕರು, ಐ.ಇ.ಸಿ ಸಂಯೋಜಕರು, ತಾಂತ್ರಿಕ ಸಹಾಯಕರು ಬಿ.ಎಫ್.ಟಿ, ಗ್ರಾ.ಪಂ ಸಿಬ್ಬಂಧಿಯವರು ಹಾಜರಿದ್ದರು.

# 14 ವರ್ಷಗಳ ಬಳಿಕ ಗ್ರಾಮ ದೇವತೆ ದ್ಯಾಮವ್ವ ದೇವಿ ಜಾತ್ರೆ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ: ತಾಲೂಕಿನ ಕಿನ್ನಾಳ ಗ್ರಾಮದಲ್ಲಿ ಸುಮಾರು 14 ವರ್ಷಗಳಿಂದ ಸ್ಥಗಿತಗೊಳಿಸಲಾಗಿದ್ದ ಗ್ರಾಮದ ಆರಾಧ್ಯ ದೇವತೆ ಹಾಗೂ ಗ್ರಾಮ ದೇವತೆಯಾದ ದ್ಯಾಮವ್ವ ದೇವಿಯ ಜಾತ್ರಾ ಮಹೋತ್ಸವ ಪ್ರಸಕ್ತ ವರ್ಷ ಸಂಭ್ರಮದಿಂದ ನಡೆಯಲಿದೆ. 5 ದಿನಗಳ ಕಾಲ ನಡೆಯುವ ಗ್ರಾಮದ ಗ್ರಾಮ ದೇವಿ ಜಾತ್ರೆ ಕಟ್ಟಪ್ಪಣೆ ಕುರಿತು ಜಾತ್ರಾ ಸಮಿತಿಯವರು ತಿಳಿಸಿರುತ್ತಾರೆ.

ಸುಮಾರು 14 ವರ್ಷಗಳಿಂದ ಸ್ಥಗಿತಗೊಳಿಸಲಾಗಿದ್ದ ಗ್ರಾಮದ ಆರಾಧ್ಯ ದೇವತೆ ಹಾಗೂ ಗ್ರಾಮ ದೇವತೆಯಾದ ದ್ಯಾಮವ್ವ ದೇವಿಯ ಜಾತ್ರಾ ಮಹೋತ್ಸವ ಪ್ರಸಕ್ತ ವರ್ಷ ಸಂಭ್ರಮದಿಂದ ನಡೆಯಲಿದೆ.

ಸುಮಾರು 14 ವರ್ಷಗಳಿಂದ ನಿಲ್ಲಿಸಿದ ಜಾತ್ರಾ ಮಹೋತ್ಸವದ ಕಾರ್ಯಕ್ರಮವನ್ನು ಮರು ಆರಂಭಿಸಬೇಕು ಎಂಬ ಸದುದ್ದೇಶದಿಂದ ಗ್ರಾಮದ ಎಲ್ಲ ಸಮಾಜದ ಹಿರಿಯರು ಹಲವು ಸಭೆ ಮಾಡುವ ಮೂಲಕ ಜಾತ್ರೆಯನ್ನು ಅತ್ಯಂತ ವೈಭವದಿಂದ ಮಾಡಬೇಕು ಎಂದು ತೀರ್ಮಾನಿಸಿದ್ದೇವೆ, ಏ.21 ರಿಂದ ಐದು ದಿನ ನಡಯಲಿದೆ. ಏ.20 ರಂದು ಹಾಲು ಏರಿಯುವ ಕಾರ್ಯಕ್ರಮ, 22 ರಂದು ಗಂಗೆಗೆ ಹೋಗುವುದು, ಕುಂಬೋತ್ಸವ, ಡೊಳ್ಳು, ಭಜಂತ್ರಿ, ಭವ್ಯ ಮೆರವಣಿಗೆ ನಡೆಯುವುದು. ಏ. 23,24 ಸಾಂಸ್ಕೃತಿಕ ಕಾರ್ಯಕ್ರಮ ನಡೆಯಲಿದ್ದು ಏ. 25 ಅನ್ನಸಂತರ್ಪಣೆ ನಡೆಯಲಿದೆ ಈ ಒಂದು ಮಹೋತ್ಸವದಲ್ಲಿ ಊರಿನ ಎಲ್ಲಾ ಯುವಕ ಮಿತ್ರರು ಸಂಘ ಸಂಸ್ಥೆ ಯ ಸದಸ್ಯರು ಹಾಗೂ ಗುರು ಹಿರಿಯರು ಸೇರಿ ಅದ್ದೂರಿಯಾಗಿ ಜಾತ್ರಾ ಮಹೋತ್ಸವದ ಆಚರಣೆ ಮಾಡುತ್ತಿದ್ದಾರೆ ಎಂದು ಪ್ರಕಟಣೆ ಯಲ್ಲಿ ತಿಳಿಸಿದರು.

ಕಟ್ಟಪ್ಪಣೆ: ಗ್ರಾಮದೇವತೆ ದ್ಯಾಮವ್ವ ದೇವಿ ಜಾತ್ರೆಯು ಸುಮಾರು ಐದು ದಿನಗಳ ಕಾಲ ನಡೆಯುತ್ತಿದ್ದು, ಈ ಜಾತ್ರಾ ಸಮಯದಲ್ಲಿ ಕೆಲವು ಕಟ್ಟಪ್ಪಣೆಗಳನ್ನು ಪಾಲಿಸಬೇಕಾಗಿದೆ. ಕುಟ್ಟುವುದು, ಬೀಸುವುದು, ಹೊಲಿಗೆ ಹಾಕುವುದು, ಕಮ್ಮಾರಿಕೆ, ಚಮ್ಮಾರಿಕೆ, ಕಟಿಂಗ್, ಯಂತ್ರಗಳ ಕೆಲಸ ಇತ್ಯಾದಿ ಮಾಡುವಂತಿಲ್ಲ. ಕೃಷಿಗೆ ಸಂಬಂಧಿಸಿದಂತೆ ಹೂಳುವುದು, ಹರಗುವುದು ಗಳೆ ಹೊಡೆಯುವುದು, ಟ್ಯಾಕರ್ ಕೆಲಸ ಮಾಡುವಂತಿಲ್ಲ, ಹಿಟ್ಟಿನ ಗಿರಣಿ, ಖಾರಾ ಕುಟ್ಟುವ ಯಂತ್ರಗಳು, ಶ್ಯಾವಿಗೆ ಮಶಿನ್, ಕಟ್ಟಿಗೆ ಕೊರೆಯುವ ಯಂತ್ರ ಸ್ಥಗಿತಗೊಳಿಸಬೇಕು. ಜಾತ್ರೆಯ ನಿಮಿತ್ತ 5 ದಿನಗಳ ಕಾಲ ಹೊಸಮನೆ ಕಟ್ಟಡ ಹಾಗೂ ಯಾವುದೇ ತರಹದ ಕಟ್ಟಡ ನಿರ್ಮಾಣ ಕಾರ್ಯ ಮಾಡುವಂತಿಲ್ಲ, ಪ್ರತಿ ಮನೆಯವರು ತಮ್ಮ ತಮ್ಮ ಮನೆಗಳ ಸುತ್ತಮುತ್ತಲಿನ ಪರಿಸರವನ್ನು ಸ್ವಚ್ಛಗೊಳಿಸಿ ಮನೆಯನ್ನು ಮಡಿ ಮಾಡುವುದು ಕಡ್ಡಾಯವಾಗಿದೆ.

# ಕ,ರ,ವೇ, ಕೊಪ್ಪಳ ಜಿಲ್ಲಾ ಮತ್ತು ತಾಲೂಕು ಪದಾಧಿಕಾರಿಗಳ ನೇಮಕ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಕರ್ನಾಟಕ ರಕ್ಷಣಾ ವೇದಿಕೆ(ಎಚ್ ಶಿವರಾಮೇಗೌಡ) ಬಣದ ಜಿಲ್ಲಾ ಘಟಕ ಮತ್ತು ತಾಲೂಕು ಘಟಕದ ನೂತನ ಪದಾಧಿಕಾರಿಗಳ ನೇಮಕ ಮಾಡಲಾಯಿತು. ಜಿಲ್ಲಾ ಉಪಾಧ್ಯಕ್ಷರನ್ನಾಗಿ ಗವಿಸಿದ್ದಪ್ಪ ಹಂಡಿ, ತಾಲೂಕ ಅಧ್ಯಕ್ಷರನ್ನಾಗಿ ಹುಸೇನ್ ಬಾಷಾ ಕುಕನೂರು, ತಾಲೂಕು ಮಹಿಳಾ ಘಟಕದ ಅಧ್ಯಕ್ಷರನ್ನಾಗಿ ಬೋರಮ್ಮ ಪಿ ತಳಗಡೇ, ತಾಲೂಕು ಕಾರ್ಮಿಕ ಘಟಕದ ಅಧ್ಯಕ್ಷರನ್ನಾಗಿ ರಾಮಕೃಷ್ಣ, ಕೊಪ್ಪಳ ನಗರ ಘಟಕದ ಅಧ್ಯಕ್ಷರನ್ನಾಗಿ ಮಂಜುನಾಥ, ಅವರನ್ನು ನೇಮಕ ಮಾಡಲಾಗಿದೆ ಈ ಸಂಧರ್ಭದಲ್ಲಿ ರಾಜ್ಯ ಉಪಾಧ್ಯಕ್ಷರಾದ ಅಜ್ಜಪ್ಪ ಕರುಡ್ಕಲ್, ಜಿಲ್ಲಾಧ್ಯಕ್ಷರಾದ ಶಿವರಾಜ್ ಉಳ್ಳಾಗಡ್ಡಿ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ನಾಗರಾಜ್ ಸಿ ಹೊನಕೇರಿ, ರಾಜ್ಯ ಯುವ ಘಟಕ ಸಂಘಟನಾ ಕಾರ್ಯದರ್ಶಿ ರಾಜೇಶ ಚಿನ್ನೂರು, ಇವರ ನೇತೃತ್ವದಲ್ಲಿ ನೇಮಕ ಮಾಡಲಾಯಿತು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಏ.23 ರಂದು ವಿವಿಧ ಮಹನೀಯರ ಜಯಂತಿಯ ಪೂರ್ವಭಾವಿ ಸಭೆ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಏ.21–ಜಿಲ್ಲಾಡಳಿತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಜಿಲ್ಲಾ ಕೇಂದ್ರದಲ್ಲಿ ಮೇ 02 ರಂದು ಶಂಕರಾಚಾರ್ಯ ಜಯಂತಿ, ಮೇ 04 ರಂದು ಭಗೀರಥ ಜಯಂತಿ ಮತ್ತು ಮೇ 10 ರಂದು ಶಿವಶರಣೆ ಹೇಮರೆಡ್ಡಿ ಮಲ್ಲಮ್ಮ ಜಯಂತಿ ಆಚರಣೆ ಕುರಿತು ಚರ್ಚಿಸಲು ಏ.23 ರಂದು ನಗರದ ಹಳೆಯ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಪೂರ್ವಭಾವಿ ಸಭೆ ಏರ್ಪಡಿಸಲಾಗಿದೆ.

ಏ.23 ರಂದು ಬೆಳಿಗ್ಗೆ 11.30 ಗಂಟೆಗೆ ಶಂಕರಾಚಾರ್ಯ ಜಯಂತಿ, ಮಧ್ಯಾಹ್ನ 12 ಗಂಟೆಗೆ ಭಗೀರಥ ಜಯಂತಿ, ಮಧ್ಯಾಹ್ನ 12.30 ಗಂಟೆಗೆ ಶಿವಶರಣೆ ಹೇಮರೆಡ್ಡಿ ಮಲ್ಲಮ್ಮ ಜಯಂತಿ ಆಚರಣೆ ಕುರಿತು ಪೂರ್ವಭಾವಿ ಸಭೆ ನಡೆಯಲಿದೆ.

ಅಪರ ಜಿಲ್ಲಾಧಿಕಾರಿ ಮಹಮ್ಮದ್ ಝುಬೇರ್ ಅವರು ಅಧ್ಯಕ್ಷತೆ ವಹಿಸುವರು.

ಸಭೆಗೆ ಸಮುದಾಯದ ಮುಖಂಡರು, ಜಿಲ್ಲಾ ಮಟ್ಟದ ಅಧಿಕಾರಿಗಳು ತಪ್ಪದೇ ಹಾಜರಾಗಬೇಕು ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಬಿ.ನಾಗರಾಜ ಅವರು ತಿಳಿಸಿದ್ದಾರೆ.

# ಏ.23 ರಂದು ಎಸ್‌ಸಿಎಸ್‌ಪಿ ಹಾಗೂ ಟಿಎಸ್‌ಪಿ ಜಿಲ್ಲಾ ಮೇಲ್ವಿಚಾರಣೆ ಸಭೆ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಏ.21–ಸಮಾಜ ಕಲ್ಯಾಣ ಇಲಾಖೆಯಿಂದ ಏ.23 ರಂದು ಬೆಳಿಗ್ಗೆ 10.30 ಗಂಟೆಗೆ ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಎಸ್‌ಸಿಎಸ್‌ಪಿ ಹಾಗೂ ಟಿಎಸ್‌ಪಿ ಜಿಲ್ಲಾ ಮೇಲ್ವಿಚಾರಣಾ ಸಮಿತಿಯ ಸಭೆ ಏರ್ಪಡಿಸಲಾಗಿದೆ ಎಂದು ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕ ಮಲ್ಲಿಕಾರ್ಜುನ್ ಅವರು ತಿಳಿಸಿದ್ದಾರೆ.

# ವಿದ್ಯಾರಣ್ಯ ವಿಚಾರ ವೇದಿಕೆಗೆ ಚಾಲನೆ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಗಂಗಾವತಿ ನಗರದ ಶ್ರೀರಾಮ ಮಂದಿರದಲ್ಲಿ ನಡೆದ ಕಾರ್ಯಕ್ರಮ ಒಂದರಲ್ಲಿ *ವಿದ್ಯಾರಣ್ಯ ವಿಚಾರ ವೇದಿಕೆಯನ್ನು ಹಾಸ್ಯ ಸಾಹಿತಿ ಶ್ರೀಯುತ ಗಂಗಾವತಿ ಪ್ರಾಣೇಶ್ ರವರು ಉದ್ಘಾಟಿಸಿದರು. ವೈಚಾರಿಕತೆ ಆಧ್ಯಾತ್ಮಿಕತೆ ಮತ್ತು ಪ್ರಚಲಿತ ವಿಷಯಗಳ ಮೇಲೆ ಚರ್ಚೆ ಮತ್ತು ಸಂವಾದಗಳು ನಿಯಮಿತವಾಗಿ ನಡೆಯಲು ಈ ವೇದಿಕೆ ಉಪಯೋಗವಾಗಲೆಂದು ಅವರು ಹೇಳಿದರು. ಮುಖ್ಯ ಅತಿಥಿಗಳಾಗಿ ಆಗಮಿಸಿದ ಸಾಹಿತಿ ಲಿಂಗಾರೆಡ್ಡಿ ಆಲೂರವರು ಮಾತನಾಡುತ್ತಾ ಯಾವುದೇ ಪಕ್ಷ ಭೇದವಿಲ್ಲದೆ ಒಳ್ಳೆಯ ವಿಚಾರಗಳನ್ನು ಚರ್ಚಿಸಲು ಈ ವೇದಿಕೆ ಅನುಭವ ಮಂಟಪದಂತೆ ಕಾರ್ಯ ನಿರ್ವಹಿಸಲಿ ಎಂದು ಕರೆ ನೀಡಿದರು. ಕಾರ್ಯಕ್ರಮದಲ್ಲಿ ಭಾಗವಹಿಸಿದ ಮತ್ತೊಬ್ಬ ಅತಿಥಿ ಇತಿಹಾಸ ಪ್ರೇಮಿ ಶ್ರೀಯುತ ಹೊಸಕೇರಿ ಮಲ್ಲಿಕಾರ್ಜುನ್ ರವರು ವಿಜಯನಗರ ಸಾಮ್ರಾಜ್ಯದ ಇತಿಹಾಸದ ಕುರಿತು ಮಾತನಾಡಿದರು. ವೇದಿಕೆ ಸಂಚಾಲಕರಾದ ಶ್ರೀಯುತ ಶ್ರವಣಕುಮಾರ್ ರಾಯ್ಕರ್ ಅವರು ಪ್ರಾಸ್ತಾವಿಕವಾಗಿ ಮಾತನಾಡಿ ವೇದಿಕೆಯ ಧ್ಯೇಯೋದ್ದೇಶಗಳನ್ನು ವಿವರಿಸಿದರು. ಕಾರ್ಯಕ್ರಮದಲ್ಲಿ ಇತಿಹಾಸ ತಜ್ಞರಾದ ಪ್ರಾಂಶುಪಾಲರಾದ ಕೋಲ್ಕಾರ್ ವೈದ್ಯರಾದ ಡಾಕ್ಟರ್ ಬಸವರಾಜ್ ಅಯೋಧ್ಯ ಪ್ರಗತಿಪರ ರೈತರಾದಂತ ಜೆ ನಾಗರಾಜ್ ಸದ್ಭಾವನಾ ಸಂಸ್ಥೆಯ ಸುಬ್ರಮಣ್ಯ ರಾಯ್ಕರ್ ಮಡಿವಾಳ ಸಮಾಜದ ಮುಖಂಡರಾದ ಚಿದಾನಂದಪ್ಪ ಮಾಸ್ಟರ್ ಮುಂತಾದವರು ಭಾಗವಹಿಸಿದ್ದರು.

ಶ್ರೀಯುತ ಜಿ ಗಿರಿಧರ್ ವಂದನಾರ್ಪಣೆ ನಡೆಸಿಕೊಟ್ಟರು.

# ಅಗತ್ಯ ವಸ್ತುಗಳ ಬೆಲೆ ಏರಿಕೆ ವಿರುದ್ಧಜನಾಕ್ರೋಶ ಯಾತ್ರಗೆ. ವಜ್ಜಲ ಕರೆ.




ಮಲ್ಲಮ್ಮ ನುಡಿ ವಾರ್ತೆ

ಲಿಂಗಸುಗೂರು.ಏ.21–ಅಗತ್ಯ ವಸ್ತುಗಳ ಬೆಲೆ ಏರಿಕೆ ವಿರುದ್ಧ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ರವರ ನೇತೃತ್ವದಲ್ಲಿ ರಾಯಚೂರಿನಲ್ಲಿ ಮಧ್ಯಾಹ್ನ 3 ಗಂಟೆಗೆ ನಡೆಯಲಿರುವ ಜನಾಕ್ರೋಶ ಯಾತ್ರೆಯಲ್ಲಿ ಲಿಂಗಸೂಗೂರು ಕ್ಷೇತ್ರದಿಂದ ನಾಲ್ಕು ಸಾವಿರ ಜನರು ಭಾಗವಹಿಸುವ ನಿರೀಕ್ಷೆ ಇದೆ ಎಂದು ಶಾಸಕ ಮಾನಪ್ಪ ವಜ್ಜಲ್ ಪಟ್ಟಣದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದರು. ಅವರು, ರಾಜ್ಯ ಕಾಂಗ್ರೆಸ್ ಸರ್ಕಾರದ ಜನವಿರೋಧಿ ನೀತಿಗಳಿಂದಾಗಿ ಜನಸಾಮಾನ್ಯರು ಬೇಸತ್ತು ಬಳಲುವಂತಾಗಿದೆ. ಭಾಗ್ಯಗಳನ್ನು ಕೊಟ್ಟಿದ್ದೇವೆ ಎಂಬ ನೆಪದಲ್ಲಿ ಅಗತ್ಯ ವಸ್ತುಗಳ ಬೆಲೆ ಏರಿಕೆ ಮಾಡಿ ರಾಜ್ಯದ ಜನತೆಗೆ ಕಾಂಗ್ರೆಸ್ ಕರ್ಸಾರ ಮೋಸ ಮಾಡುತ್ತಿದೆ. ಈ ಮೋಸವನ್ನು ಜನರಿಗೆ ತಿಳಿಸಿ ಬೆಲೆ ಏರಿಕೆಯನ್ನು ಹಿಂಪಡೆಯಬೇಕೆಂದು ಜನಾಕ್ರೋಶ ಯಾತ್ರೆಯನ್ನು ಕೈಗೊಳ್ಳಲಾಗಿದೆ ಎಂದರು.

ಈ ಯಾತ್ರೆಯಲ್ಲಿ ಬಿಜೆಪಿ ಪಕ್ಷದ ಹಿರಿಯ ಮುಖಂಡರು ಆಗಮಿಸಲ್ಲಿದ್ದಾರೆ. ಅಂದು ಬೃಹತ್ ಪ್ರತಿಭಟನೆ ಮಾಡಿ ಜಿಲ್ಲಾಧಿಕಾರಿಯವರಿಗೆ ಮನವಿ ಸಲ್ಲಿಸಲಾಗುವುದು. ಕಾರಣ ಕ್ಷೇತ್ರದ ಜನತೆ ಈ ಜನಾಕ್ರೋಶ ಯಾತ್ರೆಯಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕಂದು ಮನವಿ ಮಾಡಿದರು.

ಈ ಸಂದರ್ಭದಲ್ಲಿ ಭಾಜಪ ಮಂಡಲ ಅಧ್ಯಕ್ಷ ಅಯ್ಯಪ್ಪ ಮಾಳೂರು, ಹಿರಿಯ ಮುಖಂಡ ಗಿರಿಮಲ್ಲನಗೌಡ ಪಾಟೀಲ್, ಯಂಕನಗೌಡ ಗುಡದನಾಳ, ಮುದಕಪ್ಪ ನಾಯಕ ಪರಶುರಾಮ ಕೆಂಬಾವಿ ಸೇರಿ ಇತರರು ಇದ್ದರು.

# ವ್ಯಕ್ತಿ ಕಾಣೆ: ಪತ್ತೆಗೆ ಮನವಿ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಏ.21–ನಗರದ ಬಿ.ಎಂ.ಡಿ ಶಾಲಾ ಹಿಂಭಾಗದ ರೆಡ್ಡಿ ಬೀದಿಯ ವಾರ್ಡ್ ನಂ.12ರ ನಿವಾಸಿಯಾದ ಎಸ್.ಶಿವಪ್ರಾಕಶ್ ಎನ್ನುವ 47 ವರ್ಷದ ವ್ಯಕ್ತಿಯು ಮಾ.27 ರಂದು ಕಾಣೆಯಾಗಿದ್ದು, ಈ ಕುರಿತು ರೈಲ್ವೇ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಪತ್ತೆಗೆ ಸಹಕರಿಸಬೇಕು ಎಂದು ರೈಲ್ವೇ ಪೊಲೀಸ್ ಠಾಣೆಯ ಉಪ ನಿರೀಕ್ಷಕರು ತಿಳಿಸಿದ್ದಾರೆ. ಚಹರೆ ಗುರುತು: ಅಂದಾಜು 5.4 ಅಡಿ ಎತ್ತರ, ದುಂಡು ಮುಖ, ಗೋಧಿ ಮೈಬಣ್ಣ, ಸಾಧಾರಣ ಮೈಕಟ್ಟು ಹೊಂದಿದ್ದು, ಎಡಗಣ್ಣಿನಲ್ಲಿ ಪೊರೆ ಬಂದಿರುತ್ತದೆ. ಕಾಣೆಯಾದ ಸಂದರ್ಭದಲ್ಲಿ ನೀಲಿ ಬಣ್ಣದ ಅಂಗಿ ಮತ್ತು ಕಪ್ಪು ಬಣ್ಣದ ಪ್ಯಾಂಟ್ ಧರಿಸಿರುತ್ತಾನೆ. ಕನ್ನಡ ಮತ್ತು ತೆಲುಗು ಭಾಷೆ ಮಾತನಾಡುತ್ತಾನೆ.

ವ್ಯಕ್ತಿಯ ಬಗ್ಗೆ ಸುಳಿವು ಸಿಕ್ಕಲ್ಲಿ ರೈಲ್ವೇ ಪೊಲೀಸ್ ಠಾಣೆಯ ದೂ.08392–276063, ಪಿಎಸ್ ಮೊ.948082131 ಗೆ ಸಂಪರ್ಕಿಸಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಬಳ್ಳಾರಿ,ಏ.21–ನಗರದ ಬಿ.ಎಂ.ಡಿ ಶಾಲಾ ಹಿಂಭಾಗದ ರೆಡ್ಡಿ ಬೀದಿಯ ವಾರ್ಡ್ ನಂ.12ರ ನಿವಾಸಿಯಾದ ಎಸ್.ಶಿವಪ್ರಾಕಶ್ ಎನ್ನುವ 47 ವರ್ಷದ ವ್ಯಕ್ತಿಯು ಮಾ.27 ರಂದು ಕಾಣೆಯಾಗಿದ್ದು, ಈ ಕುರಿತು ರೈಲ್ವೇ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಪತ್ತೆಗೆ ಸಹಕರಿಸಬೇಕು ಎಂದು ರೈಲ್ವೇ ಪೊಲೀಸ್ ಠಾಣೆಯ ಉಪ ನಿರೀಕ್ಷಕರು ತಿಳಿಸಿದ್ದಾರೆ.

# ಮಳೆಗೆ ಭತ್ತ ನಾಶ ಪರಿಹಾರಕ್ಕೆ ಕರಣ್ ಸುಬೇದಾರ್ ಆಗ್ರಹ



ಮಲ್ಲಮ್ಮ ನುಡಿ ವಾರ್ತೆ

ಶಹಾಪುರ: ತಾಲೂಕಿನ ಸಗರ ಹಾಗೂ ಶಾರದಹಳ್ಳಿ ಗ್ರಾಮದಲ್ಲಿ ಧಾರಕಾರ ಮಳೆಗೆ ಭತ್ತ ಸಂಪೂರ್ಣ ಹಾಳಾಗಿದ್ದು ಸರಕಾರ ಪ್ರತಿ ಎಕರೆಗೆ 25 ಸಾವಿರ ಪರಿಹಾರ ನೀಡಬೇಕು ಎಂದು ಬಿಜೆಪಿ ಯುವ ಮುಖಂಡ ಕರಣ ಸುಬೇದಾರ ಆಗ್ರಹಿಸಿದ್ದಾರೆ. ಈ ಕುರಿತು ಪತ್ರಿಕೆ ಹೇಳಿಕೆ ನೀಡಿರುವ ಅವರು ಕಳೆದ 5 ವರ್ಷಗಳಿಂದಲೂ ಅನ್ನದಾತರು ಸಂಕಷ್ಟವನ್ನು ಎದುರಿಸುತ್ತಿದ್ದಾರೆ. 2 ವರ್ಷ ಕೋವಿಡ್ ನಿಂದ ತತ್ತರಿಸಿದ್ದು ಇನ್ನೂ 3 ವರ್ಷ ಧಾರಕಾರ ಮಳೆಗೆ ಬೆಲೆ ಹಾಳಾಗಿವೆ. ಸಾಲ ಮಾಡಿ ಬಿತ್ತನೆ ಮಾಡಿದ ಬೆಳೆಗಳು ಕೈಗೆ ಬರುವಷ್ಟರಲ್ಲಿ ಅಕಾಲಿಕ ಮಳೆಗೆ ನೆಲಕಚ್ಚಿವೆ. ಇದರಿಂದ ರೈತರು ತೊಂದರೆ ಅನುಭವಿಸಬೇಕಾಗಿದ್ದು ಕೂಡಲೇ ಸರಕಾರ 25 ಸಾವಿರರು.ಪರಿಹಾರ ನೀಡಬೇಕು ಎಂದು ಆಗ್ರಹಿಸಿದ್ದಾರೆ. ಬೀದ ಮತ್ತು ಶಿವಮೊಗ್ಗದಲ್ಲಿ ಸಾಮಾನ್ಯ ಪ್ರವೇಶ ಪರೀಕ್ಷೆ(ಸಿಇಟಿ) ಕೇಂದ್ರದಲ್ಲಿ ಸಿಬ್ಬಂದಿ ವಿದ್ಯಾರ್ಥಿಗಳು ಜನಿವಾರ ತೆಗೆಸಿದ ಘಟನೆ ತಪ್ಪು. ಜನಿವಾರ ಹಾಕಿದ್ದಕ್ಕೆ ಪರೀಕ್ಷೆಗೆ ಕೂರಿಸದೇ ಇರುವುದು ಸರಿಯಲ್ಲ. ಈ ಘಟನೆ ಖಂಡನೀಯ ಎಂದು ಬಿಜೆಪಿ ಯುವ ಮುಖಂಡ ಕರಣ ಸುಬೇದಾರ ಹೇಳಿದರು.

### ಬೇವೂರಿನಲ್ಲಿ ನರೇಗಾ ಕಾರ್ಮಿಕರ ಆರೋಗ್ಯ ತಪಾಸಣೆ:

# ಕಡು ಬಿಸಿಲು-ಕೂಲಿ ಕಾರ್ಮಿಕರು ಮುಂಜಾಗ್ರತೆ ವಹಿಸಬೇಕು-ಡಾ.ನಾಯಕ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಏ.21-ಬಿಸಿಲಿನ ತಾಪ ಅಧಿಕವಾಗುತ್ತಿದ್ದು, ಕೂಲಿ ಕಾರ್ಮಿಕರು ತಾಪಮಾನಕ್ಕೆ ಹೈರಾಣಾಗದೇ ಆರೋಗ್ಯ ಕಾಪಾಡಿಕೊಳ್ಳಬೇಕು ಎಂದು ಬೇವೂರ ಪ್ರಾಥಮಿಕ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿ ಡಾ.ಗಿರೀಶ ನಾಯಕ ಹೇಳಿದರು.

ತಾಲೂಕಿನ ಬೇವೂರ ಗ್ರಾಮದಲ್ಲಿ ನರೇಗಾ ಕೂಲಿ ಕಾರ್ಮಿಕರಿಗೆ ಪ್ರಾಥಮಿಕ ಆರೋಗ್ಯ ಕೇಂದ್ರ, ಗ್ರಾಮ ಪಂಚಾಯತಿ ಹಾಗೂ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ವತಿಯಿಂದ ಸೋಮವಾರ ಏರ್ಪಡಿಸಿದ್ದ ಉಚಿತ ಆರೋಗ್ಯ ತಪಾಸಣಾ ಶಿಬಿರದಲ್ಲಿ ಕಾರ್ಮಿಕರ ಆರೋಗ್ಯ ತಪಾಸಣೆ ನಡೆಸಿ ಮಾತನಾಡಿದ ಅವರು, ಆರೋಗ್ಯ ಮುಖ್ಯವಾಗಿದ್ದು, ಬಿಸಿಲಿನ ಸಮಯದಲ್ಲಿ ಅನುಸರಿಸಬೇಕಾದ ಆರೋಗ್ಯ ಕ್ರಮಗಳನ್ನು ಪಾಲಿಸಬೇಕು ಎಂದರು.

ಬಿಸಿಲಿಗೆ ನಿರ್ಜಲೀಕರಣವಾಗುವುದು ಸಹಜ. ಮುಂಜಾಗ್ರತೆಗೆ ಪ್ರತಿ 20 ನಿಮಿಷಕ್ಕೊಮ್ಮೆ ಶುದ್ಧ ಕುಡಿಯುವ ನೀರು ಬಳಸಬೇಕು. ಬಾಯಾರಿಕೆ ಆಗದಂತೆ ನೋಡಿಕೊಂಡು, ಆಗಾಗ ಓ.ಆರ್.ಎಸ್ ಬಳಸುವುದು ಸೂಕ್ತ ಎಂದ ಡಾ.ನಾಯಕ, ಮುಂಜಾನೆ 11 ಗಂಟೆಯ ನಂತರ ಕೆಲಸ ಮಾಡುವುದು ಆರೋಗ್ಯದ ದೃಷ್ಟಿಯಿಂದ ಸೂಕ್ತವಲ್ಲ ಎಂದು ಹೇಳಿದರು.

ಕೂಲಿ ಕಾರ್ಮಿಕರಿಗೆ ಆಯಾಸ ನಿವಾರಿಸಿಕೊಳ್ಳಲು ವಿಶ್ರಾಂತಿ ಪಡೆಯಲು ಹಾಗೂ ಕುಡಿಯುವ ನೀರಿನ ವ್ಯವಸ್ಥೆ ಮಾಡಲಾಗಿದೆ. ಇದರ ಪ್ರಯೋಜನ ಪಡೆದು ಆರೋಗ್ಯವನ್ನು ಕಾಪಾಡಿಕೊಳ್ಳಬೇಕು ಎಂದು ಅವರು ತಿಳಿಸಿದರು.

ಶಿಬಿರದಲ್ಲಿ ನೂರಾರು ಕಾರ್ಮಿಕರ ಆರೋಗ್ಯ ತಪಾಸಣೆ ನಡೆಸಲಾಯಿತಲ್ಲದೇ, ಮಧುಮೇಹ ಮತ್ತು ರಕ್ತದೊತ್ತಡ ಪರೀ-ಕ್ಷೆ ಕೂಡ ನಡೆಸಲಾಯಿತು. ಅನೇಕ ಕೂಲಿ ಕಾರ್ಮಿಕರಿಗೆ ಆರೋಗ್ಯ ಕಾಳಜಿಯ ಸಲಹೆ ನೀಡಲಾಯಿತು. ಗ್ರಾಪಂ ಪಿಡಿಓ ಭೀಮಪ್ಪ ಇಟಗಿ, ಅಧ್ಯಕ್ಷೆ ಫರೀದಾ ಗುರಗುನ್ನಿ, ಶರಣಪ್ಪ ಮಾಗನೂರ, ಚಿದಾನಂದ ಹೊಸಮನಿ, ಗ್ಯಾನಪ್ಪ ಬಾಲನಾಯಕ, ಬಸವರಾಜ ಭಗವತಿ, ಪ್ರಾಥಮಿಕ ಆರೋಗ್ಯ ಕೇಂದ್ರದ ಸಿಬ್ಬಂದಿ ಇದ್ದರು.

### ವಿವಿಧ ಕಾಮಗಾರಿಗಳಿಗೆ ಭೂಮಿ ಪೂಜೆ

# ಮತಕ್ಷೇತ್ರದ ಸರ್ವಾಂಗೀಣ ಅಭಿವೃದ್ಧಿಗೆ ಒತ್ತು-ಶಾಸಕ ಮೇಟಿ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಏ.21-ಗ್ರಾಮೀಣ ರಸ್ತೆಗಳ ದುರಸ್ಥಿ, ಡಾಂಬರೀಕರಣ, ಸಿಸಿ ರಸ್ತೆ ಹಾಗೂ ಸಮುದಾಯ ಭವನ ನಿರ್ಮಾಣ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳುವ ಮೂಲಕ ಮತಕ್ಷೇತ್ರದ ಸಮಗ್ರ ಅಭಿವೃದ್ಧಿಗೆ ಹೆಚ್ಚು ಒತ್ತು ನೀಡಲಾಗುವುದು ಎಂದು ಶಾಸಕ ಎಚ್.ವಾಯ್.ಮೇಟಿ ಹೇಳಿದರು.

ಬಾಗಲಕೋಟ ವಿಧಾನಸಭಾ ಮತಕ್ಷೇತ್ರದ ವಿವಿಧ ಗ್ರಾಮಗಳಲ್ಲಿ ಕೈಗೊಳ್ಳಲಾಗುವ ಅಭಿವೃದ್ಧಿ ಕಾಮಗಾರಿಗಳಿಗೆ ಸೋಮವಾರ ಬಿಲ್‌ಕೆರೂರ ಗ್ರಾಮದಲ್ಲಿ ಭೂಮಿ ಪೂಜೆ ನೆರವೇರಿಸಿ ಮಾತನಾಡಿದ ಅವರು, 2024-25 ನೇ ಸಾಲಿನ ಮುಖ್ಯಮಂತ್ರಿಗಳ ವಿಶೇಷ ಅನುದಾನದಡಿ 95 ಲಕ್ಷ ರೂ.ಗಳ ಪ್ಯಾಕೇಜನಡಿ 45 ಲಕ್ಷ ರೂ.ಗಳಲ್ಲಿ ಬಿಲ್ ಕೆ-ರೂರ ಗ್ರಾಮದ ಸಂಗಾಪೂರ ರಸ್ತೆ ಸುಧಾರಣೆ, 10 ಲಕ್ಷ ರೂ.ಗಳ ಬೋಡನಾಯಕದಿನ್ನಿಯಿಂದ ಇಐಡಿ ಪ್ಯಾರಿ ಶುಗರ್ ಪ್ಯಾಕ್ಟರಿ ರಸ್ತೆ ಸುಧಾರಣೆ, 10 ಲಕ್ಷ ರೂ.ಗಳಲ್ಲಿ ಬಸವನಗರದಲ್ಲಿ ಸಿಸಿ ರಸ್ತೆ ನಿರ್ಮಾಣ ಹಾಗೂ 20 ಲಕ್ಷ ರೂ.ಗಳಲ್ಲಿ ತಿಮ್ಮಾಪೂರ ಗ್ರಾಮದಲ್ಲಿ ಸಿಸಿ ರಸ್ತೆ ನಿರ್ಮಾಣ ಕಾಮಗಾರಿಗಳನ್ನು ಪಂಚಾಯತ್‌ರಾಜ್ ಇಲಾಖೆಯಿಂದ ಮಾಡಲಾಗುತ್ತಿದೆ ಎಂದರು.

ಲೋಕೋಪಯೋಗಿ ಇಲಾಖೆಯ 3 ಕೋಟಿ ರೂ.ಗಳ ವೆಚ್ಚದಲ್ಲಿ ಭಗವತಿಯಲ್ಲಿ ಸಿಸಿ ರಸ್ತೆ, ಮುಡಪಜೀವಿ ಗ್ರಾಮದಿಂದ ಅಚನೂರ ಗ್ರಾಮದವರೆಗೆ ಮತ್ತು ಆಲಮಟ್ಟಿ ರಸ್ತೆಯ ಲಕ್ಷ್ಮೀದೇವಿ ದೇವಸ್ಥಾನದಿಂದ ತಿಮ್ಮಾಪೂರ ಗ್ರಾಮದವರೆಗಿನ ರಸ್ತೆ ಸುಧಾರಣೆ ಕಾಮಗಾರಿ ಕೈಗೆತ್ತಿಕೊಳ್ಳಲಾಗುತ್ತಿದೆ. ನಿರ್ಮಿತಿ ಕೇಂದ್ರದಿಂದ ಬಿಲ್ ಕೆರೂರಿನಲ್ಲಿ ಸರಕಾರಿ ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿ ನಿಲಯದಲ್ಲಿ ಹೆಚ್ಚುವರಿ ಕೊಠಡಿ ಮತ್ತು ಅದೇ ಗ್ರಾಮದ ಅಲ್ಪಸಂಖ್ಯಾತರ ಕಾಲೊನಿಯಲ್ಲಿ ಸಿಸಿ ರಸ್ತೆ ನಿರ್ಮಾಣ ಮಾಡಲಾಗುತ್ತಿದೆ ಎಂದು ಶಾಸಕರು ತಿಳಿಸಿದರು.

ಸಂಗಾಪೂರದಲ್ಲಿ 25 ಲಕ್ಷದಲ್ಲಿ ಸಮುದಾಯ ಭವನ, 20 ಲಕ್ಷದಲ್ಲಿ ಬಿಲ್ ಕೆರೂರಿನಲ್ಲಿ ಸಮುದಾಯ ಭವನ, 10 ಲಕ್ಷದಲ್ಲಿ ಮುಗಳೊಳ್ಳಿ ತಾಂಡಾ ಸಿಸಿ ರಸ್ತೆ, ಹಿರೇಗುಳಬಾಳ ತಾಂಡಾದಲ್ಲಿ 9 ಲಕ್ಷ ರೂ.ಗಳ ವೆಚ್ಚದಲ್ಲಿ ಸಿಸಿ ರಸ್ತೆ ನಿರ್ಮಾಣ ಮಾಡಲಾಗುತ್ತಿದೆ ಎಂದು ಹೇಳಿದ ಅವರು, ಗುತ್ತಿಗೆದಾರರ ಗುಣಮಟ್ಟದ ಕಾಮಗಾರಿಗೆ ಆದ್ಯತೆ ಕೊಡಬೇಕು. ಸಾರ್ವಜನಿಕರ ಸಹಕಾರದೊಂದಿಗೆ ಉತ್ತಮ ಕಾಮಗಾರಿ ಕೈಗೊಳ್ಳಬೇಕು ಎಂದು ತಿಳಿಸಿದರು.

ಜಿಪಂ ಮಾಜಿ ಅಧ್ಯಕ್ಷ ಬಸವಂತಪ್ಪ ಮೇಟಿ, ಉಮೇಶ ಮೇಟಿ, ನಿಂಗಪ್ಪ ಕೋಟಿ, ಮಲ್ಲಿಕಾರ್ಜುನ ಮೇಟಿ, ಲಕ್ಷ್ಮಣ್ಣ ದಡ್ಡಿ, ರಮೇಶ ಕೊಳ್ಳಾರ, ಲೋಕನಗೌಡ ಗೌಡರ, ಶಿವಪ್ಪ ಕರಲಿಂಗನ್ನವರ, ಲಕ್ಷ್ಮಣ ಅರಮನಿ, ದಾವಲ್‌ಸಾಬ್ ಚೊಳಚಗುಡ್ಡ, ಶಿವನಗೌಡ ಪಾಟೀಲ, ವೈ.ವೈ.ತಿಮ್ಮಾಪುರ, ಪಂಚಾಯತ್‌ರಾಜ್ ಇಲಾಖೆಯ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರ ಎಸ್.ಎಂ.ರೇವಡಿ, ಲೋಕೋಪಯೋಗಿ ಇಲಾಖೆಯ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರ ನಾರಾಯಣ ಕುಲಕರ್ಣಿ, ನಿರ್ಮಿತಿ ಕೇಂದ್ರದ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರ ಎಸ್.ಎನ್.ಹಿರೇಮಠ, ಸಹಾಯಕ ಅಭಿಯಂತರರಾದ ಮಲ್ಲು ಹಾಲವರ, ರಕ್ಷಾ ಕಳ್ಳಿಗುಡ್ಡ, ಶ್ರೀಧರ ಸಂಗನಾಳ, ರಫೀಕ ಮತ್ತು ಗುತ್ತಿಗೆದಾರರು ಇದ್ದರು.

# ಭೋವಿಗೂ ವಡ್ಡರ ಜನಾಂಗಕ್ಕೂ ಸಂಬಂಧವಿಲ್ಲ-ಕೇಶವ ಭೋವಿ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಏ.21-ಭೋವಿ ಹಾಗೂ ವಡ್ಡರ ಜನಾಂಗಕ್ಕೆ ಯಾವುದೇ ಸಂಬಂಧವಿಲ್ಲ. ವಡ್ಡರ ಜನಾಂಗಕ್ಕೆ ಭೋವಿ ಎಂದು ಪ್ರಮಾಣಪತ್ರ ನೀಡಿದಲ್ಲಿ ನ್ಯಾಯಾಲಯದ ಮೂಲಕ ಉತ್ತರ ನೀಡಲಾಗುವುದು ಎಂದು ಕರ್ನಾಟಕ ಭೋವಿ ಸಮಾಜ ವಿಕಾಸ ಸಂಘದ ರಾಜ್ಯಾಧ್ಯಕ್ಷ ಕೇಶವ ಭೋವಿ ಹೇಳಿದರು.

ಸೋಮವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಭೋವಿ ಸಮುದಾಯ ಮೊದಲಿನಿಂದಲೂ ರಾಜ ಮಹಾರಾಜರ ಕಾಲದಿಂದಲೂ ಪಲ್ಲಕ್ಕಿ, ಮೇಣೆ ಹೊರುವ ವೃತ್ತಿ ಮಾಡುತ್ತ ಬಂದಿದ್ದು, ನಮ್ಮದೇ ನಿಜವಾದ ಭೋವಿ ಸಮಾಜ. ವಡ್ಡರ ಸಮಾಜ ನಮ್ಮ ಜಾತಿಯನ್ನು 2002 ರಲ್ಲಿ ಹೈಜಾಕ್ ಮಾಡಿ ಭೋವಿ ವಡ್ಡರ ಪೀಠವನ್ನು ಸ್ಥಾಪನೆ ಮಾಡಿಕೊಂಡಿದ್ದಾರೆ. ಈಗ ನಮ್ಮದೇ ಆದ ಪೀಠವನ್ನು ಸ್ಥಾಪನೆ ಮಾಡಲು ಚಿಂತನೆ ನಡೆಸಿದ್ದೇವೆ ಎಂದರು.

ಬೆಳಗಾವಿ ಅಧಿವೇಶನ ಸಂದರ್ಭದಲ್ಲಿ ನಮ್ಮ ಸಮುದಾಯದಿಂದ ಪ್ರತಿಭಟನೆ ನಡೆಸುತ್ತಿದ್ದ ವೇದಿಕೆಗೆ ಆಗಮಿಸಿದ ಸಚಿವ ಶಿವರಾಜ್ ತಂಗಡಗಿ ಭೋವಿ ಬೇರೆ, ವಡ್ಡರ ಬೇರೆ ಎಂದು ಹೇಳಿದ್ದಾರೆ. ಅವರ ಜಾತಿ ಪ್ರಮಾಣ ಪತ್ರವೂ ಸಹಿತ ವಡ್ಡರ ಅಂತಾ ಇದೆ. ಆದರೆ ಭೋವಿ ಪದವನ್ನು ದುರ್ಬಳಕೆ ಮಾಡಿಕೊಳ್ಳುತ್ತಿದ್ದಾರೆಂದು ಕೇಶವ ಆರೋಪಿಸಿದರು.

ವಡ್ಡರ ಜನಾಂಗದ ಎಲ್ಲ ಉಪ ಜಾತಿಗಳಿಗೆ ಭೋವಿ ಅಂತಾ ಪರಿಶಿಷ್ಟ ಜಾತಿ ಪ್ರಮಾಣ ಪತ್ರವನ್ನು ತಾಲೂಕಾ ಅಧಿಕಾರಿಗಳು ನೀಡುತ್ತಿದ್ದಾರೆ. ಇದ-ರಿಂದ ಭೋವಿ ಸಮಾಜದವರಿಗೆ ಜಾತಿ ಪ್ರಮಾಣ ಪತ್ರ ಮತ್ತು ಜಾತಿ ಸಿಂಧುತ್ವ ಪ್ರಮಾಣ ಪತ್ರ ಪಡೆಯುವಲ್ಲಿ ಗೊಂದಲ ಉಂಟಾಗುತ್ತಿದ್ದು, ಭೋವಿ ಮತ್ತು ವಡ್ಡರ ಜನಾಂಗ ಬೇರೆ ಬೇರೆಯಾಗಿದ್ದು ಪ್ರವರ್ಗ-1 ರಲ್ಲಿ ಬರುವ ಬಂಡಿವಡ್ಡರ, ಗಿರಣಿವಡ್ಡರ ಮತ್ತು ತುಡುಗುವಡ್ಡರ ಜನರಿಗೆ ಭೋವಿ ಪರಿಶಿಷ್ಟ ಜಾತಿ ಪ್ರಮಾಣ ಪತ್ರ ನೀಡುತ್ತಿದ್ದಾರೆ ಇಂತಹ ಅಧಿಕಾರಿಗಳ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳಬೇಕೆಂದು ಸರ್ಕಾರಕ್ಕೆ ಆಗ್ರಹಿಸಿ ಸಾಕಷ್ಟು ಬಾರಿ ಮನವಿ ಮಾಡಿಕೊಂಡಿದ್ದೇವೆ ಆದರೂ ಯಾವುದೇ ಕ್ರಮವಾಗಿಲ್ಲ. ನ್ಯಾಯಾಲಯದ ಮೂಲಕ ನಾವು ನ್ಯಾಯವನ್ನು ಕೇಳುತ್ತೇವೆ ಎಂದು ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಸಂಘದ ಗೌರವಾಧ್ಯಕ್ಷ ಕೆ.ಜಿ.ಕುಮಾರಸ್ವಾಮಿ, ಪ್ರಧಾನ ಕಾರ್ಯದರ್ಶಿ ಯಮನಪ್ಪ ಭೋವಿ, ಪುಂಡಲೀಕ ಭೋವಿ, ಮುತ್ತು ಭೋವಿ, ಬೇಲೂರಪ್ಪ ಭೋವಿ ಮತ್ತಿತರರಿದ್ದರು.

## ಏ.26 ರಂದು 'ಮೂಕಮಾಟಿ' ಕಾವ್ಯಾವಲೋಕನ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಏ.21-ಚರಂತಿಮಠ ಶಿವಾನುಭವ ಸಮಿತಿ ಹಾಗೂ ಸಾಹಿತ್ಯ, ಸಂಸ್ಕೃತಿ ಸಂವಹನ ವೇದಿಕೆ ಅಡಿಯಲ್ಲಿ ಪ್ರತಿ ತಿಂಗಳು ನಡೆಯುವ ತಿಂಗಳ ವಿಶೇಷ ಉಪನ್ಯಾಸ ಮಾಲಿಕೆಯ 5ನೇ ಸಂಚಿಕೆ ಏ.26 ಶನಿವಾರ ಸಾಯಂಕಾಲ 6 ಗಂಟೆಗೆ ಚರಂತಿಮಠದ ಕಲ್ಯಾಣ ಮಂಟಪದಲ್ಲಿ ಜರುಗಲಿದೆ.

ಈ ವಿಶೇಷ ಉಪನ್ಯಾಸ ಮಾಲಿಕೆಯಲ್ಲಿ ಪೂಜ್ಯ ಆಚಾರ್ಯ ವಿದ್ಯಾಸಾಗರಜೀ ವಿರಚಿತ 'ಮೂಕಮಾಟಿ' ಕಾವ್ಯದ ಕುರಿತಾಗಿ ಜಮಖಂಡಿಯ ಪ್ರೊ.ಬಿ.ಪಿ.ನ್ಯಾಮಗೌಡ ಉಪನ್ಯಾಸ ನೀಡಲಿದ್ದಾರೆ.

ಕಾರ್ಯಕ್ರಮದ ದಿವ್ಯ ಸಾನಿಧ್ಯವನ್ನು ಚರಂತಿಮಠದ ಪೂಜ್ಯ ಶ್ರೀ ಪ್ರಭುಸ್ವಾಮಿಗಳು ವಹಿಸುವರು. ಬಿ.ವಿ.ವಿ.ಸಂಘದ ಆಡಳಿತಾಧಿಕಾರಿ ಡಾ.ವಿ.ಎಸ್.ಕಟಗಿಹಳ್ಳಿಮಠ, ಸಂಚಾಲಕ ಡಾ.ಎಂ.ನಂಜುಂಡಸ್ವಾಮಿ, ಡಾ.ಬಸವರಾಜ ಖೋತ ಸೇರಿದಂತೆ ಪದಾಧಿಕಾರಿಗಳು, ಸದಸ್ಯರು, ಸಾಹಿತ್ಯಾಸಕ್ತರು ಭಾಗವಹಿಸುವರು.

# ಜನಿವಾರ ಘಟನೆ ಸೂಕ್ತ ತನಿಖೆಗೆ ಪಿ.ಎಚ್.ಪೂಜಾರ ಆಗ್ರಹ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ.ಏ.21-ಸಿಇಟಿ ಪರೀಕ್ಷೆಯ ಸಂದರ್ಭದಲ್ಲಿ ಜನಿವಾರ ಬಿಚ್ಚಿಸಿದ ಪ್ರಕರಣದ ಹಿಂದೆ ವ್ಯವಸ್ಥಿತ ಷಡ್ಯಂತ್ರ ಅಡಗಿರುವ ಶಂಕೆಯಿದ್ದು, ಈ ಬಗ್ಗೆ ಸೂಕ್ತ ತನಿಖೆ ನಡೆಯಬೇಕೆಂದು ವಿಧಾನ ಪರಿಷತ್ ಸದಸ್ಯ ಪಿ.ಎಚ್.ಪೂಜಾರ ಒತ್ತಾಯಿಸಿದ್ದಾರೆ.



ನವನಗರದ ಜಿಲ್ಲಾಡಳಿತ ಭವನದ ಎದುರು ಸೋಮವಾರ ಹಿಂದೂ ಸಂಸ್ಕೃತಿ ಸುರಕ್ಷಾ ಸಮಿತಿಯಿಂದ ಶಿವಮೊಗ್ಗ, ಬೀದರ್ ಹಾಗೂ ಧಾರವಾಡಗಳಲ್ಲಿ ಜನಿವಾರ ಬಿಚ್ಚಿಸಿದ ಘಟನೆ ಖಂಡಿಸಿ ನಡೆದ ಪ್ರತಿಭಟನೆಯಲ್ಲಿ ಮಾತನಾಡಿದ ಅವರು, ಜನಿವಾರ, ಶಿವದಾರಗಳು ನಮ್ಮ ಪರಂಪರೆಯ ಅಸ್ಮಿತೆಯ ಸಂಕೇತ. ಅವುಗಳ ಮಹತ್ವ ಅರಿಯದೆ ಬಿಚ್ಚಿಸಿ ಹಾಕುವಷ್ಟು ದಾರಿದ್ರ್ಯತನ ತುಂಬಿಕೊಂಡಿರುವುದು ದುರದೃಷ್ಟಕರ ಎಂದರು.

ಘಟನೆಗೆ ಸಂಬಂಧಿಸಿದಂತೆ ರಾಜಕೀಯ ಟೀಕೆ ಮಾಡಲಾರೆ. ಆದರೆ ಘಟನೆ ಒಂದೇ ಕಡೆ ಜರುಗಿಲ್ಲ. ಅನೇಕ ಕಡೆ ನಡೆದಿರುವುದರಿಂದ ಈ ಬಗ್ಗೆ ಸೂಕ್ತ ತನಿಖೆ ನಡೆಯಬೇಕೆಂದು ಹೇಳಿದರು. ಬೀದರ್‌ನಲ್ಲಿ ಈ ಸಂಬಂಧ ಪರೀಕ್ಷೆಯಿಂದ ಹೊರಗುಳಿದ ಸುಚಿವೃತ ಕುಲಕರ್ಣಿಗೆ ಸರ್ಕಾರ ಉಚಿತ ಸೀಟ್ ನೀಡಿ ಆತನ ಭವಿಷ್ಯಕ್ಕೆ ನೆರವಾಗುವ ಕೆಲಸ ಮಾಡಬೇಕೆಂದು ಪೂಜಾರ ಆಗ್ರಹಿಸಿದರು.

ಹೋರಾಟದ ನೇತೃತ್ವ ವಹಿಸಿದ್ದ ಡಾ.ಗಿರೀಶ ಮಾಸುರಕರ, ಜನಿವಾರ ತಗಿಸುವ ಮಟ್ಟಕ್ಕೆ ಇಳಿದಿರುವ ಸಿಬ್ಬಂದಿಯನ್ನು ಅಮಾನತು ಮಾಡುವುದಷ್ಟೇ ಅಲ್ಲ ಜೈಲಿಗಟ್ಟುವ ಕೆಲಸ ಮಾಡಬೇಕು. ಈ ವಿಚಾರದಲ್ಲಿ ವಿದ್ಯಾರ್ಥಿ ನೆರವಿಗೆ ಧಾವಿಸಿರುವ ಸಚಿವ ಈಶ್ವರ ಖಂಡ್ರೆ ಅವರನ್ನು ಅಭಿನಂದಿಸುವಾಗಿ ಹೇಳಿ, ಬ್ರಾಹ್ಮಣರ ಮೇಲೆ ಮೂತ್ರ ಮಾಡುವುದಾಗಿ ಹೇಳಿಕೆ ನೀಡಿರುವ ಬಾಲಿವುಡ್ ನಿರ್ದೇಶಕ ಅನುರಾಗ್ ಕಶ್ಯಪ್ ಚಿತ್ರಗಳನ್ನು ಯಾರೂ ವೀಕ್ಷಿಸಬಾರದು ಎಂದು ಕರೆ ನೀಡಿದರು.

ಆರ್ಯವೈಶ್ಯ ಸಮಾಜದ ಸತ್ಯನಾರಾಯಣ ಹೇಮಾದ್ರಿ, ಎಸ್.ಎಲ್.ಕೋರಾ ಮಾತನಾಡಿ, ಜನಿವಾರಕ್ಕೆ ಒಂದು ವೈಶಿಷ್ಟ್ಯತೆಯಿದೆ. ಅದು ಧಾರ್ಮಿಕ ನಂಬಿಕೆ. ಅದನ್ನು ತೆಗೆಯುವ ಧೈರ್ಯ ಮಾಡಿದವರು ಸಂವಿಧಾನ ವಿರೋಧಿಗಳು. ವೈಯಕ್ತಿಕ ಧಾರ್ಮಿಕ ಆಚರಣೆಗೆ ಅಡ್ಡಿಪಡಿಸಲು ಇವರಿಗೆ ಹೇಳಿದ್ದು ಯಾರು ಈ ಬಗ್ಗೆ ತನಿಖೆ ಆಗಬೇಕೆಂದರು.

ಕ್ಷತ್ರೀಯ ಒಕ್ಕೂಟದ ಡಾ.ಶೇಖರ ಮಾನೆ, ಹಿಂದೂಗಳ ಮೇಲೆ ನಿರಂತರ ದಬ್ಬಾಳಿಕೆ ನಡೆಯುತ್ತಿದೆ. ಕರ್ನಾಟಕದಲ್ಲಿ ಜನಿವಾರ ತೆಗೆಸಿರುವ ಘಟನೆ ನಿಜಕ್ಕೂ ಆತಂಕ ಸೃಷ್ಟಿ ಮಾಡಿದೆ. ವಿದ್ಯಾರ್ಥಿಗಳನ್ನು ಕುಗ್ಗಿಸುವ ಕೆಲಸವಾಗಿದೆ. ಸಮಾಜ ಒಗ್ಗಟ್ಟಾಗುವುದರಿಂದ ಮಾತ್ರವೇ ಇಂಥ ಘಟನೆಗಳನ್ನು ತಡೆಯಲು ಸಾಧ್ಯ ಎಂದರು.

ಪಂ.ಬಿಂದುಮಾಧವಾಚಾರ್ಯ ನಾಗಸಂಪಿಗೆ, ಪಂ.ಭೀಮಸೇನಾಚಾರ್ಯ ಪಾಂಡುರಂಗಿ ಮಾತನಾಡಿ, ಸುಚಿವೃತ್ ಕುಲಕರ್ಣಿ ತೆ-ೋರಿದ ಧೈರ್ಯದಿಂದಾಗಿ ನಾವೆಲ್ಲರೂ ಒಂದಾಗುವಂತೆ ಆಗಿದೆ. ತಾಯಿಯಿಂದ ಮೊದಲ ಜನನವಾದರೆ, ಜನಿವಾರದಿಂದ ಎರಡನೇ ಜನನ ಎಂಬ ನಂಬಿಕೆಯಿದೆ. ಅದನ್ನು ಧರಿಸಲು, ತ್ಯಜಿಸಲು ಅದರದೇ ಆದ ವಿಧಾನಗಳಿವೆ. ಈ ಘಟನೆ ನಿಜಕ್ಕೂ ದಿಗ್ಭ್ರಮೆಯನ್ನುಂಟು ಮಾಡಿದೆ. ಯಾವ ಕಾರಣಕ್ಕೂ ಇದನ್ನು ಸಮಾಜ ಸಹಿಸಲು ಸಾಧ್ಯವಿಲ್ಲ. ನಮಗೆ ಶಾಸ್ತ್ರ, ಶಸ್ತ್ರ ಎರಡೂ ಗೊತ್ತಿದೆ ಎಂದರು.

ಮರಾಠ ಸಮಾಜದ ಅಧ್ಯಕ್ಷ ಎಂ.ಆರ್.ಶಿಂಧೆ, ಗಣಪತಿ(ರಾಜು)ವಾಘ, ಭಾವಸಾರ ಕ್ಷತ್ರೀಯ ಸಮಾಜದ ಅಧ್ಯಕ್ಷ ಚಂದ್ರಕಾಂತ ತೇಲ್ಕರ್, ವಾಸುದೇವ ಝಿಂಗಾಡೆ, ಸಂತೋಷ ಕರಣಿ, ಮಹೇಶ ತೇಲ್ಕರ್, ಮಹೇಶ್ವರಿ ಸಮಾಜದ ಲಕ್ಷ್ಮೀನಾರಾಯಣ ಕಾಸಟ, ರಾಮ ಮುಂದಡಾ, ನಗರಸಭೆ ಉಪಾಧ್ಯಕ್ಷೆ ಶೋಭಾ ವೆಂಕಟೇಶ ರಾವ್, ಮುಖಂಡರಾದ ನಾಗರಾಜ ಹದ್ಲಿ, ವಿಜಯ

## ನೈಜತೆ ಪ್ರಮಾಣ ಪತ್ರಕೆ ನಾಲ್ಕು ವರ್ಷ ವಿಳಂಬ ಮಾಡಿದ ಕಲಬುರಗಿ ವಿಶ್ವವಿದ್ಯಾಲಯ.

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ.ಎಪ್ರಿಲ್ 19: ಗುಲಬರ್ಗಾ ವಿಶ್ವವಿದ್ಯಾಲಯದ ವ್ಯಾಪ್ತಿಯಲ್ಲಿ ಬರುವ ಬೀದರ ಜಿಲ್ಲೆಯ ಬಸವಕಲ್ಯಾಣದ ಎಸ್ ಎಸ್ ಕೆಬಿ ಪದವಿ ಕಾಲೇಜು ಮತ್ತು ದೊಡ್ಡಪ್ಪ ಅಪ್ಪ ಬಿ.ಇಡಿ ಕಾಲೇಜಿನಲ್ಲಿ 2004 ಮತ್ತು 2005 ರಲ್ಲಿ ಅನುಕ್ರಮವಾಗಿ ಬಿ.ಎ.ಬಿ.ಇಡಿ ಪದವಿಗಳಲ್ಲಿ

ಅಧ್ಯಯನ ಮಾಡಿ ತೇರ್ಗಡೆ-ಯಾದ ವಿದ್ಯಾರ್ಥಿ ಮಚ್ಚೇಂದ್ರ ತಂದೆ ಪಂಡಿತ ಅವರು ಸರ್ಕಾರಿ ಹುದ್ದೆಗೆ ಸೇರಿದ ಮೇಲೆ ಬಿ.ಎ.ಬಿ.ಇಡಿ ಪದವಿ ಪ್ರಮಾಣ ಪತ್ರಗಳ ನೈಜತೆಗಾಗಿ ದಿನಾಂಕ 10-11-2021 ರಲ್ಲಿ ಅರ್ಜಿ ಸಲ್ಲಿಸಿದರು. ಆದರೆ ಇನ್ನೂ ಇಲ್ಲಿಯವರೆಗೂ ಅವರ ಪ್ರಮಾಣ ಪತ್ರಗಳಿಗೆ ಯಾವುದೇ ನೈಜತೆ ಪ್ರಮಾಣ ಪತ್ರ ನೀಡದೆ ವಿಳಂಬ ಮಾಡಿ ನಾಲ್ಕು ವರ್ಷ ಕಛೇರಿ ಅಲೆದಾಡುವಂತೆ ಮಾಡುತ್ತಿರುವುದಾಗಿ ತಿಳಿದು ಬಂದಿದೆ. ಈ ಕುರಿತು ಮಚ್ಚೇಂದ್ರ ಅಣಕಲ್ ಅವರು ಬಿ.ಎ ಮತ್ತು ಬಿ.ಇಡಿ ಎರಡು ಪದವಿ ಪ್ರಮಾಣ ಪತ್ರಗಳ ನೈಜತೆಗಾಗಿ ಒಟ್ಟು -1800 ರೂಪಾಯಿಗಳು ಇ-ಪೇಮೆಂಟ್ ಮೂಲಕ ಆನ್ ಲೈನ್ ನಲ್ಲಿ ಚಲನ ಕಟ್ಟಿದ್ದಾರೆ. ಆದರೆ ವಿಶ್ವವಿದ್ಯಾಲಯದ ಸಿಬ್ಬಂದಿಗಳು ಅವರ ಪ್ರಮಾಣ ಪತ್ರಗಳ ನೈಜತೆ ಮಾಡಿ ಕಳಿಸದೆ ವಿನಾ: ಕಾರಣ




ವಿಳಂಬ ಮಾಡಿ 4 ವರ್ಷ ಸಮಯ ಹಾಳು ಮಾಡಿದ್ದಾರೆ ಎಂದು ಅಭ್ಯಾರ್ಥಿ ಮಚ್ಚೇಂದ್ರ ಅಣಕಲ್ ಅವರು ಆರೋಪಿಸಿದ್ದಾರೆ. ಈ ಗುಲಬರ್ಗಾ ವಿಶ್ವವಿದ್ಯಾಲಯದಲ್ಲಿ ಸಿಬ್ಬಂದಿಗಳು ಲಂಚ ಪಡೆದು ಕೆಲಸ ಮಾಡುತ್ತಿದ್ದಾರೆ. ಯಾವುದೇ ಸಣ್ಣ ಪುಟ್ಟ ಕೆಲಸ ಕಾರ್ಯಗಳು ಮಾಡಿಕೊಳ್ಳಲು ವಿಶ್ವವಿದ್ಯಾಲಯಕ್ಕೆ ಬರುವ ಅಭ್ಯಾರ್ಥಿಗಳಿಂದ ಸುಮಾರು ಎರಡು ಸಾವಿದಿಂದ 20 ಸಾವಿರ ವರೆಗೆ ಲಂಚ ಪಡೆದು ಕೆಲಸ ಮಾಡುವುದು ಕಂಡು ಬರುತ್ತಿದೆ." ಎಂದು ಆರೋಪಿಸಿದ ಅವರು ನಾನು ಯಾವುದೇ ರೀತಿಯ ಹಣ ಅಥವಾ ಲಂಚ ನೀಡದೆ ಇರುವುದರಿಂದ ನನ್ನ ಅರ್ಜಿ ನಾಲ್ಕು ವರ್ಷಗಳಿಂದ ಪೆಂಡಿಂಗ್ ನಲ್ಲಿ ಇಟ್ಟಿದ್ದಾರೆ. ಈ ಕುರಿತು ಮೌಲ್ಯಮಾಪನ ವಿಭಾಗದ ರಿಜಿಸ್ಟ್ರಾರ್ ಅವರಿಗೆ ಎರಡ್ಮೂರ ಸಲ ಹೋಗಿ ಮನವಿ ಕೊಟ್ಟರು ಕೂಡ ಅವರು ಯಾವುದೇ ಕ್ರಮ ಕೈಗೊಳ್ಳದೆ ಇರುವುದು ಅವರ ನಿಷ್ಕಾಳಜಿಗೆ ಇದು ಕಾರಣವಾಗಿ ತಿಳಿದು ಬರುತ್ತಿದೆ.

ಈ ವಿಶ್ವವಿದ್ಯಾಲಯದಲ್ಲಿ ಡಿ.ದರ್ಜೆಯ ಸಿಬ್ಬಂದಿಗಳು ಹಿಡಿದು ಎಲ್ಲ ಮೇಲಾಧಿಕಾರಿಗಳು ತುಂಬ ಕಡು ಭ್ರಷ್ಟರಾಗಿ ಮತ್ತು ಭ್ರಷ್ಟಾಚಾರಿಗಳಾಗಿ ಕಂಡು ಬರುತ್ತಿದ್ದಾರೆ. ಮತ್ತು ಅವರು ಸಮಯಕ್ಕೆ ಸರಿಯಾಗಿ ವಿಶ್ವವಿದ್ಯಾಲಯದ ಕಛೇರಿಗಳಲ್ಲಿ ಇರುವುದಿಲ್ಲ ಮತ್ತು ಅವರು ಬೇಕಾ ಬಿಟ್ಟಿಯಾಗಿ ಯಾವಾಗ ಬೇಕಾದರೂ ಬಂದು ಹೋಗುವುದು ಮಾಡುತ್ತಾರೆ. ಆದ್ದರಿಂದ ಸಂಬಂಧ ಪಟ್ಟ ಅಧಿಕಾರಿಗಳು ಈ ಭ್ರಷ್ಟ ಸಿಬ್ಬಂದಿಗಳಿಗೆ ಕಡಿವಾಣ ಹಾಕಬೇಕು. ಎಂದು ಮಚ್ಚೇಂದ್ರ ಅಣಕಲ್ ಅವರು ಆಗ್ರಹಿಸಿದ್ದಾರೆ. ಅಷ್ಟೇಯಲ್ಲದೇ ಅವರು ನೈಜತೆ ಪ್ರಮಾಣ ಪತ್ರ ನೀಡದೇ ವಿಳಂಬ ಮಾಡಿ ನನ್ನ ಸಮಯ ಮತ್ತು ಹಣವನ್ನು ವ್ಯರ್ಥ ಮಾಡಿದ ವಿಶ್ವವಿದ್ಯಾಲಯದ ಅಧಿಕಾರಿಗಳ ವಿರುದ್ಧ ಕಲಬುರಗಿ ಕೋರ್ಟಿನಲ್ಲಿ ದಾವೆ ಹೂಡಲಾಗುವುದೆಂದು ಅವರು ತಿಳಿಸಿದ್ದಾರೆ.

# ಅಸಂಘಟಿತ ಕಾರ್ಮಿಕರಿಗೆ ವಿವಿಧ ಸೌಲಭ್ಯ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಏ.21-ಅಸಂಘಟಿತ ವರ್ಗದಲ್ಲಿ ದುಡಿಯುತ್ತಿರುವ ಸಾಮಾಜಿಕ ಭದ್ರತೆ ಒದಗಿಸುವ ಉದ್ದೇಶದಿಂದ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿಯ ಮೂಲಕ ಅಂಬೇಡ್ಕರ ಕಾರ್ಮಿಕ ಸಹಾಯ ಹಸ್ತ ಯೋಜನೆಯನ್ನು ಅನುಷ್ಠಾನಗೊಳಿಸುತ್ತಿದೆ.

ಅಸಂಘಟಿತ ಕಾರ್ಮಿಕರ ನೋಂದಣಿ ಮತ್ತು ಸ್ಮಾರ್ಟ ಕಾರ್ಡ ವಿತರಿಸಲಾಗುತ್ತಿದ್ದು, ಈ ಯೋಜನೆಯಡಿ 20 ಅಸಂಘಟಿತ ವರ್ಗಗಳಾದ ಹಮಾಲರು, ಚಿಂದಿ ಆಯುವವರು, ಗೃಹ ಕಾರ್ಮಿಕರು, ಟೈಲರ್, ಅಗಸ, ಅಕ್ಕಸಾಲಿಗ, ಕಮ್ಮಾರ, ಕುಂಬಾರ, ಕ್ಷೌರಿಕ, ಭಟ್ಟಿ ಕಾರ್ಮಿಕರು, ಸಿನಿ ಕಾರ್ಮಿಕರು, ನೇಕಾರರು, ಬೀದಿಬದಿ ವ್ಯಾಪಾರಿಗಳು, ಹೋಟೆಲ್ ಕಾರ್ಮಿಕರು, ಫೋಟೋಗ್ರಾಫರ್, ಸ್ವತಂತ್ರ ಲೇಖನ ಬರಹಗಾರರು, ಬೀಡಿ ಕಾರ್ಮಿಕರು, ಕಲ್ಯಾಣ ಮಂಟಪ, ಸಭಾಭವನ, ಟೆಂಟ್, ಪೆಂಡಾಲ ಕೆಲಸ ನಿರ್ವಹಿಸುವ ಎಲ್ಲ ಕಾರ್ಮಿಕರು ಅಸಂಘಟಿತ ವಿಕಲಚೇತನ ಕಾರ್ಮಿಕರು ಹಾಗೂ ಅಲೆಮಾರಿ ಪಂಗಡದ ವೃತ್ತಿಗಳಲ್ಲಿ ಕೆಲಸ ನಿರ್ವಹಿಸುತ್ತಿರುವ ಸುಮಾರು 30 ಲಕ್ಷ ಕಾರ್ಮಿಕರು ಒಳಗೊಂಡ ಕಾರ್ಮಿಕರಿಗೆ ಉಚಿತವಾಗಿ ನೋಂದಾಯಿಸಿ ಸ್ಮಾರ್ಟ ಕಾರ್ಡ ನೀಡಲಾಗುತ್ತದೆ. 18 ರಿಂದ 60 ವರ್ಷದೊಳಗಿರುವ, ಆದಾಯ ತೆರಿಗೆ ಪಾವತಿದಾರರಾಗಿರದ ಹಾಗೂ ಇಎಸ್ಐ, ಇಪಿಎಫ್ ಸೌಲಭ್ಯ ಹೊಂದಿದವರು ಈ ಸೌಲಭ್ಯ ಪಡೆದುಕೊಳ್ಳಬಹುದಾಗಿದೆ. ನೋಂದಣಿಗೆ ಪಾಸ್‌ಪೋರ್ಟ ಅಳತೆಯ ಭಾವಚಿತ್ರ, ವಯಸ್ಸಿನ ಪ್ರಮಾಣ ಪತ್ರ, ಆಧಾರ ಕಾರ್ಡ, ಪಡಿತರ ಚೀಟಿ ದಾಖಲೆಗಳೊಂದಿಗೆ ಮಂಡಳಿ ವೆಬ್‌ಸೈಟ್ ತಿತಿತಿ.ಇಣಾಶಿಭ.ಇಚಿಡಿಟಿಚಿಣಚಿಞಚಿ.ರಾತಿ.ಟಿ ನಲ್ಲಿ ಅರ್ಜಿ ಸಲ್ಲಿಸಬಹುದಾಗಿದೆ.

ಈ ಕಾರ್ಡ ಪಡೆದವರಿಗೆ 1 ಲಕ್ಷದವರೆಗಿನ ಅಪಘಾತ ಪರಿಹಾರ ಸೌಲಭ್ಯ ಹಾಗೂ ಸಹಜ ಮರಣ ಪರಿಹಾರ ಮತ್ತು ಅಂತ್ಯಕ್ರಿಯೆ ವೆಚ್ಚಕ್ಕಾಗಿ 10 ಸಾವಿರ ರೂ. ನೀಡಲಾಗುತ್ತದೆ. ಇದರ ಸದುಪಯೋಗವನ್ನು ಅರ್ಹ ಫಲಾನುಭವಿಗಳು ಪಡೆದುಕೊಳ್ಳುವಂತೆ ಜಿಲ್ಲಾ ಕಾರ್ಮಿಕ ಅಧಿಕಾರಿ ರಮೇಶ ಸುಂಬದ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮಹಾತ್ಮಗಾಂಧಿ ನರೇಗಾ ಯೋಜನೆಯಡಿ ಜಿಲ್ಲೆಯಲ್ಲಿ ಭರದಿಂದ ಸಾಗಿದ ಕೂಲಿಕೆಲಸ:ಡಾ.ಗಿರೀಶ ಬದೋಲೆ

ಮಲ್ಲಮ್ಮ ನುಡಿ ವಾರ್ತೆ

ಬೀದರ : ಏ.21: ಗ್ರಾಮೀಣ ಬಡಕುಟುಂಬಗಳಿಗೆವರದಾನದಂತಿರುವ ಮಹಾತ್ಮಗಾಂಧಿನರೆಗಾಯೋಜನೆಯಡಿ ಜಿಲ್ಲೆಯಲ್ಲಿ ಕೂಲಿಕಾರರಿಗೆ ಕೆಲಸ ನೀಡಲಾಗುತ್ತಿದ್ದು ಜಿಲ್ಲೆಯಾದ್ಯಂತ ಕೂಲಿ ಕೆಲಸ ಭರದಿಂದ ಸಾಗಿದೆ ಎಂದು ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕಅಧಿಕಾರಿಗಳಾದ ಡಾ.ಗಿರೀಶ ಬದೋಲೆ ತಿಳಿಸಿದ್ದಾರೆ.

ಏಪ್ರಿಲ್ ಮೊದಲವಾರದಲ್ಲಿ 2025 ನೇ ಸಾಲಿನ ಮನರೆಗಾ ಯೋಜನೆಯಡಿ ಅನುಮೋದಿಸಲ್ಪಟ್ಟ ಕ್ರಿಯಾಯೋಜನೆಗಳ ಕಾಮಗಾರಿಗಳನ್ನು ಪ್ರಾರಂಭಿಸಿದ್ದು, ಏಪ್ರಿಲ್ 19 ರಂದು ಇದ್ದಂತೆ ಜಿಲ್ಲೆಯ 185 ಗ್ರಾಮ ಪಂಚಾಯತಿಗಳಲ್ಲಿ 143 ಗ್ರಾಮ ಪಂಚಾಯತಿಗಳಲ್ಲಿ ಕೂಲಿ ಕೆಲಸ ಪ್ರಾರಂಭವಾಗಿದ್ದು, 24247 ಜನ ಕೂಲಿಕಾರರು ಕೆಲಸ ಮಾಡುತ್ತಿದ್ದಾರೆ. ಈ ತಿಂಗಳಾಂತ್ಯಕ್ಕೆ 50,000 ಜನ ಕೂಲಿಕಾರರಿಗೆ ಕೆಲಸ ನೀಡಲಾಗುತ್ತದೆ. ಮೇ ತಿಂಗಳಲ್ಲಿ ಒಂದು ಲಕ್ಷ ಜನ ಕೂಲಿಕಾರರಿಗೆ ಕೆಲಸ ನೀಡಲಾಗುವುದು.



ಮನರೆಗಾ ಯೋಜನೆಯಡಿ ಕೆಲಸ ನೀಡುವುದರಿಂದ ಗ್ರಾಮೀಣ ಪ್ರದೇಶದ ಪರಿಶಿಷ್ಟಜಾತಿ, ಪರಿಶಿಷ್ಟ ಪಂಗಡಗಳು, ಅತಿ ಸಣ್ಣ ರೈತರು ಮತ್ತು ಮಹಿಳೆಯರ ಬದುಕಿನ ಬವಣೆ ನೀಗಲು ಸಹಕಾರಿಯಾಗುತ್ತದೆಂದರು.

ಹೆಚ್ಚಿನ ಸಂಖ್ಯೆಯಲ್ಲಿ ಗ್ರಾಮೀಣ ಪ್ರದೇಶದ ಜನತೆ ಉದ್ಯೋಗಕ್ಕಾಗಿ ನಗರಪ್ರದೇಶಗಳಿಗೆ ವಲಸೆ ಹೋಗದೆ ಅವರವರ ಗ್ರಾಮಗಳಲ್ಲೇ ಉದ್ಯೋಗ ಖಾತ್ರಿ ಯೋಜನೆಯಡಿ ನೊಂದಾಯಿಸಿಕೊಂಡು ಕೆಲಸ ಮಾಡಲು ಅವರು ಮನವಿ ಮಾಡಿದ್ದಾರೆ. ಉದ್ಯೋಗ ಖಾತ್ರಿ ಯೋಜನೆಯಡಿ ಗಂಡು ಹೆಣ್ಣು ಎನ್ನುವ ಭೇದವಿಲ್ಲದೆ ಸಮಾನ ಕೂಲಿ ನೀಡುವುದಲ್ಲದೆ ಪ್ರಸಕ್ತ ಆರ್ಥಿಕ ವರ್ಷದಲ್ಲಿ ಕೂಲಿಯ ದರವೂ ಹೆಚ್ಚಿಗೆ ಆಗಿದ್ದು ಕೂಲಿಕಾರರಿಗೆ ಪ್ರತಿದಿನ 370 ರೂಪಾಯಿಗಳ ಕೂಲಿ ಸಿಗುತ್ತಿದ್ದು ಗ್ರಾಮೀಣಪ್ರದೇಶದ ದುಡಿಯುವ ವರ್ಗದ ಜನತೆ ಮನರೆಗಾ ಯೋಜನೆಯ ಪ್ರಯೋಜನ ಪಡೆಯುವಂತೆ ಅವರು ಮನವಿ ಮಾಡಿದ್ದಾರೆ.

# ರಸ್ತೆ ರಿಪೇರಿಗಾಗಿ ಕರಂಜಿ ಬಿ ಗ್ರಾಮಸ್ಥರಿಂದ ರಸ್ತೆ ತಡೆದು ಪ್ರತಿಭಟನೆ



ಮಲ್ಲಮ್ಮ ನುಡಿ ವಾರ್ತೆ ಔರಾದ: ಏ.21:ತಾಲ್ಲೂಕಿನ ಕರಂಜಿ ಬಿ. ಗ್ರಾಮದಲ್ಲಿ ಇಂದು ಸೋಮುವಾರ ಗ್ರಾಮಸ್ಥರ ವತಿಯಿಂದ ರಸ್ತೆಯನ್ನು ತಡೆದು ಪ್ರತಿಭಟನೆಯನ್ನು ಮಾಡಲಾಯಿತು, ಕರಂಜಿ ಗ್ರಾಮಕ್ಕೆ ಸುಮಾರು 10, 15, ವರ್ಷಗಳಿಂದ ರಸ್ತೆಯನ್ನು ರಿಪೇರಿ ಮಾಡದೆ ಜನರ ಜೀವನದ ಜೊತೆ ಸರಕಾರವು ಹಾಗೂ ಜನಪ್ರತಿನಿಧಿಗಳು ನಿರ್ಲಕ್ಷ ವಹಿಸುತ್ತಿದ್ದಾರೆ ಕೂಡಲೆ ಚಿಂತಾಕಿ ಗ್ರಾಮದ ವಸತಿ ನೀಲಯ ದಿಂದ ಸೋಪೂರ ಬಾರ್ಡರ ವರೆಗೆ ರಸ್ತೆಯನ್ನು ದುರಸ್ತಿ ಮಾಡಿ ಎಂದು ತಹಶೀಲ್ದಾರ ಮಹೇಶ ಪಾಟೀಲ್ ಇವರಿಗೆ ಸುಂದಾರನಾಜ ತಂದೆ ಲಕ್ಷ್ಮಣ ಮತ್ತು ಗ್ರಾಮಸ್ಥರು ವತಿಯಿಂದ ಮನವಿ ಪತ್ರ ಸಲ್ಲಿಸಲಾಯಿತು. ಔರಾದ(ಬಾ) ತಾಲೂಕಿನ ಚಿಂತಾಕಿ ದಿಂದ ಸೋಪುರ ವಾರ್ಡರ ರವರೆಗೆ ರಸ್ತೆಯು ಸಂಪೂರ್ಣ ಹಾಳಾಗಿರುತ್ತದೆ. ಇವರಿಂದ ದಿನ ನಿತ್ಯ ಅಪಘಾತಗಳು ಆಗುತ್ತಿವೆ. ಇದಕ್ಕೆ ಸಂಭಂದಿತ ಇಲಾಖೆಗಳಿಗೆ ಇಗಾಗಲೆ ಪತ್ರಗಳನ್ನು ನಾವು ಗ್ರಾಮಸ್ಥರು ಪತ್ರಗಳನ್ನು ನೀಡುತ್ತಾ ಬಂದಿವೆ.

ಈ ಸಮಸ್ಯೆವನ್ನು ಗಂಭೀರವಾಗಿ ಪರಿಗಣಿಸಿ ಚಿಂತಾಕಿ ಗ್ರಾಮದ ವಸತಿ ನೀಲಯ ದಿಂದ ಸೋಪುರ ದಾರ್ಡರ ರವರೆಗೆ ರಸ್ತೆಯನ್ನು ಮಾಡಿ ಕೊಡಬೇಕೆಂದು ತಮ್ಮಲ್ಲಿ ವಿನಂತಿ ಮಾಡುತ್ತೆವೆ ಎಂದು ಗ್ರಾಮಸ್ಥರು ತಿಳಿಸಿದರುಈ ಸಂದರ್ಭದಲ್ಲಿ ರಾಜಕುಮಾರ ನಾಯಕ, ಅಬ್ರಾಹಂ ತಂದೆ ಬಾಬು,ಅನೀಲ ತಂದೆ ಹಣಮಂತ,ಮಾದಪ್ಪಾ ತಂದೆ ಹಣಮಂತ, ಬಾಳಪ್ಪಾ ತಂದೆ ಮಷ್ಟಪ್ಪಾ,ಸಾಯಪ್ಪ ತಂದೆ ಮಲ್ಲಪ್ಪಾ,ಸ್ಯಾಮಿಯಲ್ ತಂದೆ ಅಡಪ್ಪಾ,ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು

# ಕ್ಷೇತ್ರಗಳ ಅಭಿವೃದ್ಧಿಯಾಗಬೇಕಾದರೆ ಜನಪ್ರತಿನಿಧಿಗಳ ಇಚ್ಛಾಶಕ್ತಿ ತುಂಬಾ ಮುಖ್ಯ : ಸಂಸದ ರಾಜಶೇಖರ್ ಹಿಟ್ನಾಳ್

ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಏ.21: ಕುಕನೂರ ಪಟ್ಟಣದ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ ಡಿಪೋ ಹತ್ತಿರ ಎನ್. ಎಚ್ (ಓ ) ಇಪಿಸಿ ಮೋಡ್ ನ ಅಡಿಯಲ್ಲಿ ಕರ್ನಾಟಕ ರಾಜ್ಯದ ರಾಷ್ಟ್ರೀಯ ಹೆದ್ದಾರಿ –367 (ಭಾನಾಪೂರ–ಗದ್ದನಕೇರಿ ಸೆಕ್ಷನ್) ರಲ್ಲಿ ಕುಕನೂರು, ಯಲಬುರ್ಗಾ ಹಾಗೂ ಗಜೇಂದ್ರಗಡ ಪಟ್ಟಣಗಳಿಗೆ ಬೈಪಾಸ್ ರಸ್ತೆ ನಿರ್ಮಾಣದ ಕಾಮಗಾರಿಯ ಭೂಮಿ ಪೂಜಾ ಕಾರ್ಯಕ್ರಮ ನೆರವೇರಿಸಿ ಮಾತನಾಡುತಾ ಕ್ಷೇತ್ರಗಳ ಅಭಿವೃದ್ದಿಯಾಗಬೇಕಾದರೇ ಜನಪ್ರತಿನಿಧಿಗಳ ಇಚ್ಛಾಶಕ್ತಿಯಿಂದ ಮಾತ್ರ ಸಾಧ್ಯ ಆ ಕಾರ್ಯ ಇಂದು ರಾಯರಡ್ಡಿಯವರು ಮಾಡುತ್ತಿದ್ದಾರೆ. ಯಲಬುರ್ಗಾ ಕ್ಷೇತ್ರ ರಾಜ್ಯದಲ್ಲಿಯೇ ಅಭಿವೃದ್ದಿಯಲ್ಲಿ ಮಂಚೂಣಿಯಲ್ಲಿದೆ ಎಂದು ಕೊಪ್ಪಳ ಸಂಸದ ರಾಜಶೇಖರ್ ಹಿಟ್ನಾಳ ಹೇಳಿದರು.




ಈ ವೇಳೆಯಲ್ಲಿ ಅಧ್ಯಕ್ಷತೆ ವಹಿಸಿದ ಯಲಬುರ್ಗಾ ವಿಧಾನಸಭಾ ಕ್ಷೇತ್ರದ ಶಾಸಕರು ಹಾಗೂ ಮುಖ್ಯಮಂತ್ರಿಗಳ ಆರ್ಥಿಕ ಸಲಹೆಗಾರ ಬಸವರಾಜ್ ರಾಯರಡ್ಡಿ ಮಾತನಾಡಿ ಸಿಂಗಟಾಲೂರ ಏತ ನೀರಾವರಿ ಮೂಲಕ ನಮ್ಮ ಭಾಗದ ತಳಕಲ್, ಬನ್ನಿಕೊಪ್ಪ, ಅಡವಿಹಳ್ಳಿ ಕೆರೆಗಳನ್ನು ನೀರಾವರಿ ಮಾಡಲಾಗುತ್ತದೆ ಎಂದರು.

ಸಾರ್ವಜನಿಕರು ಕೆರೆಗಳ ನಿರ್ಮಾಣಕ್ಕೆ ಭೂಮಿಯನ್ನು ನೀಡಿದರೇ ಮುಂದಿನ ದಿನಗಳಲ್ಲಿ ಇನ್ನೂ ಹೆಚ್ಚು ಕೆರೆಗಳನ್ನು ನಿರ್ಮಾಣ ಮಾಡುವ ಮೂಲಕ ಅಂತರ್ಜಲ ಹೆಚ್ಚಳವಾಗುತ್ತದೆ ಇದರಿಂದ ರೈತಾಪಿ ವರ್ಗಕ್ಕೆ ಅನೂಕೂಲವಾಗಲಿದೆ ಎಂದರು.

ಈ ರಾಷ್ಟ್ರೀಯ ಹೆದ್ದಾರಿ ನಿರ್ಮಾಣವಾದಲ್ಲಿ ವಾಣಿಜ್ಯ, ವ್ಯಾಪಾರಕ್ಕಾಗಿ ತಳಕಲ್ ನಿಂದ ಹುಬ್ಬಳ್ಳಿ, ಮೂಲಕ ಗೋವಾ ಹಾಗೂ ತಳಕಲ್ ನಿಂದ ಕುಕನೂರು, ಕುಷ್ಟಗಿ ಮಾರ್ಗವಾಗಿ ಬಾದಾಮಿಯಿಂದ ನಿಪ್ಪಾಣಿ ಮೂಲಕ ಸೊಲ್ಲಪೂರ ಮಾರ್ಗವಾಗಿ ಮುಂಬೈಗೆ ಹೋಗಲು ಅನೂಕೂಲವಾಗುತ್ತದೆ. ಈ ಕಾಮಗಾರಿ ಎರಡು ವರ್ಷಗಳಲ್ಲಿ ಸಂಪೂರ್ಣಗೊಳ್ಳಲಿದೆ ಎಂದರು.

ಈ ರಾಷ್ಟ್ರೀಯ ಹೆದ್ದಾರಿಯು ಕುಕನೂರನಲ್ಲಿ 6.5 ಕಿ. ಲೋ ಮೀಟರ್, ಯಲಬುರ್ಗಾ 5.5 ಕಿ. ಲೋ ಮೀಟರ್, ಗಜೇಂದ್ರಗಡ 7. ಕಿ. ಲೋ ಉದ್ದದ

ಒಟ್ಟು ಮೂರು ಬೈಪಾಸ್ ರಸ್ತೆಯ 169 ಕೋಟಿಗೆ ಟೆಂಡರ್ ಆಗಿದೆ, ಭೂಮಿ ಖರೀದಿಗೆ ರಾಜ್ಯ ಸರ್ಕಾರವು 48.57 ಲಕ್ಷ ಕೇಂದ್ರ ಸರ್ಕಾರ 48.57 ಲಕ್ಷ ರೂಪಾಯಿಗಳ ಹಣ ನೀಡಲಿದೆ ಎಂದು ಹೇಳಿದರು. ಈ ಸಂದರ್ಭದಲ್ಲಿ ಕೊಪ್ಪಳ ಕ್ಷೇತ್ರದ ಶಾಸಕ ರಾಘವೇಂದ್ರ ಇಟ್ನಾಳ್, ಪಪಂ ಉಪಾಧ್ಯಕ್ಷ ಪ್ರಶಾಂತ ಆರಬೆರಳಿನ್, ಪಟ್ಟಣ ಪಂಚಾಯತ್ ಮುಖ್ಯ ಅಧಿಕಾರಿ ರವೀಂದ್ರ ಬಾಗಲಕೋಟ್, ಮುಖಂಡರಾದ ನಾರಾಯಣಪ್ಪ ಹರಪನಹಳ್ಳಿ, ಮಂಜುನಾಥ ಕಡೇಮನಿ, ವೆಂಕಣ್ಣ ಯರಾಶಿ, ಹನುಮಂತಗೌಡ ಚಂಡೂರ, ರೈಮಾನ್ ಸಾಬ್ ಮಕಪ್ಪನವರ್, ಸಿದ್ದಯ್ಯ ಕಳ್ಳಿಮಠ, ಸಿರಾಜ್ ಕರಮುಡಿ, ರಾಮಣ್ಣ ಬಂಕದಮನಿ, ನೂರುದ್ದಿನ್ ಸಾಬ ಗುಡಿಹಿಂದಲ್, ಗಗನ ನೋಟಗಾರ, ಯಮನೂರಪ್ಪ ಕಟ್ಟಿಮನಿ, ಡಾ.ಶಿವನಗೌಡ ದಾನರಡ್ಡಿ, ಸಂಗಮೇಶ ಗುತ್ತಿ, ಮಂಜುನಾಥ ಯಡಿಯಾಪೂರ, ಮಹಮ್ಮದ್ ರಫಿ ಮಂಡಲಗಿರಿ, ಹಾಗೂ ಇತರರು ಇದ್ದರು.

# ಸಕಲ ಸರ್ಕಾರಿ ಗೌರವದೊಂದಿಗೆ ಮಾಜಿ ಡಿಜಿಪಿ ಓಂ ಪ್ರಕಾಶ್ ಅಂತ್ಯಕ್ರಿಯೆ

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು:ಏ.21: ಪತ್ನಿ ಮತ್ತು ಮಗಳಿಂದ ಹತ್ಯೆಗೀಡಾದ ರಾಜ್ಯದ ಮಾಜಿ ಪೊಲೀಸ್ ಮಹಾನಿರ್ದೇಶಕ ಓಂ ಪ್ರಕಾಶ್ ಅವರ ಅಂತ್ಯಕ್ರಿಯೆ ಸೋಮವಾರ ಬೆಂಗಳೂರಿನಲ್ಲಿ ಸಕಲ ಸರ್ಕಾರಿ ಗೌರವಗಳೊಂದಿಗೆ ನಡೆಯಿತು.

ಇಂದು ಸಂಜೆ ವಿಲ್ಸನ್ ಗಾರ್ಡನ್ ಸ್ಮಶಾನದಲ್ಲಿ ಅಂತ್ಯಕ್ರಿಯೆ ನೆರವೇರಿಸಲಾಯಿತು. ಅವರ ಮಗ ಕಾರ್ತಿಕೇಶ್ ಅವರು ಅಂತಿಮ ವಿಧಿವಿಧಾನಗಳನ್ನು ನೆರವೇರಿಸಿದರು.

ಪೊಲೀಸ್ ಪಡೆಯಿಂದ ಮೂರು ಸುತ್ತು ಗಾಳಿಯಲ್ಲಿ ಗುಂಡು ಹಾರಿಸಿ ಓಂ ಪ್ರಕಾಶ್ ಪಾರ್ಥಿವ ಶರೀರಕ್ಕೆ ಅಂತಿಮ ನಮನ ಸಲ್ಲಿಸಲಾಯಿತು. ಬಳಿಕ ಪುತ್ರ ಕಾರ್ತಿಕೇಶ್ ಅಂತಿಮ ವಿಧಿ–ವಿಧಾನ ನೆರವೇರಿಸಿ ಪಾರ್ಥಿವ ಶರೀರಕ್ಕೆ ಅಗ್ನಿಸ್ಪರ್ಶ ಮಾಡಿದರು.



ಮಾಜಿ ಡಿಜಿಪಿಯ ಸಂಬಂಧಿಕರು, ಸ್ನೇಹಿತರು ಹಾಗೂ ಹಲವು ಗಣ್ಯರು ಅಂತಿಮ ನಮನ ಸಲ್ಲಿಸಿದರು.

ಅಂತ್ಯಕ್ರಿಯೆಯನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಕಾರ್ತಿಕೇಶ್, "ನಿನ್ನೆಯ ಘಟನೆಯ ನಂತರ, ನಾನು ದೂರು ನೀಡಿದ್ದೇನೆ. ಪೊಲೀಸರು ತಮ್ಮ ಕೆಲಸ ಮಾಡುತ್ತಿದ್ದಾರೆ ಮತ್ತು ನನಗೆ ಅವರ ಮೇಲೆ ಸಂಪೂರ್ಣ ನಂಬಿಕೆ ಇದೆ. ತನಿಖೆಯಿಂದ ಎಲ್ಲವೂ ಬಹಿರಂಗಗೊಳ್ಳುವುದರಿಂದ ನಾನು ಹೆಚ್ಚಿನ ಪ್ರತಿಕ್ರಿಯೆ ನೀಡಲು ಬಯಸುವುದಿಲ್ಲ" ಎಂದರು.

68 ವರ್ಷದ ನಿವೃತ್ತ ಐಪಿಎಸ್ ಅಧಿಕಾರಿಯನ್ನು ಅವರ ಪತ್ನಿ ಪಲ್ಲವಿ ಮತ್ತು ಮಗಳು ಕೃತಿ ಚಾಕುವಿನಿಂದ ಇರಿದು ಕೊಲೆ ಮಾಡಿದ್ದಾರೆ ಎಂದು ದೂರಲಾಗಿದೆ.

ಕಾರ್ತಿಕೇಶ್ ಅವರ ದೂರಿನ ಆಧಾರದ ಮೇಲೆ ಅವರ ವಿರುದ್ಧ ಪ್ರಕರಣ ದಾಖಲಿಸಲಾಗಿದೆ.ಪೊಲೀಸರು ಅವರನ್ನು ಬಂಧಿಸಿ ತನಿಖೆ ಕೈಗೊಂಡಿದ್ದಾರೆ.

ಬಿಹಾರದ ಚಂಪಾರಣ್ ಮೂಲದ ಓಂ ಪ್ರಕಾಶ್ ಅವರು ಭೂವಿಜ್ಞಾನದಲ್ಲಿ ಸ್ನಾತಕೋತ್ತರ ಪದವಿ ಪಡೆದಿದ್ದು, ಮಾರ್ಚ್ 1, 2015 ರಂದು ಕರ್ನಾಟಕ ಪೊಲೀಸ್ ಮಹಾನಿರ್ದೇಶಕರಾಗಿ ನೇಮಕಗೊಂಡಿದ್ದರು.

# ದ್ವಿತೀಯ ಪಿಯುಸಿ ಪರೀಕ್ಷೆ-2ರ ಸಕಲ ಸಿದ್ಧತೆ ಮಾಡಿಕೊಳ್ಳಲು ಹಾಗೂ ಶೈಕ್ಷಣಿಕ ಗುಣಮಟ್ಟ ಸುಧಾರಣೆಗೆ ಗಮನ ನೀಡಲು ಸೂಚನೆ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ:ಏ:21: ಇದೇ ಏಪ್ರಿಲ್ 24 ರಿಂದ ಮೇ 8 ರವರೆಗೆ ನಡೆಯಲಿರುವ ದ್ವಿತೀಯ ಪಿಯುಸಿ ಪರೀಕ್ಷೆ–2 ನ್ನು ನಕಲುಮುಕ್ತ ಹಾಗೂ ವ್ಯವಸ್ಥಿತವಾಗಿ ನಡೆಸಲು ಸಕಲ ಸಿದ್ಧತೆಗಳನ್ನು ಮಾಡಿಕೊಳ್ಳುವಂತೆ ಜಿಲ್ಲಾಧಿಕಾರಿ ಡಾ ಸುಶೀಲ.ಬಿ ಅವರು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಇಂದು ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆ–2 ಗೆ ಸಂಬಂಧಿಸಿದಂತೆ ನಡೆದ ಪೂರ್ವಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಈ ಪರೀಕ್ಷೆ ಸಂದರ್ಭದಲ್ಲಿ ಯಾವುದೇ ರೀತಿಯ ನಕಲುದಂತಹ ಅಕ್ರಮ ಚಟುವಟಿಕೆಗಳು ನಡೆಯದಂತೆ ಎಚ್ಚರಿಕೆ ವಹಿಸಬೇಕು. ಪರೀಕ್ಷೆಗಳು ವ್ಯವಸ್ಥಿತವಾಗಿ ನಡೆಸಲು ಸಂಬಂಧಿಸಿದ ಅಧಿಕಾರಿಗಳು ಸಕಲ ಕ್ರಮಗಳನ್ನು ಅಚ್ಚುಕಟ್ಟಾಗಿ ಕೈಗೊಳ್ಳುವಂತೆ ಸೂಚನೆ ನೀಡಿದರು.

ಯಾದಗಿರಿ ಜಿಲ್ಲೆಯಲ್ಲಿ ಈ ಪರೀಕ್ಷೆಗಾಗಿ ಒಟ್ಟು 09 ಪರೀಕ್ಷಾ ಕೇಂದ್ರಗಳನ್ನು ಸ್ಥಾಪಿಸಲಾಗುತ್ತಿದ್ದು, ಈ ಪರೀಕ್ಷೆ ಕೇಂದ್ರ ಗಳಿಗೆ ಒಟ್ಟು 99 ಪದವಿ ಪೂರ್ವ ಕಾಲೇಜುಗಳಲ್ಲಿಯ ದ್ವಿತೀಯ ಪಿಯುಸಿ ವಿದ್ಯಾರ್ಥಿಗಳನ್ನು ಜೋಡಿಸಲಾಗಿದೆ.

ಜಿಲ್ಲೆಯಲ್ಲಿ ಒಟ್ಟು 6159 ವಿದ್ಯಾರ್ಥಿಗಳು ಪರೀಕ್ಷೆ ಬರೆಯಲಿದ್ದಾರೆ. ಅರ್ಹರಾದ ಎಲ್ಲ ವಿದ್ಯಾರ್ಥಿಗಳ ಪ್ರವೇಶ ಪತ್ರ (Admission Ticket) ಗಳನ್ನು ಆನ್ಲೈನ್



ಮೂಲಕ ಎಲ್ಲ ಕಾಲೇಜುಗಳಿಗೆ ವಿತರಿಸಲಾಗಿದೆ. ಪರೀಕ್ಷೆ ಕೇಂದ್ರ ದ ಸಂಪೂರ್ಣ ಜವಾಬ್ದಾರಿಯು ಮುಖ್ಯ ಅಧೀಕ್ಷಕರದಾಗಿದ್ದು, ಈಗಾಗಲೇ ನೇಮಿಸಿದ ಅಧೀಕ್ಷಕರು ನಿಯಮಾವಳಿಗಳಂತೆ ಪರೀಕ್ಷೆ ನಡೆಸಲು ಸಕಲ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಸೂಚಿಸಿದರು.

ಆಯಾ ಪರೀಕ್ಷಾ ಕೇಂದ್ರಗಳಲ್ಲಿ ಆಸನ, ಇತ್ಯಾದಿ ವ್ಯವಸ್ಥೆಗಳನ್ನು ಅಚ್ಚುಕಟ್ಟಾಗಿ ಮಾಡಿಕೊಳ್ಳಬೇಕು. ಅಭ್ಯರ್ಥಿಗಳಿಗೆ ಆಸನ ವ್ಯವಸ್ಥೆಯನ್ನು ಕೊಠಡಿಯಿಂದ ಹೊರಗೆ ಅಥವಾ ಕಾರಿಡಾರ್ ನಲ್ಲಿ ಅಥವಾ ನೆಲದ ಮೇಲೆ ಕುಳಿತು ಪರೀಕ್ಷೆಗಳನ್ನು ಬರೆಯಿಸ ಕೂಡದು ಎಂದು ಅವರು ಸೂಚಿಸಿದರು.

ಪರೀಕ್ಷೆ ಸಂದರ್ಭದಲ್ಲಿ ಪರೀಕ್ಷಾ ಕೇಂದ್ರದ ಸುತ್ತಮುತ್ತಲು 200 ಮೀ.ಪ್ರದೇಶದಲ್ಲಿ ನಿಷೇಧಾಜ್ಞೆ ಇರಲಿದೆ. ಪರೀಕ್ಷೆ ಕಾರ್ಯಗಳಿಗೆ ನೇಮಕಗೊಂಡ ಅಧಿಕಾರಿಗಳು ಮತ್ತು ಸಿಬ್ಬಂದಿಗಳು ಮಾತ್ರ ಕೇಂದ್ರದಲ್ಲಿ ಉಪಸ್ಥಿತರಿರಬೇಕು. ಕಡ್ಡಾಯವಾಗಿ ಗುರುತಿನ ಚೀಟಿ ಧರಿಸಬೇಕು. ಅನ್ಯ ವ್ಯಕ್ತಿಗಳು ಕೇಂದ್ರದಲ್ಲಿ ಕಂಡು ಬಂದಲ್ಲಿ ಮುಖ್ಯ ಅಧೀಕ್ಷಕರನ್ನು ಹೊಣೆಗಾರರನ್ನಾಗಿ ಮಾಡಲಾಗುತ್ತದೆ ಎಂದು ಅವರು ಹೇಳಿದರು.

ಈ ಪರೀಕ್ಷೆ ಸಂದರ್ಭದಲ್ಲಿ ಪರೀಕ್ಷಾರ್ಥಿಗಳು ಎಲೆಕ್ಟ್ರಾನಿಕ್ ವಸ್ತುಗಳು ಮೋಬೈಲ್, ಪೆನ್ ಡ್ರೈವ್ ಗಳು, ಇಯರ್ ಫೋನ್ಗಳು, ಮೈಕ್ರೋಫೋನ್, ಬ್ಲೂಟೂಥ್ ಸಾಧನಗಳು, ಕೈಗಡಿಯಾರ ಗಳನ್ನು ಉಪಯೋಗಿಸುವುದನ್ನು ನಿಷೇಧಿಸಲಾಗಿದೆ.

ಪರೀಕ್ಷೆ ಕೇಂದ್ರಗಳ ಸುತ್ತಲೂ ಸೂಕ್ತ ಪೋಲಿಸ್ ಬಂದೋಬಸ್ತ್ ಮಾಡಬೇಕು. ಕೊಠಡಿ ಮೇಲ್ವಿಚಾರಣೆ ನೋಡಿಕೊಳ್ಳಬೇಕು. ಕೇಂದ್ರದ ಎಲ್ಲ ಕೊಠಡಿಗಳಲ್ಲಿ ಸಿಸಿಟಿವಿ ವ್ಯವಸ್ಥೆ, ವ್ಯತ್ಯಯವಿಲ್ಲದ ನಿರಂತರ ವಿದ್ಯುತ್ ವ್ಯವಸ್ಥೆ ಹಾಗೂ ವೆಬ್ ಕಾಸ್ಟಿಂಗ್ ಅಳವಡಿಸಲು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

ಎಲ್ಲಾ ಕೇಂದ್ರಗಳ ಸಿಸಿಟಿವಿ ವೀಕ್ಷಿಸಲು ವೆಬ್ ಕಾಸ್ಟಿಂಗ ವ್ಯವಸ್ಥೆಯನ್ನು ಯಾದಗಿರಿ ಜಿಲ್ಲಾ ಪಂಚಾಯತ್ ನ ವಿ. ಸಿ ಹಾಲ್ನಲ್ಲಿ ಕೈಗೊಂಡು, ನೇಮಿಸಿದ ವೀಕ್ಷಕರು ಪರೀಕ್ಷಾ ದಿನದಂದು ಸಮರ್ಪಕವಾಗಿ ಕಾರ್ಯನಿರ್ವಹಿಸಬೇಕು. ಜೆಸ್ಕಾಂ ಅಧಿಕಾರಿಗಳು ವಿದ್ಯುತ್ ವ್ಯತ್ಯಯವಾಗದಂತೆ ನೋಡಿಕೊಳ್ಳಬೇಕು.

ಪರೀಕ್ಷೆ ಕೇಂದ್ರಗಳ ಮುಖ್ಯ ಅಧೀಕ್ಷಕರು, ಸಹ ಮುಖ್ಯ ಅಧೀಕ್ಷಕರು , ವಿಶೇಷ ಜಾಗೃತ ದಳದ ಸದಸ್ಯರು ಹಾಗೂ ಇತರೆ ಪರೀಕ್ಷಾ ಸಿಬ್ಬಂದಿಗಳು ಪರೀಕ್ಷೆಯ ಸ್ಥಾಯಿ ಸೂಚನೆಗಳಂತೆ ಕಾರ್ಯನಿರ್ವಹಿಸಬೇಕು.

ಪರೀಕ್ಷಾ ಕೇಂದ್ರಗಳಲ್ಲಿ ವಿದ್ಯಾರ್ಥಿಗಳಾಗಲಿ, ಸಿಬ್ಬಂದಿಗಳಾಗಲಿ ಮೊಬೈಲ್ ಫೋನುಗಳನ್ನು ಬಳಸುವುದನ್ನು ನಿಷೇಧಿಸಲಾಗಿದೆ. ಪರೀಕ್ಷಾ ಕೊಠಡಿಗಳ ಹೊರಗೆ ಅಲ್ಪ ದೂರದಲ್ಲಿ ಕುಡಿಯುವ ನೀರಿನ ವ್ಯವಸ್ಥೆ ಇರಬೇಕು. ಗೌಪ್ಯ ಸಾಮಗ್ರಿಗಳನ್ನು ನಿಯಮಾವಳಿಗಳಂತೆ ನಿರ್ವಹಣೆ ಮಾಡಬೇಕು.

ಪರೀಕ್ಷೆ ವೇಳಾಪಟ್ಟಿಯಂತೆ ಗೌಪ್ಯ ಸಾಮಗ್ರಿಗಳನ್ನು ಪರೀಕ್ಷಾ ಕೇಂದ್ರಗಳಲ್ಲಿ ತಲುಪಿಸಲು ವಿಶೇಷ ಪ್ರಶ್ನೆ ಪತ್ರಿಕೆ ಮಾರ್ಗಾ ಧಿಕಾರಿಗಳ ತಂಡವನ್ನು ರಚಿಸಿ ಮಾನ್ಯ ಜಿಲ್ಲಾಧಿಕಾರಿಗಳು ನೇಮಿಸಿದ್ದಾರೆ.

ಪರೀಕ್ಷೆ ಕೇಂದ್ರಗಳಿಗೆ ವಾಟರ್ ಬಾಯ್ ನೇಮಕ ರದ್ದುಗೊಳಿಸಿದೆ. ಸುರಕ್ಷತೆಗಾಗಿ ಸೂಕ್ತ ಪೊಲೀಸ್ ಬಂದೋಬಸ್ತ್ , ವಿಶೇಷವಾಗಿ ಸುರಪುರ್ ನಗರದ ಎಲ್ಲಾ ಪರೀಕ್ಷಾ ಕೇಂದ್ರಗಳ ಸುತ್ತಲೂ ಹೆಚ್ಚುವರಿ ಪೊಲೀಸ್ ಸಿಬ್ಬಂದಿಗಳನ್ನು ನಿಯೋಜಿಸಲು ಸಂಬಂಧಿಸಿದ ಅಧಿಕಾರಿಗಳಿಗೆ ಕೋರಲಾಗಿದೆ ಎಂದು ಅವರು ತಿಳಿಸಿದರು.

ಕೊಠಡಿ ಮೇಲ್ವಿಚಾರಕರನ್ನು ಕಡ್ಡಾಯವಾಗಿ ಅನುದಾನಿತ, ಸರ್ಕಾರಿ ಪದವಿ ಪೂರ್ವ ಕಾಲೇಜುಗಳ, ಪ್ರೌಢಶಾಲಾ ಶಿಕ್ಷಕರು, ಉಪನ್ಯಾಸಕರನ್ನು ನೇಮಿಸಿಕೊಳ್ಳಬೇಕು. ಪರೀಕ್ಷಾ ಕಾರ್ಯಗಳಿಗೆ ಅಧಿಕಾರಿ ಮತ್ತು ಸಿಬ್ಬಂದಿಗಳ ಕರ್ತವ್ಯಕ್ಕೆ ಗೈರು ಹಾಜರಿಯನ್ನು ಗಂಭೀರವಾಗಿ ಪರಿಗಣಿಸಿ ಶಿಸ್ತುಕ್ರಮ ಕೈಗೊಳ್ಳಲಾಗುತ್ತದೆ ಎಂದು ಅವರು ತಿಳಿಸಿದರು.

ಪರೀಕ್ಷಾ ಫಲಿತಾಂಶ ಸುಧಾರಣೆಗೆ ವಿಶೇಷ ಗಮನ ನೀಡಿ– ಈ ಬಾರಿಯ ಪಿಯುಸಿ ವಾರ್ಷಿಕ ಪರೀಕ್ಷೆ –1ರ ಫಲಿತಾಂಶ ತೃಪ್ತಿ ತಂದಿಲ್ಲ. ಆದ್ದರಿಂದ ಮುಂದಿನ ಶೈಕ್ಷಣಿಕ ವರ್ಷದಲ್ಲಿ ಮಕ್ಕಳನ್ನು ವಿಶೇಷ ರೀತಿಯಲ್ಲಿ ತರಬೇತುಗೊಳಿಸಿ. ನಿರಂತರ ಪರಿಶೀಲನೆ, ಕಡ್ಡಾಯ ಹಾಜರಾತಿ ಹಾಗೂ ಮೂಲಸೌಕರ್ಯಗಳ ಸದ್ಬಳಕೆಯೊಂದಿಗೆ ವಿದ್ಯಾರ್ಥಿಗಳಲ್ಲಿನ ಓದಿನ ಹವ್ಯಾಸ ಬೆಳೆಸಿ. ಪ್ರತಿ ತಿಂಗಳು ಯೋಜನಾಬದ್ಧವಾಗಿ ಮಕ್ಕಳ ಶೈಕ್ಷಣಿಕ ಗುಣಮಟ್ಟ ಸುಧಾರಣೆಗೆ ಒತ್ತುಕೊಡಿ. ಬೋಧನಾ ವ್ಯವಸ್ಥೆ ಸುಧಾರಿಸಿಕೊಂಡು, ಪಾಠ ಸರಿಯಾಗಿ ಮಾಡಿಸುವಂತೆ ನೋಡಿಕೊಳ್ಳಬೇಕು. ಪಾಲಕರನ್ನೂ ಮನವರಿಕೆ ಮಾಡಲು ಅವರು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕ (ಪದವಿಪೂರ್ವ) ಚೆನ್ನಬಸಪ್ಪ ಕುಳಿಗೇರಿ ಸ್ವಾಗತಿಸಿ ಪರೀಕ್ಷೆ ಕುರಿತು ವಿವರಿಸಿದರು. ಶಿಕ್ಷಣ ಇಲಾಖೆ ಅಧಿಕಾರಿಗಳು, ಪ್ರಾಂಶುಪಾಲರು ಉಪಸ್ಥಿತರಿದ್ದರು.

# ಬಾವಿಯಲ್ಲಿ ಈಜಲು ಹೋದ ಬಾಲಕರಿಬ್ಬರ ದುರ್ಮರಣ

ಮಲ್ಲಮ್ಮ ನುಡಿ ವಾರ್ತೆ

ಹುಲಸೂರು,ಏ.21: ಗೆಳೆಯರೊಂದಿಗೆ ಬಾವಿಯಲ್ಲಿ ಈಜಲು ಹೋಗಿದ್ದ ಇಬ್ಬರು ಬಾಲಕರು ನೀರಿನಲ್ಲಿ ಮುಳುಗಿ ಸಾವನ್ನಪ್ಪಿರುವ ಘಟನೆ ತಾಲ್ಲೂಕಿನ ಮುಚಳಂಬ ಗ್ರಾಮದಲ್ಲಿ ಭಾನುವಾರ ಮಧ್ಯಾಹ್ನ ಸಂಭವಿಸಿದೆ. ಮೃತರನ್ನು ಮುಚಳಂಬ ಗ್ರಾಮದ ಅವಿನಾಶ್ ಶರಣಪ್ಪ ಮಚಕೂರೆ (16) ಹಾಗೂ ಭಾಲ್ಕಿ ತಾಲ್ಲೂಕಿನ ಕೋಟಗೇರಾ ಗ್ರಾಮದ ಭಾಗೇಶ್ ಕಮಲಾಕರ್ ಮಾನೆ (16) ಎನ್ನಲಾಗಿದೆ.

ಐವರು ಗೆಳೆಯರು ಗ್ರಾಮ ಸಮೀಪದ ಬಾವಿಯೊಂದರಲ್ಲಿ ಈಜಲು ಹೋಗಿದ್ದರು. ಈಜಲು ಬಾರದ ಓರ್ವ ಬಾಲಕ ನೀರಿಗೆ ಇಳಿದಿದ್ದಾನೆ. ಈಜು ಬಾರದಕ್ಕೆ ಬಾಲಕ ಮುಳುಗುತ್ತಿರುವುದನ್ನು





ಕಂಡು ಆತನನ್ನು ರಕ್ಷಿಸಲು ಇನ್ನೊಬ್ಬ ಬಾಲಕ ಬಾವಿಗೆ ಜಿಗಿದಿದ್ದಾನೆ. ಈ ವೇಳೆ ಇಬ್ಬರು ಬಾಲಕರು ನೀರಿನಲ್ಲಿ ಮುಳುಗಿ ಕೊನೆಯುಸಿರೆಳೆದಿದ್ದಾರೆ ಎಂದು ತಿಳಿದುಬಂದಿದೆ.

ವಿಷಯ ತಿಳಿದು ಬಸವಕಲ್ಯಾಣ ಗ್ರಾಮೀಣ ಠಾಣೆಯ ಪಿಎಸ್ಐ ನಾಗೇಂದ್ರ, ಮಂಠಾಳ್ ಠಾಣೆಯ ಸಿಪಿಐ ಕೃಷ್ಣಕುಮಾರ್ ಪಾಟೀಲ್ ಅವರ ನೇತೃತ್ವದಲ್ಲಿ ಪೊಲೀಸ್ ಸಿಬ್ಬಂದಿ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸಿದರು. ಪೊಲೀಸರು, ಅಗ್ನಿಶಾಮಕ ಸಿಬ್ಬಂದಿ ಹಾಗೂ ಗ್ರಾಮಸ್ಥರ ನೆರವಿನಿಂದ ಮೃತದೇಹ ಹೊರತೆಗೆದು ಮರಣೋತ್ತರ ಪರೀ–ಕ್ಷೆಗೆ ಕಳಿಸಿದ್ದಾರೆ. ಬಸವಕಲ್ಯಾಣ ಗ್ರಾಮೀಣ ಪೊಲೀಸ್ ಠಾಣೆಯಯಲ್ಲಿ ಪ್ರಕರಣ ದಾಖಲಾಗಿದ್ದು, ತನಿಖೆ ಮುಂದುವರೆದಿದೆ.


**ಪುರಸಭೆ ಕಾರ್ಯಾಲಯ ಆಳಂದ, ಜಿ: ಕಲಬುರಗಿ**

E-mail: ka.aland.tmc@gmail.com Website: www.alandtown.mrc.gov.in, Ph. : 08477-203440

NO:TMC-Alnd/ /SFC /15th FC/2022-23 DATE: 11.04.2025

**:: ಅಲ್ಪಾವಧಿ ಟೆಂಡರ್ ಪ್ರಕಟಣೆ–(ಈ–ಪ್ರೊಕ್ಯುರಮೆಂಟ್ ಮುಖಾಂತರ) ::**

ಮುಖ್ಯಾಧಿಕಾರಿಗಳು ಪುರಸಭೆ ಆಳಂದ ಇವರಿಂದ ಎಸ್.ಎಫ್.ಸಿ ಕ್ಯಾಪಿಟಲ್ ಅಸೆಟ್ ಕ್ರಿಯಾ ಯೋಜನೆ ಹಾಗೂ 2022–23ನೇ ಸಾಲಿನ 15ನೇ ಹಣಕಾಸು ಆಯೋಗದ ಅನುದಾನದ & ಸ್ವಚ್ಛಭಾರತ ಮಿಷನ್ 1.0 ಯೋಜನೆ ಅಡಿಯಲ್ಲಿ (04) ವಿವಿಧ ಅಭಿವೃದ್ದಿ ಕಾಮಗಾರಿಗಳಿಗೆ ಕರ್ನಾಟಕ ಪಾರದರ್ಶಕ ನಿಯಮದಂತೆ (ಕೆ.ಟಿ.ಪಿ.ಪಿ–2000) ರನ್ವಯ Standared Bid Document ಟೆಂಡರ ಕರೆಯಲಾಗಿದ್ದು, ಲೋಕೊಪಯೊಗಿ ಇಲಾಖೆಯಲ್ಲಿ ನೊಂದಾಯಿತ ನವಿಕರಿಸಿದ ಅರ್ಹ ಆಸಕ್ತಿಯುಳ್ಳ ಗುತ್ತಿಗೆದಾರರು / ಉತ್ಪಾದಕರು / ಅಧಿಕೃತ ಸರಬರಾಜುದಾರರು ತಮ್ಮ ಮೂಲ ಪ್ರಮಾಣ ಪತ್ರದ ಪ್ರತಿ ಹಾಗೂ ಇತರೆ ಸೂಕ್ತ ದಾಖಲಾತಿಗಳೊಂದಿಗೆ https://eproc.karnataka.gov.in ಅನ್‌ಲೈನ್‌ನಲ್ಲಿ ಸಲ್ಲಿಸಲು ಕೊನೆಯ ದಿನಾಂಕ: **28.04.2025 ರ ಸಾಯಂಕಾಲ 17.00 ಗಂಟೆಯವರೆಗೆ.**

1) ಕಾಮಗಾರಿ/ ಸರಕು/ಸೇವೆಯ ವಿವರ: DMA/2024-25/IND4587, DMA/2025-26/BD/WORK_INDENT38293, DMA/2025-26/SS/WORK_INDENT38638, DMA/2025-26/EL/WORK_INDENT38424, 2) ಅನುದಾನದ ವಿವರ: ಎಸ್.ಎಫ್.ಸಿ ಕ್ಯಾಪಿಟಲ್ ಅಸೆಟ್ ಕ್ರಿಯಾ ಯೋಜನೆ ಹಾಗೂ 2022–23ನೇ ಸಾಲಿನ 15ನೇ ಹಣಕಾಸು ಆಯೋಗದ ಅನುದಾನ & ಸ್ವಚ್ಛಭಾರತ ಮಿಷನ್ 1.0 ಯೋಜನೆ, 3) ಕಾಮಗಾರಿ/ ಸರಕು/ಸೇವೆಯ ಅಂದಾಜು ಮೊತ್ತ: **ಕನಿಷ್ಠ ರೂ. 2.00 ಲಕ್ಷ ಗರಿಷ್ಠ ರೂ. 22.00 ಲಕ್ಷ,** 4) ಗುತ್ತಿಗೆದಾರರ ಅರ್ಹತೆ ವಿವರ: ನೋಂದಾಯಿತ ಅರ್ಹ ಗುತ್ತಿಗೆದಾರರು / ಸರಬರಾಜುದಾರರು, 5) ಟೆಂಡರ್ ಫಾರಂಗಾಗಿ ಆನ್–ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ: **28.04.2025 ರಂದು ಸಾ. 5.30 ಗಂಟೆ,** 7) ಟೆಂಡರ್ ಬಿಡ್ ತೆರೆಯುವ ದಿನಾಂಕ: **30.04.2025 ರಂದು ಬೆ. 11.00 ಗಂಟೆಗೆ,** 8) ಹೆಚ್ಚಿನ ವಿವರಗಳಿಗಾಗಿ ಸಂಪರ್ಕಿಸಬೇಕಾದ ವಿಳಾಸ, ಕಛೇರಿಯ ವಿಳಾಸ, ದೂರವಾಣಿ ಸಂ.: ಪುರಸಭೆ ಕಾರ್ಯಾಲಯ ಆಳಂದ ಜಿ: ಕಲಬುರಗಿ, 9) ಅಂತರ್ಜಾಲ ತಾಣದ ವಿಳಾಸ: www.alandtown.mrc.gov.in

**ಸಹಿ/– ಮುಖ್ಯಾಧಿಕಾರಿ**
**ಪುರಸಭೆ ಆಳಂದ**

ವಾ.ಸಾ.ಸಂ.ಇ/ಕಲಬುರಗಿ/52/ಕೆ.ಎಸ್.ಎಂ.ಸಿ.&ಎ/2025–26


# ಮದುವೆಗೆ ಒತ್ತಾಯಿಸಿದಕ್ಕೆ ಮಹಿಳೆ ಕೊಲೆಗೈದು ಸುಟ್ಟ ಆರೋಪಿ ಸೆರೆ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಏ.21:ಇದೇ ತಿಂಗಳ 5 ರಂದು ಕಿಣ್ಣಿಸಡಕ್ ಸೀಮಾಂತರದ ಹೊಲದಲ್ಲಿ ಮಹಿಳೆಯೊಬ್ಬರನ್ನು ಕೊಲೆ ಮಾಡಿ ಶವ ಸುಟ್ಟು ಹಾಕಿದ ಪ್ರಕರಣವನ್ನು ಭೇದಿಸಿ ಆರೋಪಿಯನ್ನು ಬಂಧಿಸುವಲ್ಲಿ ಕಮಲಾಪುರ ಠಾಣೆ ಪೊಲೀಸರು ಯಶಸ್ವಿಯಾಗಿದ್ದಾರೆ ಎಂದು ಎಸ್‌ಪಿ ಅಡ್ಡೂರು ಶ್ರೀನಿವಾಸಲು ತಿಳಿಸಿದರು.

ನಗರದ ಪೊಲೀಸ ಭವನದಲ್ಲಿಂದು ಸುದ್ದಿಗೋಷ್ಠಿಯುನ್ನುದ್ದೇಶಿಸಿ ಮಾತನಾಡಿದ ಅವರು, ಮಹಿಳೆ ಕೊಲೆ ಮಾಡಿ ಶವ ಸುಟ್ಟು ಹಾಕಿದ ಪ್ರಕರಣಕ್ಕೆ ಸಂಬಂಧಿಸಿದಂತೆ ಕಾಳಗಿ ತಾಲ್ಲೂಕಿನ ಹೆಬ್ಬಾಳ ಗ್ರಾಮದ ಶಿವು ಅಲಿಯಾಸ್ ಶಿವಾನಂದ ತಂದೆ ಬಸವರಾಜ ರಾಜಾಪೂರ (27) ಎಂಬಾತನನ್ನು ಬಂಧಿಸಲಾಗಿದೆ ಎಂದು ತಿಳಿಸಿದರು.

ಕಿಣ್ಣಿ ಸಡಕ್ ಸೀಮಾಂತರದ ಹೊಲದಲ್ಲಿ ಮಹಿಳೆಯೊಬ್ಬರನ್ನು ಕೊಲೆ ಮಾಡಿ ಸಾಕ್ಷಿನಾಶ ಮಾಡುವ ಉದ್ದೇಶದಿಂದ ಶವ ಸುಟ್ಟುಹಾಕಲಾಗಿದೆ ಎಂದು ನೀಲಕಂಠ ಪಾಂಚಾಳ ಎಂಬುವವರು ಕಮಲಾಪುರ ಪೊಲೀಸ್ ಠಾಣೆಯಲ್ಲಿ ದೂರು ಸಲ್ಲಿಸಿದ್ದರು.

ಈ ದೂರಿನ ಅನ್ವಯ ಹೆಚ್ಚುವರಿ ಎಸ್‌ಪಿ ಮಹೇಶ ಮೇಘಣ್ಣನವರ್, ಗ್ರಾಮೀಣ ಉಪ ವಿಭಾಗದ ಉಪ ಅಧೀಕ್ಷಕ ಲೋಕೇಶ್ವರಪ್ಪ, ಕಮಲಾಪುರ ಸಿಪಿಐ ಶಿವಶಂಕರ ಸಾಹು, ಪಿಎಸ್‌ಐಗಳಾದ ಮಂಜುನಾಥರೆಡ್ಡಿ, ಆಶಾ, ಸಿಬ್ಬಂದಿಗಳಾದ ಕುಪೇಂದ್ರ, ರಾಮಚಂದ್ರ, ಶರಣಬಸಪ್ಪ, ಬುದ್ದು ರಾಠೊಡ್, ಸಿದ್ದಲಿಂಗ, ಬಲರಾಮ ಅವರನ್ನು ಒಳಗೊಂಡ ತಂಡ ರಚಿಸಲಾಗಿತ್ತು.

ಈ ತಂಡ ತನಿಖೆ ನಡೆಸಿ ಕಾಳಗಿ ತಾಲ್ಲೂಕಿನ ಹೆಬ್ಬಾಳ ಗ್ರಾಮದ ಶಿವು ಅಲಿಯಾಸ್ ಶಿವಾನಂದ ತಂದೆ ಬಸವರಾಜ ರಾಜಾಪೂರ (27) ಎಂಬಾತನನ್ನು ಬಂಧಿಸುವಲ್ಲಿ ಯಶಸ್ವಿಯಾಗಿದೆ ಎಂದು ತಿಳಿಸಿದರು.

ಶಿವು ಅಲಿಯಾಸ್ ಶಿವಾನಂದ ಗುಜರಾತ ಮೂಲದ ಕಲಬುರಗಿಯ ಶಿವನಗರ ನಿವಾಸಿಯಾದ ಆರತಿ ಅಲಿಯಾಸ್ ಗುಂಡಮ್ಮ ಗಂಡ ಅನಿಲ ಜೋಷಿ (35) ಎಂಬ ಮಹಿಳೆ ಜೊತೆ ಅಕ್ರಮ ಸಂಬಂಧ ಹೊಂದಿದ್ದ. ಆರತಿ ಮದುವೆ ಮಾಡಿಕೊಳ್ಳುವಂತೆ ಹಠ ಹಿಡಿದಿದ್ದರಿಂದ ಅವರನ್ನು ಏ.5 ರಂದು ಕಲಬುರಗಿ ದೇವಿನಗರದಿಂದ ಕಾರಿನಲ್ಲಿ ದೇವಲಗಾಣಗಾಪುರಕ್ಕೆ ಕರೆದುಕೊಂಡು ಹೋಗಿ ಮರಳಿ ಕಲಬುರಗಿಗೆ ಬಂದಿದ್ದ. ನಂತರ ಕಿಣ್ಣಿ ಸಡಕ್ ಸೀಮಾಂತರದಲ್ಲಿ ಕಾರಿನಲ್ಲಿಯೇ ಕತ್ತು ಹಿಸುಕಿ ಕೊಲೆ ಮಾಡಿ ಸಾಕ್ಷಿನಾಶ ಪಡಿಸುವ ಸಂಬಂಧ ಶವವನ್ನು ಸುಟ್ಟು ಹಾಕಿ ಮಹಿಳೆ ಮೈಮೇಲೆ ಇದ್ದ ಬೆಳ್ಳಿ, ಬಂಗಾರ ಆಭರಣ ತೆಗೆದುಕೊಂಡು ಹೋಗಿದ್ದ ಎಂದು ವಿವರಿಸಿದರು. ಆರೋಪಿಯಿಂದ ಮೃತಳ ಮೈಮೇಲೆ ಇದ್ದ ಬೆಳ್ಳಿ ಬಂಗಾರದ ಆಭರಣ, ಮೊಬೈಲ್ ಮತ್ತು ಕೃತ್ಯಕ್ಕೆ ಬಳಸಿದ ಕಾರನ್ನು ಜಪ್ತಿ ಮಾಡಿ ಆರೋಪಿಯನ್ನು ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗಿದೆ ಎಂದು ತಿಳಿಸಿದರು.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.
Editor: Ramesh Reddy, Office Ph. No: +91 9449732000.